ಸಂಪುಟ: 05 ಸಂಚಿಕೆ: 105 ಪುಟಗಳು: 08 ಶನಿವಾರ 28 ಜೂನ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833

₹5

**ಮುಂಜಾನೆ ಮಾತು**

ಪ್ರತಿಯೊಬ್ಬ ವ್ಯಕ್ತಿಯು ತನ್ನದೇ ಆದ ಶಕ್ತಿಯನ್ನು ಅಥವಾ ಸಾಮರ್ಥ್ಯವನ್ನು ಹೊಂದಿರುತ್ತಾನೆ. ಅದನ್ನು ಜಾಗೃತಗೊಳಿಸುವುದು ಅವಶ್ಯಕವಾಗಿದೆ.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ವಂದೇ ಭಾರತ್ ಎಕ್ಸ್‌ಪ್ರೆಸ್‌ನಲ್ಲಿ ಕಾಣಿಸಿಕೊಂಡ ಬೆಂಕಿ!

• ಉದಯವಾಹಿನಿ, ದಾವಣಗೆರೆ

ಧಾರವಾಡದಿಂದ ಬೆಂಗಳೂರಿಗೆ ಹೋಗುತ್ತಿದ್ದ ವಂದೇ ಭಾರತ್ ಎಕ್ಸ್‌ಪ್ರೆಸ್ ದಾವಣಗೆರೆ ಬಳಿ ತಾಂತ್ರಿಕ ದೋಷಕ್ಕೀಡಾಗಿದೆ. ರೈಲಿನ ಚಕ್ರದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಸಿಬ್ಬಂದಿಯ ಸಮಯ ಪ್ರಜ್ಞೆಯಿಂದ ದುರಂತ ತಪ್ಪಿದೆ. ಮುನ್ನೆಚ್ಚರಿಕೆಯ ಕ್ರಮವಾಗಿ ರೈಲಿನ ಸಂಚಾರ ಸ್ಥಗಿತಗೊಳಿಸಲಾಗಿದೆ. ಹರಿಹರ ಮತ್ತು ದಾವಣಗೆರೆ ನಿಲ್ದಾಣಗಳ ನಡುವೆ ಮಧ್ಯಾಹ್ನ 3.30ಕ್ಕೆ ಈ ಸಮಸ್ಯೆ ಉಂಟಾಯಿತು. ಆದರೆ, ಚಾಲಕ ರೈಲನ್ನು ನಿಧಾನವಾಗಿ ದಾವಣಗೆರೆ ರೈಲು ನಿಲ್ದಾಣಕ್ಕೆ ತಲುಪಿಸುವಲ್ಲಿ ಯಶಸ್ವಿಯಾದರು. ತಕ್ಷಣವೇ ರೈಲ್ವೆ ಅಧಿಕಾರಿಗಳು ಬದಲಿ ವ್ಯವಸ್ಥೆ ಮಾಡಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಟ್ಟರು. ತಾಂತ್ರಿಕ ಸಿಬ್ಬಂದಿ ತಪಾಸಣೆ ನಡೆಸಿದಾಗ ಅ1 ಕೋಚ್‌ನಲ್ಲಿ ಹಾಟ್ ಆಕ್ಸಲ್ ಸಮಸ್ಯೆ ಇರುವುದು ಪತ್ತೆಯಾಯಿತು. ರೈಲಿನ ಚಕ್ರದ ಅಚ್ಚು ಕಾದಿರುವುದು ಅತಿಯಾದ ತಾಪಮಾನ, ಹೊಗೆ ಅಥವಾ ಚಕ್ರದಿಂದ ಅಸಾಮಾನ್ಯ ಶಬ್ದಗಳು ಬಂದರೆ, ಅದು ಹಾಟ್ ಆಕ್ಸಲ್‌ನ ಸೂಚನೆಯಾಗಿರುತ್ತದೆ. ಹೀಗಾಗಿ ಸಮಸ್ಯೆ ಕಾಣಿಸಿಕೊಂಡಿದೆ ಎಂದು ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ. ನೈರುತ್ಯ ರೈಲ್ವೆ ಅಧಿಕಾರಿಗಳು ದಾವಣಗೆರೆ ನಿಲ್ದಾಣದಲ್ಲಿ ರೈಲನ್ನು ನಿಲ್ಲಿಸಿ, ಅಲ್ಲಿದ್ದ 502 ಪ್ರಯಾಣಿಕರಿಗೆ ಬೇರೆ ವ್ಯವಸ್ಥೆ ಮಾಡಿದರು.

## 5 ಮೆಗಾವ್ಯಾಟ್ ವಿದ್ಯುತ್ ಉತ್ಪಾದನಾ ಘಟಕ ಆರಂಭ

• ಉದಯವಾಹಿನಿ, ಬೆಂಗಳೂರು

ನವೀಕರಿಸಬಹುದಾದ ಇಂಧನ ಉತ್ಪಾದನೆಯಲ್ಲಿ ಭಾರತ ದೇಶ ಮಹತ್ವದ ಮೈಲಿಗಲ್ಲು ಸಾಧಿಸುತ್ತಿದ್ದು, ಸೋಲಾರ್-ಬ್ಯಾಟರಿ ವಿದ್ಯುತ್ ಸ್ಟೋರೇಜ್ ಸಿಸ್ಟಮ್‌ಗೆ ಕೇಂದ್ರ ಸರ್ಕಾರ ಪ್ರಾಮುಖ್ಯತೆ ನೀಡುತ್ತಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹೇಳಿದರು. ಅತ್ಯಾಧುನಿಕ ಉತ್ಪಾದನಾ ಘಟಕ ಉದ್ಘಾಟಿಸಿ ಮಾತನಾಡಿದ ಸಚಿವರು, ನವೀಕರಿಸಬಹುದಾದ ಇಂಧನ ಉತ್ಪಾದನೆಯಲ್ಲಿ ಭಾರತ ಬಹುದೊಡ್ಡ ಹೆಜ್ಜೆಯಿಟ್ಟಿದ್ದು, ಈಗಾಗಲೇ 230 ಮೆಗಾವ್ಯಾಟ್ ಉತ್ಪಾದನಾ ಹಂತ ದಾಟಿದೆ ಎಂದರು.

ಬೆಂಗಳೂರು ಸಮೀಪದ ಬಿಡದಿಯಲ್ಲಿ 5 ಮೆಗಾವ್ಯಾಟ್ ವಿದ್ಯುತ್ ಉತ್ಪಾದನಾ ಘಟಕ ಆರಂಭಿಸಿದ್ದು, ಕರ್ನಾಟಕಕ್ಕೆ ಇದು ದೊಡ್ಡ ಕೊಡುಗೆಯಾಗಲಿದೆ ಎಂದ ಸಚಿವರು, ಭಾರತ 2030ರ ವೇಳೆಗೆ 500 ಮೆಗಾವ್ಯಾಟ್ ಸಾಧಿಸುವ ಗುರಿ ಹೊಂದಿದ್ದು, ಈ ನಿಟ್ಟಿನಲ್ಲಿ ಕರ್ನಾಟಕದ ಕೊಡುಗೆ ಸಹ ತುಂಬಾ ಗಮನಾರ್ಹವಾಗಿದೆ. ಸುಸ್ಥಿರ ಇಂಧನ ಭವಿಷ್ಯಕ್ಕೆ ಇದು ದಾರಿ ಮಾಡಿಕೊಡುತ್ತಿದೆ ಎಂದು ಅಭಿಪ್ರಾಯಿಸಿದರು.

## ಪೊಲೀಸ್ ಇಲಾಖೆಗೆ ಸಿಎಂ ನೀಡಿದ ಮಹತ್ವದ ಸೂಚನೆಗಳು

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯದಲ್ಲಿ ಅಪರಾಧಗಳ ಪ್ರಮಾಣ ಕಡಿಮೆ ಆಗಿರುವುದು ಸಮಾಧಾನದ ಸಂಗತಿಯಾದರೂ ಪೊಲೀಸರ ತನಿಖೆಯ ಗುಣಮಟ್ಟ ಕಡಿಮೆಯಾಗಿದ್ದು ಇದನ್ನು ಹೆಚ್ಚಿಸಬೇಕಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚಿಸಿದರು.

ರಾಜ್ಯ ಪೊಲೀಸ್ ಮಹಾ ನಿರ್ದೇಶಕರ ಕಚೇರಿಯಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳ ಸಭೆ ಮತ್ತು ಪೊಲೀಸ್ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಈ ಸೂಚನೆಗಳನ್ನು ಸಿಎಂ ನೀಡಿದರು. ದ್ವೇಷ ಭಾಷಣ ಮಾಡುವವರ ವಿರುದ್ಧ, ಜನರ-ರಾಜ್ಯದ ನೆಮ್ಮದಿ ಕೆಡಿಸುವವರ ವಿರುದ್ಧ ಸ್ವಯಂಪ್ರೇರಿತ ಕ್ರಮ ಏಕೆ ತೆಗೆದುಕೊಳ್ಳುತ್ತಿಲ್ಲ: ಅಧಿಕಾರಿಗಳಿಗೆ ಖಾರವಾಗಿ ಮುಖ್ಯಮಂತ್ರಿಗಳು ಪ್ರಶ್ನಿಸಿದರು. ಬೀದರ್ ನಲ್ಲಿ ನಡೆದ ದರೋಡೆ ಪ್ರಕರಣದ ಆರೋಪಿ ಯಾರು ಎಂದು ಗೊತ್ತಾಗಿದ್ದರೂ 5 ತಿಂಗಳುಗಳಿಂದ ಆತನನ್ನು ಬಂಧಿಸದೇ ಇರುವುದನ್ನು ಸಭೆಯಲ್ಲಿ ಸಿಎಂ ಉಲ್ಲೇಖಿಸಿ ಹೇಳಿದರು.

## ಕಾವೇರಿ ಆರತಿ ಪ್ರಶ್ನಿಸಿದ ಪಿಐಎಲ್ ವಿಚಾರಣೆ:ಪ್ರತಿಮೆಗೆ ಮಾತ್ರ ಟೆಂಡರ್

• ಉದಯವಾಹಿನಿ, ಬೆಂಗಳೂರು

'ಕೃಷ್ಣರಾಜ ಸಾಗರ (ಕೆಆರ್‌ಎಸ್) ಅಣೆಕಟ್ಟೆ ಬಳಿ ಕಾವೇರಿ ಪ್ರತಿಮೆ ಸ್ಥಾಪನೆಗೆ ಮಾತ್ರ ಟೆಂಡರ್ ನೀಡಿದ್ದು ಪ್ರತಿಮೆ ಸ್ಥಾಪನೆಗೆ ಈಗಾಗಲೇ ತಾಂತ್ರಿಕ ತಜ್ಞರ ಅನುಮತಿ ಪಡೆಯಲಾಗಿದೆ ಎಂದು ಅಡ್ವಕೇಟ್ ಜನರಲ್ ಹೈಕೋರ್ಟ್‌ಗೆ ಸ್ಪಷ್ಟಪಡಿಸಿದರು.

'ಗಂಗಾ ಆರತಿ ಮಾದರಿಯಲ್ಲಿ ಕಾವೇರಿ ಆರತಿ ಆಯೋಜಿಸುವ ರಾಜ್ಯ ಸರ್ಕಾರದ ತೀರ್ಮಾನ ಪ್ರಶ್ನಿಸಿ ರೈತ ಸಂಘದ ನಾಯಕಿ ಮಂಡ್ಯ ಜಿಲ್ಲೆಯ ಸುನಂದಾ ಜಯರಾಂ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಹಂಗಾಮಿ ಮುಖ್ಯ ನ್ಯಾಯಮೂರ್ತಿ ವಿ.ಕಾಮೇಶ್ವರ್ ರಾವ್ ನೇತೃತ್ವದ ವಿಭಾಗೀಯ ನ್ಯಾಯಪೀಠ ಶುಕ್ರವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಅರ್ಜಿದಾರರ ಪರ ಹಿರಿಯ ವಕೀಲ ಎಂ.ಶಿವಪ್ರಕಾಶ್, ಕೆಆರ್‌ಎಸ್ ಬಳಿ 120 ಅಡಿ ಎತ್ತರದ ಕಾವೇರಿ ಪ್ರತಿಮೆ ಸ್ಥಾಪಿಸಲಾಗುತ್ತಿದೆ. ಈ ಕುರಿತಂತೆ ನಡೆಯುತ್ತಿರುವ ಕಾಮಗಾರಿ ಚಟುವಟಿಕೆಗಳ ಫೋಟೊಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ ಎಂದು ವಿವರಿಸಿದರು.

## ಕರ್ನಾಟಕ ರಾಜಕಾರಣದಲ್ಲಿ ಸೆಪ್ಟೆಂಬರ್ ಕ್ರಾಂತಿ ಆಟ

# ಸೀಟಿಗಾಗಿ ಕೈ ಕಚ್ಚಾಟ!

### ಕೆಎನ್ ರಾಜಣ್ಣರ ಹೇಳಿಕೆಯ ನಂತರ ರಾಜ್ಯ ರಾಜಕಾರಣದಲ್ಲಿ ಸೆಪ್ಟೆಂಬರ್

## ಕ್ರಾಂತಿಯ ಬಗ್ಗೆ ಬಿಸಿ ಬಿಸಿ ಚರ್ಚೆ



**ಸಿಎಂ ಸ್ಥಾನ ಬದಲಾವಣೆ ಆಗುತ್ತಾ?**

ಕಾಂಗ್ರೆಸ್ ಪಕ್ಷದಲ್ಲಿ ಮುಖ್ಯಮಂತ್ರಿ ಸ್ಥಾನ ಬದಲಾವಣೆ ಬಗ್ಗೆಯೂ ನಡೆಯುತ್ತಿದೆ ಗಂಭೀರ ಚರ್ಚೆ

ಸೆಪ್ಟೆಂಬರ್ ಕ್ರಾಂತಿಯ ಸಮಯದಲ್ಲಿ ಸಚಿವ ಸಂಪುಟ ಪುನಾರಚನೆಯ ಸಾಧ್ಯತೆ

ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ ಬಗ್ಗೆಯೂ ಇದೆ ಬೇಡಿಕೆ, ಈ ಹುದ್ದೆಗೆ ಮುಂಚೂಣಿಯಲ್ಲಿದ್ದಾರೆ ಜಾರಕಿಹೊಳಿ, ಖಂಡ್ರೆ





• ಉದಯವಾಹಿನಿ, ಬೆಂಗಳೂರು

ಸೆಪ್ಟೆಂಬರ್ ಕ್ರಾಂತಿ! ಸದ್ಯ ರಾಜ್ಯ ರಾಜಕಾರಣದಲ್ಲಿ, ಕಾಂಗ್ರೆಸ್ ಪಕ್ಷದಲ್ಲಿ ನಡೆಯುತ್ತಿರುವ ಮಹತ್ವದ ಚರ್ಚೆ. ಹಿರಿಯ ಸಚಿವ ಕೆಎನ್ ರಾಜಣ್ಣ ನೀಡಿರುವ ಈ ಹೇಳಿಕೆ ನಾನಾ ಆಯಾಮದಲ್ಲಿ ವಿಶ್ಲೇಷಣೆಗೆ ಒಳಗಾಗುತ್ತಿದೆ. ರಾಜಣ್ಣ ಹೇಳಿಕೆಗೆ ಹಿರಿಯ ಸಚಿವರು, ಶಾಸಕರು ಪ್ರತಿಕ್ರಿಯೆ ನೀಡುತ್ತಿದ್ದು, ತಮ್ಮದೇ ಆದ ಸಮರ್ಥನೆಗಳನ್ನು ಕೊಡುತ್ತಿದ್ದಾರೆ.



ಅಷ್ಟಕ್ಕೂ ಸೆಪ್ಟೆಂಬರ್ ಕ್ರಾಂತಿಯನ್ನು ಏನೆಲ್ಲಾ ಬದಲಾವಣೆಗಳು ಆಗಲಿದೆ ಈ ನಾಲ್ಕು ಮಹತ್ವದ ವಿಚಾರಗಳಲ್ಲಿ ಯಾವುದು ಸತ್ಯವಾಗಲಿದೆ ಎಂಬ ಕುತೂಹಲ ಕೆರಳಿಸಿದೆ.

**ಸಿಎಂ ಸ್ಥಾನದಲ್ಲಿ ಬದಲಾವಣೆ:** ಹಾಗಾದರೆ ಸೆಪ್ಟೆಂಬರ್ ಕ್ರಾಂತಿಯಲ್ಲಿ ಸಿಎಂ ಸ್ಥಾನ ಬದಲಾವಣೆ ಆಗುತ್ತಾ ಈಗಾಗಲೇ ರಾಜ್ಯ ಕಾಂಗ್ರೆಸ್ ಸರ್ಕಾರ ಎರಡು ವರ್ಷ ಒಂದು ತಿಂಗಳು ಪೂರೈಸಿದೆ. ಸೆಪ್ಟೆಂಬರ್ ತಿಂಗಳಿಗೆ ಇನ್ನು 60 ದಿನಗಳು ಇವೆ. ಈ 60 ದಿನಗಳಲ್ಲಿ ಮುಖ್ಯಮಂತ್ರಿ ಸ್ಥಾನ ಬದಲಾವಣೆ ಆಗಲಿದ್ಯಾ ಎಂಬ ಪ್ರಶ್ನೆ ಸಹಜವಾಗಿ ಕಾಡಲು ಶುರುವಾಗಿದೆ. ಕೆಎನ್ ರಾಜಣ್ಣ ಅವರು ಸಿದ್ದರಾಮಯ್ಯ ಆಪ್ತ ವಲಯದಲ್ಲಿ ಗುರುತಿಸಿಕೊಂಡವರು. ಐದು ವರ್ಷವೂ ಸಿದ್ದರಾಮಯ್ಯ ಸಿಎಂ ಆಗಬೇಕು ಎನ್ನುತ್ತಿರುವವರು. ಹೀಗಿರುವಾಗ ಅವರ ಮಾತಿನ ಅರ್ಥ ಸಿಎಂ ಬದಲಾವಣೆ ಎಂಬುವುದು ಖಂಡಿತಾ ಅಲ್ಲ ಎಂಬ ಅಭಿಪ್ರಾಯ ಇದೆ.

**ಸಂಪುಟ ಪುನಾರಚನೆ:** ಸೆಪ್ಟೆಂಬರ್ ಕ್ರಾಂತಿಯಲ್ಲಿ ಸಂಪುಟ ಪುನಾರಚನೆ ಆಗಲಿದ್ಯಾ, ಇಲ್ಲವೇ ಎನ್ನುವುದು ಇನ್ನೊಂದು ಪ್ರಶ್ನೆಯಾಗಿದೆ. ಈಗಾಗಲೇ ಸಂಪುಟ ಪುನಾರಚನೆಗೆ ಕಸರತ್ತು ನಡೆಯುತ್ತಿದೆ.

ಕಳೆದ ಎರಡು ವರ್ಷಗಳಲ್ಲಿ ಸಚಿವರ ಪೈಕಿ ಕೆಲವರು ಸಕ್ರಿಯವಾಗಿಲ್ಲ. ಇಲಾಖೆಯ ಕೆಲಸ ಕಾರ್ಯ ಅಷ್ಟೇ ಅಲ್ಲ, ಸರ್ಕಾರವನ್ನೂ ಸೂಕ್ತವಾಗಿ ಸಮರ್ಥಿಸುತ್ತಿಲ್ಲ. ಹೀಗಿರುವಾಗ ಸಂಪುಟ ಪುನಾಚರನೆ ಮಾಡಬೇಕು ಎಂಬ ಅಭಿಪ್ರಾಯ ಬಲವಾಗಿದೆ. ಆದರೆ ಡಿಸೆಂಬರ್ ವರೆಗೆ ಇದೆಲ್ಲಾ ನಡೆಯುವುದಿಲ್ಲ ಎಂದು ಇತ್ತೀಚೆಗೆ ಬಿ ಕೆ ಹರಿಪ್ರಸಾದ್ ಹೇಳಿದ್ದರು. ಆದರೆ ಸೆಪ್ಟೆಂಬರ್ ಕ್ರಾಂತಿಯಲ್ಲಿ ಸಂಪುಟ ಪುನಾರಚನೆ ಸಾಧ್ಯತೆ ಹೆಚ್ಚಿದೆ ಎಂಬ ಅಭಿಪ್ರಾಯ ಇದೆ.

**ಸಿದ್ದರಾಮಯ್ಯ ಸಿಎಂ ಫಿಕ್ಸ್!**

ಮುಂದಿನ 2 ವರ್ಷ ಹಾಗೂ 11 ತಿಂಗಳು ಸಿದ್ದರಾಮಯ್ಯ ಸಿಎಂ ಸ್ಥಾನ ಫಿಕ್ಸ್. ಸೆಪ್ಟೆಂಬರ್‌ನಲ್ಲಿ ಯಾವ ಕ್ರಾಂತಿಯೂ ಇಲ್ಲ ಎಂದು ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಸ್ಪಷ್ಟಪಡಿಸಿದರು. ಸೆಪ್ಟೆಂಬರ್ ಕ್ರಾಂತಿ ಏನು ಅಂತ ರಾಜಣ್ಣಗೆ ಕೇಳಬೇಕು. ಯಾವುದೇ ಕ್ರಾಂತಿಯೂ ಆಗಲ್ಲ. ಸಿಎಂ ಸ್ಥಾನ ಬದಲಾವಣೆಯಂತೂ ಆಗುವುದೇ ಇಲ್ಲ ಎಂದು ಸ್ಪಷ್ಟಪಡಿಸಿದರು.ಸಿಎಂನ ಬದಲಾವಣೆ ಯಾರು ಮಾಡಬೇಕು ನಾವೇ ಅಲ್ವಾ ನಾನೂ ಕೂಡ ಒಬ್ಬ ಓಟರ್, ಸಿಎಂ ಗೆ ಈಗಲೂ ಬಹುಮತ ಇದೆ. ಸಿದ್ದರಾಮಯ್ಯ ಗೆ ಇರುವಷ್ಟು ಜನ ಬೆಂಬಲ ಯಾರಿಗೂ ಇಲ್ಲ. ಆದರೆ ಸಿದ್ದರಾಮಯ್ಯ ನಾಟ್ ಎ ವೀಕ್ ಚೀಫ್ ಮಿನಿಸ್ಟರ್ ಎಂದು ಬ್ಯಾಟಿಂಗ್ ಮಾಡಿದರು.

**ಹೆಚ್ಚುವರಿ ಡಿಸಿಎಂ ಸ್ಥಾನ**

ಸೆಪ್ಟೆಂಬರ್ ಕ್ರಾಂತಿಯಲ್ಲಿ ಹೆಚ್ಚುವರಿ ಡಿಸಿಎಂ ಸ್ಥಾನ ನೇಮಕಕ್ಕೆ ಹೈಕಮಾಂಡ್ ಮುಂದಾಗುತ್ತಾ ಎಂಬ ಕುತೂಹಲ ಇದೆ. ರಾಜ್ಯದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಅವರ ಪ್ರಭಾವ ತಗ್ಗಿಸಲು ಒಂದಿಷ್ಟು ಹಿರಿಯ ನಾಯಕರು ಕಸರತ್ತು ನಡೆಸುತ್ತಿದ್ದಾರೆ. ಡಿಕೆಶಿ ಕೆಪಿಸಿಸಿ ಅಧ್ಯಕ್ಷ ಸ್ಥಾನದ ಜೊತೆಗೆ ಡಿಸಿಎಂ ಹುದ್ದೆ ಹೊಂದಿದ್ದಾರೆ. ಅಲ್ಲದೆ ಎರಡೆರಡು ಪ್ರಭಾವ ಖಾತೆಗಳನ್ನು ಹೊಂದಿದ್ದಾರೆ. ಒಬ್ಬರಿಗೇ ಇಷ್ಟೊಂದು ಹುದ್ದೆ ಏಕೆ ಎಂಬ ಪ್ರಶ್ನೆಯನ್ನು ಕೇಳಲಾಗುತ್ತಿದೆ. ಹೀಗಿರುವಾಗ ನಾಲ್ಕು ಡಿಸಿಎಂ ಹುದ್ದೆಯನ್ನು ಸೃಷ್ಟಿ ಮಾಡಲಾಗುತ್ತಾ ಎಂಬ ಪ್ರಶ್ನೆ ಉದ್ಭವಿಸಿದೆ. ಡಿಸಿಎಂ ಹುದ್ದೆ ಸೃಷ್ಟಿಯಾದಲ್ಲಿ ಕೆಎನ್ ರಾಜಣ್ಣ, ಜಮೀರ್ ಅಹಮದ್ ಖಾನ್, ಪರಮೇಶ್ವರ್, ಎಂಬಿ ಪಾಟೀಲ್ ಪ್ರಬಲ ಆಕಾಂಕ್ಷಿಗಳಾಗಿದ್ದಾರೆ.

**ಕಾಂಗ್ರೆಸ್ ಸರ್ಕಾರದಲ್ಲಿ ಡೀಲರ್ಸ್‌ಗಳ ನೆಟ್‌ವರ್ಕ್**



'ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಡೀಲರ್ಸ್‌ಗಳ ನೆಟ್ ವರ್ಕ್ ಇದೆ. ಮಂತ್ರಿಗಳು ಸೇರಿದಂತೆ ಹಲವರು ಪಾಲುದಾರರಾಗಿದ್ದಾರೆ ಎಂದು ಜೆಡಿಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದರು. ರಾಜ್ಯದಲ್ಲಿ ಸರ್ಕಾರದ ಯೋಜನೆಯ ಲಾಭ ಪಡೆದುಕೊಳ್ಳಲು ಬ್ರೋಕರ್‌ಗಳನ್ನೇ ಅವಲಂಬಿಸಬೇಕಾಗಿದೆ. ನೇರವಾಗಿ ಯಾವುದೇ ಕೆಲಸ ಆಗುವುದಿಲ್ಲ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಆಡಳಿತಾರೂಢ ಪಕ್ಷದ ವಿರುದ್ಧ ಸ್ವಪಕ್ಷೀಯರೇ ಅಸಮಾಧಾನ ಹೊರ ಹಾಕುತ್ತಿದ್ದಾರೆ. ಮಂತ್ರಿಗಳ ಮಾತನ್ನು ಯಾರೂ ಕೇಳುತ್ತಿಲ್ಲ. ಗ್ರಾಮ ಪಂಚಾಯಿತಿ ಸದಸ್ಯರು ಬ್ರೋಕರ್‌ಗಳ ಮೂಲಕ ಮನೆಗಳನ್ನು ಮಂಜೂರು ಮಾಡಿಸಿಕೊಳ್ಳಬೇಕಾದ ಸ್ಥಿತಿ ಇದೆ ಎಂದು ದೂರಿದರು.

1. ಕರ್ನಾಟಕ ಕಾಂಗ್ರೆಸ್ ಮೇಲೆ ಹಿಡಿತ ಕಳೆದುಕೊಳ್ಳುತ್ತಿರುವ ಕಾಂಗ್ರೆಸ್ ಹೈಕಮಾಂಡ್
2. ಆಗಸ್ಟ್ ಅಥವಾ ಸೆಪ್ಟಂಬರ್ ನಲ್ಲಿ ರಾಜ್ಯ ಕಾಂಗ್ರೆಸ್ ರಾಜಕೀಯದಲ್ಲಿ ಬದಲಾವಣೆ
3. ಸಹಕಾರ ಸಚಿವ ಕೆಎನ್ ರಾಜಣ್ಣ , ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿಕೆ

**ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ**

ಸೆಪ್ಟೆಂಬರ್ ಕ್ರಾಂತಿಯ ಬಗ್ಗೆ ಕೊನೆಯ ಕುತೂಹಲ ಇರುವುದು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಬದಲಾವಣೆ. ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ ಮಾಡಬೇಕು ಎಂಬ ಅಭಿಪ್ರಾಯ ಹಲವು ಕಾಲದಿಂದ ಇದೆ. ಇದಕ್ಕಾಗಿ ಬೇಡಿಕೆಗಳನ್ನು ಇಡಲಾಗುತ್ತಿದೆ. ಆದರೆ ಹೈಕಮಾಂಡ್ ಯಾವುದೇ ಹೆಜ್ಜೆ ಇಟ್ಟಿರಲಿಲ್ಲ. ಸದ್ಯ ಸತೀಶ್ ಜಾರಕಿಹೊಳಿ, ಈಶ್ವರ್ ಖಂಡ್ರೆ ಈ ಹುದ್ದೆಗೆ ಪ್ರಬಲ ಆಕಾಂಕ್ಷಿಗಳಾಗಿದ್ದಾರೆ. ಹೀಗಾಗಿ ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ ಮಾಡಿದರೆ ಮುಂದಿನ ಅವಧಿಯಲ್ಲಿ ಪಕ್ಷ ಸಂಘಟನೆ ಬಲಪಡಿಸಿ, ಚುನಾವಣೆ ಎದುರಿಸುವ ಲೆಕ್ಕಾಚಾರವೂ ಇದೆ. ಒಟ್ಟಿನಲ್ಲಿ ರಾಜಣ್ಣ ಹೇಳಿಕೆ ನಾನಾ ರೀತಿಯಲ್ಲಿ ವಿಶ್ಲೇಷಣೆಗೆ ಒಳಗಾಗುತ್ತಿದೆ. ಅಂತಿಮವಾಗಿ ಸೆಪ್ಟೆಂಬರ್ ಕ್ರಾಂತಿ ಯಶಸ್ವಿಯಾಗುತ್ತಾ ಕ್ರಾಂತಿಯಲ್ಲಿ ಯಾವ ಬಣದ ಕೈ ಮೇಲಾಗುತ್ತೆ ನಿಜಕ್ಕೂ ಕ್ರಾಂತಿ ನಡೆಯುತ್ತಾ ಎಂಬುದು ಭಾರೀ ಕುತೂಹಲಕ್ಕೆ ಕಾರಣವಾಗಿದೆ.

## ಬಿಜೆಪಿ 'ಕಳ್ಳಾಟ ದೇಶದ ಜನಕ್ಕೆ ಗೊತ್ತಿದೆ: ಸಿಎಂ ಕಿಡಿ

### ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ನಿಲುವನ್ನು ದೇಶಕ್ಕೆ ಸ್ಪಷ್ಟಪಡಿಸಬೇಕು ಎಂದು ಆಗ್ರಹ

• ಉದಯವಾಹಿನಿ, ಬೆಂಗಳೂರು

ಸಂವಿಧಾನದ ಪೀಠಿಕೆಯಿಂದ 'ಸಮಾಜವಾದ ಮತ್ತು 'ಜಾತ್ಯತೀತ ಪದಗಳನ್ನು ಕೈಬಿಡಬೇಕೆಂಬ ಆರೆಸ್ಸೆಸ್‌ನ ಪ್ರಧಾನ ಕಾರ್ಯದರ್ಶಿ ದತ್ತಾತ್ರೇಯ ಹೊಸಬಾಳೆ ಹೇಳಿಕೆಗೆ ಸಿಎಂ ಸಿದ್ದರಾಮಯ್ಯ ತೀವ್ರ ಆತಂಕ ವ್ಯಕ್ತಪಡಿಸಿದ್ದು, ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಸ್ಪಷ್ಟ ನಿಲುವನ್ನು ದೇಶದ ಮುಂದಿಡಬೇಕು, ಎಂದು ಆಗ್ರಹಿಸಿದ್ದಾರೆ.

**ದತ್ತಾತ್ರೇಯ ಹೊಸಬಾಳೆ ಹೇಳಿಕೆಗೆ ಕೆಂಡಾಮಂಡಲ**

ಭಾರತವು ಸಮಾಜವಾದಿ ಮತ್ತು ಜಾತ್ಯತೀತ ರಾಷ್ಟ್ರ ಎಂದು ಎಲ್ಲರೂ ಅರ್ಥಮಾಡಿಕೊಂಡಿದ್ದ ಕಾರಣ ಸಂವಿಧಾನದ ಮೂಲಪೀಠಿಕೆಯಲ್ಲಿ ಈ ಪದ ಆರಂಭದಲ್ಲಿ ಸೇರ್ಪಡೆಯಾಗಿರಲಿಲ್ಲ. ಆದರೆ, ಜಾತ್ಯತೀತತೆ ಮತ್ತು ಸಮಾಜವಾದದ ಮೇಲೆ ಆರೆಸ್ಸೆಸ್ ಮತ್ತು ಜನಸಂಘ ದಾಳಿ ಮಾಡಲು ಆರಂಭಿಸಿದ ಹಿನ್ನೆಲೆಯಲ್ಲಿ ಇಂದಿರಾ ಗಾಂಧಿಯವರು ಪ್ರಧಾನಿಯಾಗಿದ್ದಾಗ 42ನೇ ಸಂವಿಧಾನ ತಿದ್ದುಪಡಿ ಮೂಲಕ ಈ ಪದಗಳನ್ನು ಸೇರ್ಪಡೆ ಮಾಡಿದ್ದರು, ಎಂದು ಸಮರ್ಥಿಸಿದ್ದಾರೆ.

ಸಂವಿಧಾನವನ್ನು ಆರೆಸ್ಸೆಸ್ ವಿರೋಧಿಸುತ್ತಿರುವುದು ಹೊಸ ಬೆಳವಣಿಗೆ ಅಲ್ಲ. ಅಂಬೇಡ್ಕರ್ ಅವರು ಸಂವಿಧಾನವನ್ನು ದೇಶಕ್ಕೆ ಅರ್ಪಿಸುತ್ತಿದ್ದಂತೆ ಅದನ್ನು ವಿರೋಧಿಸಿ ಆರೆಸ್ಸೆಸ್ ಮುಖವಾಣಿಯಾದ ಆರ್ಗನೈಸರ್ ಪತ್ರಿಕೆ ಸಂಪಾದಕೀಯ ಬರೆದಿತ್ತು. ಈ ಸಂವಿಧಾನದಲ್ಲಿ ಭಾರತೀಯತೆಯಾಗಲಿ, ಪುರಾತನ ಭಾರತದ ಕಟ್ಟಳೆಗಳಾಗಲಿ ಇಲ್ಲ ಎಂದು ಟೀಕಿಸಿತ್ತು. ಮನುಸ್ಮೃತಿಯೇ ನಿಜವಾದ ಹಿಂದೂ ಕಾನೂನು ಮತ್ತು ಅದೇ ಹಿಂದೂಗಳ ಪೂಜನೀಯ ಗ್ರಂಥ. ಈ ಮನುಸ್ಮೃತಿಯ ಆಶಯಗಳು ಸಂವಿಧಾನದಲ್ಲಿ ಇಲ್ಲ ಎಂದು ವಿ.ಡಿ. ಸಾವರ್ಕರ್ ಹೇಳಿದ್ದರು ಎಂದು ಸಿಎಂ ಉಲ್ಲೇಖಿಸಿದ್ದಾರೆ.

ಸಂವಿಧಾನದ ಬಗ್ಗೆ ಆರೆಸ್ಸೆಸ್ ಮತ್ತು ಅದರ ನಾಯಕರು



ಬಹಿರಂಗವಾಗಿ ವ್ಯಕ್ತಪಡಿಸಿರುವ ಈ ಅಭಿಪ್ರಾಯವನ್ನು ಬಿಜೆಪಿ ಈವರೆಗೆ ತಿರಸ್ಕರಿಸಿಲ್ಲ. ಬದಲಿಗೆ ಕಮಲ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದಾಗೆಲ್ಲ ಆರೆಸ್ಸೆಸ್ ನಾಯಕರು ಮತ್ತು ಬಿಜೆಪಿಯ ಕೆಳಹಂತದ ನಾಯಕರು ಸಂವಿಧಾನ ಬದಲಾವಣೆ ಕೂಗು ಹಾಕುತ್ತಾ 'ಟೆಸ್ಟ್ ಡೋಸ್' ಕೊಡುತ್ತಾ ಜನರ ನಾಡಿಮಿಡಿತ ಪರೀಕ್ಷಿಸುವ ಪ್ರಯತ್ನ ಮಾಡುತ್ತಿರುತ್ತಾರೆ. ಬಿಜೆಪಿ ಈ ಕಳ್ಳಾಟವನ್ನು ದೇಶದ ಪ್ರಜ್ಞಾವಂತ ಜನ ಅರ್ಥಮಾಡಿಕೊಂಡಿದ್ದಾರೆ, ಎಂದು ಹೇಳಿದ್ದಾರೆ.

ಲೋಕಸಭಾ ಚುನಾವಣೆಯಲ್ಲಿ ತಮ್ಮ ಪಕ್ಷ 400 ಸ್ಥಾನ ಗೆದ್ದರೆ ಸಂವಿಧಾನ ಬದಲಾಯಿಸುವುದಾಗಿ ಘೋಷಣೆ ಮಾಡಿದ್ದ ಬಿಜೆಪಿ ಅದಕ್ಕೆ ತಕ್ಕ ಉತ್ತರ ಪಡೆದಿದೆ. ಒಂದಷ್ಟು ಜಾತ್ಯತೀತ ನಿಲುವಿನ ಪಕ್ಷಗಳು ಅಧಿಕಾರ ಲಾಲಸೆಯಿಂದ ರಾಜಿ ಮಾಡಿಕೊಳ್ಳದಿದ್ದರೆ ಬಿಜೆಪಿ ಪ್ರತಿಪಕ್ಷ ಸ್ಥಾನದಲ್ಲಿ ಕೂರಬೇಕಾಗಿತ್ತು. ಬಿಜೆಪಿ ತನ್ನ ಕುಟಿಲ ಪ್ರಯತ್ನ ಮುಂದುವರಿಸಿದರೆ ದೇಶದ ಜನತೆ ಬಿಜೆಪಿಗೆ ತಕ್ಕ ಪಾಠ ಕಲಿಸುವುದು ನಿಶ್ಚಿತ, ಎಂದು ಎಚ್ಚರಿಸಿದ್ದಾರೆ.


## ಬೆಂಗಳೂರಿನಲ್ಲಿ ತಲೆ ಎತ್ತಲಿದೆ 60 ಸಾವಿರ ಸೀಟ್‌ನ ಬೃಹತ್ ಸ್ಟೇಡಿಯಂ

### ■ 50 ಎಕರೆ ಜಾಗ ಗುರುತು ಮಾಡಿದ ಸರ್ಕಾರ ■ ಚೆನ್ನಸ್ವಾಮಿ ಕ್ರೀಡಾಂಗಣ ಕಾಲ್ತುಳಿತದಿಂದ ಎಚ್ಚೆತ್ತುಕೊಂಡ ಸರ್ಕಾರ

• ಉದಯವಾಹಿನಿ, ಬೆಂಗಳೂರು

ಚಿನ್ನಸ್ವಾಮಿ ಕ್ರೀಡಾಂಗಣ ಕಾಲ್ತುಳಿತದಿಂದ ಎಚ್ಚೆತ್ತುಕೊಂಡ ಸರ್ಕಾರವು ಬೆಂಗಳೂರಿನಲ್ಲಿ ಮತ್ತೊಂದು ಹೊಸ ಸ್ಟೇಡಿಯಂ ನಿರ್ಮಾಣಕ್ಕೆ ಮುಂದಾಗಿದೆ. ಈಗಾಗಲೇ ಅದಕ್ಕಾಗಿ 50 ಎಕರೆ ಜಾಗ ಗುರುತಿಸಲಾಗಿದೆ.

ಈ ಬಗ್ಗೆ ಡಿಸಿಎಂ, ಬೆಂಗಳೂರು ಅಭಿವೃದ್ಧಿ ಸಚಿವ ಡಿಕೆ ಶಿವಕುಮಾರ್ ಮಾಹಿತಿ ಹಂಚಿಕೊಂಡಿದ್ದಾರೆ. ನಗರದಲ್ಲಿ ಏನೂ ಕೊರತೆಯಾಗದಂತೆ ಯೋಜನೆ ರೂಪಿಸಲಾಗುತ್ತಿದೆ. 60 ಸಾವಿರ ಪ್ರೇಕ್ಷಕರು ಕುಳಿತುಕೊಳ್ಳುವಂತಹ ನೂತನ ಸ್ಟೇಡಿಯಂ ನಿರ್ಮಾಣ ಮಾಡಲಾಗುವುದು ಇದಕ್ಕಾಗಿ 50 ಎಕರೆ ಜಾಗ ಗುರುತಿಸಲಾಗಿದೆ ಎಂದು ತಿಳಿಸಿದ್ದಾರೆ. ಆದರೆ, ಬೆಂಗಳೂರಿನ ಯಾವ ಸ್ಥಳದಲ್ಲಿ ಈ ಹೊಸ ಸ್ಟೇಡಿಯಂ ತಲೆ ಎತ್ತಲಿದೆ ಎಂದು ಸುಳಿವು ಬಿಟ್ಟುಕೊಟ್ಟಿಲ್ಲ.



ಬಾಬು ಜಗಜೀವನ್ ರಾಮ್ ಭವನದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡರ 516ನೇ ಜಯಂತಿಯ ಅಂಗವಾಗಿ ನಡೆದ ನೂತನ ಕೆಂಪೇಗೌಡ ಭವನ ಭೂಮಿಪೂಜೆ ಹಾಗೂ ಕೆಂಪೇಗೌಡ ಅಂತಾರಾಷ್ಟ್ರೀಯ ಪ್ರಶಸ್ತಿ ವಿತರಣೆ ಕಾರ್ಯಕ್ರಮದಲ್ಲಿ ಡಿಕೆ ಶಿವಕುಮಾರ್ ಅವರು ಮಾತನಾಡಿದರು.

ಕೆಂಪೇಗೌಡರು ಹುಟ್ಟಿದ್ದು ಒಕ್ಕಲಿಗರಾಗಿ, ಬದುಕು ನಡೆಸಿದ್ದು ವಿಶ್ವಮಾನವರಾಗಿ ಹುಟ್ಟಿದಾಗ ಭೂಮಿಯು ಮೇಲಿರುತ್ತೇವೆ. ಸತ್ತಾಗ ಭೂಮಿ ಕೆಳಗಿರುತ್ತೇವೆ. ಆದರೆ ನಮ್ಮ ಸಾಧನೆಗಳು ಮೇಲಿರುತ್ತವೆ. ಅದೇ ರೀತಿ ಕೆಂಪೇಗೌಡರ ಸಾಧನೆಗಳು ಶಾಶ್ವತ. ಕೆಂಪೇಗೌಡರು ಹುಟ್ಟಿದ್ದು ಒಕ್ಕಲಿಗರಾಗಿ ಆದರೆ ಬದುಕು ನಡೆಸಿದ್ದು, ಸಮಾಜಕ್ಕೆ ಸಂದೇಶ ನೀಡಿದ್ದು ವಿಶ್ವಮಾನವರಾಗಿ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

**ಕಾವೇರಿ 6 ನೇ ಹಂತದ ಯೋಜನೆಗೆ ಸಿದ್ಧತೆ**

ಕಾವೇರಿ 5ನೇ ಹಂತದ ಯೋಜನೆ ಪೂರ್ಣಗೊಳಿಸಿ 110 ಹಳ್ಳಿಗಳಿಗೆ ನೀರು ನೀಡುತ್ತಿದ್ದೇವೆ. 6ನೇ ಹಂತದ ಕಾವೇರಿ ಕುಡಿಯುವ ನೀರಿನ ಯೋಜನೆಗೆ ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ. ಬೆಂಗಳೂರಿನ ಅಭಿವೃದ್ಧಿಗೆ ಬೇಕಾದಷ್ಟು ಶ್ರಮ



ಪಡುತ್ತಿದ್ದೇವೆ. ಸಿಕ್ಕಿರುವ ಅವಕಾಶದಲ್ಲಿ ಸಾಕ್ಷಿಗುಡ್ಡೆ ನಿರ್ಮಾಣ ಮಾಡಲಾಗುವುದು ಎಂದರು.

ಬೆಂಗಳೂರು ನಗರದ ಅಭಿವೃದ್ಧಿ ತುಂಬಾ ಸರಳವಾದ ಕೆಲಸವಲ್ಲ. ಇಲ್ಲಿನ ಜನಸಂಖ್ಯೆ, ವಾಹನಗಳ ಸಂಖ್ಯೆ, ಎಲ್ಲವನ್ನು ಗಮನದಲ್ಲಿಟ್ಟುಕೊಂಡು ಹೊಸ ರೂಪವನ್ನು ನೀಡಬೇಕು ಎಂದು ನಾನು ಸಚಿವನಾಗಿ ಬಂದ ದಿನದಿಂದ ಪ್ರಯತ್ನ ಮಾಡುತ್ತಿದ್ದೇನೆ.

**1 ಲಕ್ಷ ಕೋಟಿ ಮೊತ್ತದ ಯೋಜನೆಗಳಿಗೆ ಸಿದ್ಧತೆ**

ಬೆಂಗಳೂರಿನ ಸಮಗ್ರ ಅಭಿವೃದ್ಧಿಗೆ ಸುಮಾರು 1 ಲಕ್ಷ ಕೋಟಿ ಮೊತ್ತದ ಯೋಜನೆಗಳಿಗೆ ನಾವು ಸಿದ್ಧತೆ ಮಾಡಿಕೊಂಡಿದ್ದೇವೆ. ಮನೆ ಬಾಗಿಲಿಗೆ ನಂಬಿಕೆ ನಕ್ಷೆ ಎನ್ನುವ ಯೋಜನೆ ತಲುಪಿಸುತ್ತಿದ್ದೇವೆ. ಸುಮಾರು 25 ಲಕ್ಷ ಆಸ್ತಿ ದಾಖಲೆಗಳನ್ನು ಡಿಜಿಟಲೀಕರಣ ಮಾಡಿ ಮನೆ ಬಾಗಿಲಿಗೆ ಉಚಿತವಾಗಿ ತಲುಪಿಸಲಾಗುತ್ತಿದೆ. ಕೃಷ್ಣ ಬೈರೇಗೌಡರ ಕ್ಷೇತ್ರದಲ್ಲಿ ಪ್ರಾಯೋಗಿಕ ಕೆಲಸ ನಡೆಯುತ್ತಿದೆ ಎಂದರು.ಕೆಂಪೇಗೌಡರ ಭವನ ನಿರ್ಮಾಣಕ್ಕೆ ಐದು ಎಕರೆ ಜಮೀನನ್ನು ಒಂದೇ ವಾರದಲ್ಲಿ ಕ್ಯಾಬಿನೆಟ್ ಮುಂದೆ ತಂದು ಒಪ್ಪಿಗೆ ಪಡೆಯಲಾಯಿತು. ಸಮಾಜಕಲ್ಯಾಣ ಇಲಾಖೆಗೆ ಸೇರಿದ ಜಾಗವನ್ನು ಸಚಿವರಾದ ಮಹದೇವಪ್ಪ ಅವರಿಂದ ಒಪ್ಪಿಗೆ ಪಡೆದು ಈಗ ಭವ್ಯ ಕಟ್ಟಡ ನಿರ್ಮಾಣಕ್ಕೆ ಬಳಕೆ ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಸುಮನಹಳ್ಳಿಯಲ್ಲಿ ಮೆಟ್ರೋ ಮಾರ್ಗ ಕೂಡ ಹಾದು ಹೋಗಲಿದೆ ಎಂದು ಹೇಳಿದರು.

ಸುಮಾರು 40 ಕಿಲೋ ಮೀಟರ್ ನಷ್ಟು ಟನಲ್ ರಸ್ತೆ ನಿರ್ಮಾಣಕ್ಕೆ ಮುಂದಾಗಿದ್ದು, ರೂ.17 ಸಾವಿರ ಕೋಟಿ ವೆಚ್ಚದಲ್ಲಿ ಟೆಂಡರ್ ಗೆ ಸಿದ್ಧತೆ ಮಾಡುತ್ತಿದ್ದೇವೆ. 118 ಕಿ.ಮೀ ಮೇಲ್ಸೇತುವೆ ನಿರ್ಮಾಣಕ್ಕೆ ತೀರ್ಮಾನ ಮಾಡಿದ್ದೇವೆ ಎಂದು ಹೇಳಿದರು.

ಬೆಂಗಳೂರು ವಿವಿ ವ್ಯಾಪ್ತಿಯಲ್ಲಿ 100 ಕೋಟಿ ವೆಚ್ಚದಲ್ಲಿ ಸಂಶೋಧನಾ ಕೇಂದ್ರ ಕೂಡ ನಿರ್ಮಾಣ ಮಾಡಲಾಗುತ್ತಿದೆ. ಕೆಂಪೇಗೌಡರ ಹೆಸರಿನಲ್ಲಿ ಭವ್ಯ ಕಟ್ಟಡ ನಿರ್ಮಾಣಕ್ಕೆ ಜಿಬಿಸಿಯಿಂದ 100 ಕೋಟಿ ಮೀಸಲಿಟ್ಟಿದ್ದೇವೆ. ಮೂರ್ನಾಲ್ಕು ಜನ ಕಟ್ಟಡ ವಾಸ್ತುಶಿಲ್ಪಿಗಳು ವಿನ್ಯಾಸ ನೀಡಿದ್ದಾರೆ. ಈ ವಿಷಯದ ಬಗ್ಗೆ ನಿರ್ಮಲಾನಂದನಾಥ ಶ್ರೀಗಳ ಗಮನಕ್ಕೂ ತರಲಾಗುವುದು ಎಂದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,802/Gram24ct ₹8,985/Gram22ct ಬೆಳ್ಳಿ: ₹107.90/Gram

# 2025-26ನೇ ಸಾಲಿನ ಅತಿಥಿ ಉಪನ್ಯಾಸಕರ ನೇಮಕಕ್ಕೆ ಶಿಕ್ಷಣ ಇಲಾಖೆ ಆದೇಶ

• ಉದಯವಾಹಿನಿ, ಬೆಂಗಳೂರು

2025-26ನೇ ಶೈಕ್ಷಣಿಕ ಸಾಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ನೇಮಕಕ್ಕೆ ಕಾಲೇಜು ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ.

ಈ ಮೂಲಕ ಯುಜಿಸಿ ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗದಿತ ವಿದ್ಯಾರ್ಹತೆಯನ್ನು ಪಡೆದುಕೊಳ್ಳಲು 3 ವರ್ಷಗಳ ಕಾಲಾವಕಾಶ ನೀಡಬೇಕು. 3 ವರ್ಷಗಳ ನಂತರ ಯುಜಿಸಿ ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಸಂಪೂರ್ಣವಾಗಿ ನಿರ್ಬಂಧಿಸಬೇಕು, ಎರಡು ವರ್ಷ ಸ್ನಾತಕೋತ್ತರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಶೇ.25ರಷ್ಟು ಗಣನೆಗೆ ಗರಿಷ್ಠ 25 ಅಂಕಗಳಿಗೆ ಮಿತಿಗೊಳಿಸಲಾಗಿದೆ. ಈ ಪ್ರಕ್ರಿಯೆಯನ್ನು ಆ.4ರ ಒಳಗೆ ಮುಗಿಸಲು ಇಲಾಖೆ ಆದೇಶಿಸಿದೆ.

# ಉಚಿತ ಟಿಕೆಟ್ ಘೋಷಣೆಯಿಂದ ಕಾಲ್ತುಳಿತ: ದಯಾನಂದ್

• ಉದಯವಾಹಿನಿ, ಬೆಂಗಳೂರು

ಉಚಿತ ಟಿಕೆಟ್ ಎಂದು ಘೋಷಣೆ ಮಾಡಿದ್ದರಿಂದ ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಕಾಲ್ತುಳಿತ ಸಂಭವಿಸಿತು ಎಂದು ಅಮಾನತಾಗಿರುವ ಐಪಿಎಸ್ ಅಧಿಕಾರಿ ದಯಾನಂದ್ ತಿಳಿಸಿದ್ದಾರೆ ಎಂಬ ವಿಚಾರ ಮೂಲಗಳಿಂದ ತಿಳಿದು ಬಂದಿದೆ. ಆರ್‌ಸಿಬಿ ವಿಜಯೋತ್ಸವ ವೇಳೆ ಚಿನ್ನಸ್ವಾಮಿ ಸ್ಟೇಡಿಯಂ ಬಳಿ ನಡೆದ ಕಾಲ್ತುಳಿತ ಪ್ರಕರಣದ ಮ್ಯಾಜಿಸ್ಟ್ರೇಟ್ ತನಿಖೆ ಮುಕ್ತಾಯದ ಹಂತಕ್ಕೆ ಬಂದಿದೆ.

ವಿಚಾರಣೆಯ ಪ್ರಮುಖ ಭಾಗವಾದ ದಯಾನಂದ್ ಅವರ ಹೇಳಿಕೆಯನ್ನು ದಾಖಲು ಮಾಡಲಾಗಿದೆ. ಮ್ಯಾಜಿಸ್ಟ್ರೇಟ್ ಮುಂದೆ ಗುರುವಾರ ವಿಚಾರಣೆಗೆ ಹಾಜರಾದ ದಯಾನಂದ್ ಅಂದು ನಡೆದ ಘಟನೆಯನ್ನು ಸಂಪೂರ್ಣವಾಗಿ ವಿವರಿಸಿದ್ದಾರೆ. ಘಟನೆ ನಡೆದ ದಿನ 21 ಗೇಟ್‌ಗಳಿಗೂ ನಾನೇ ಖುದ್ದಾಗಿ ಭೇಟಿ ನೀಡಿದ್ದೆ. ಸಂಪೂರ್ಣವಾಗಿ ಬಂದೋಬಸ್ತ್ ಮಾಡಿಕೊಳ್ಳಲಾಗಿತ್ತು. ಪ್ರತಿ ಬಾರಿ ಐಪಿಎಲ್ ಮ್ಯಾಚ್ ನಡೆಯುವಾಗ ಇರುವಷ್ಟು ಬಂದೋಬಸ್ತ್ ಮಾಡಿಕೊಳ್ಳಲಾಗಿತ್ತು. ಆದರೆ ಅಂದು ಗೇಟ್ ತೆಗೆಯಲು ತಡಮಾಡಿದ್ದರು. ಉಚಿತ ಟಿಕೆಟ್ ಎಂದು ಘೋಷಣೆ ಮಾಡಿದ್ದರಿಂದ ಇಷ್ಟೆಲ್ಲ ಅವಾಂತರ ನಡೆದಿದೆ ಎಂದು ಹೇಳಿಕೆ ದಾಖಲಿಸಿದ್ದಾರೆ.

# ಹಾಡ ಹಗಲೇ 2 ಕೋಟಿ ದರೋಡೆ

• ಉದಯವಾಹಿನಿ, ಬೆಂಗಳೂರು

ಹಾಡ ಹಗಲೇ ಉದ್ಯಮಿಯೊಬ್ಬರಿಗೆ ಚಾಕುವಿನಿಂದ ಹೆದರಿಸಿ 2 ಕೋಟಿ ರೂ. ಹಣ ದರೋಡೆ ಮಾಡಿಕೊಂಡು ಡಕಾಯಿತರು ಪರಾರಿಯಾಗಿರುವ ಘಟನೆ ವಿದ್ಯಾರಣ್ಯಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಕೆಂಗೇರಿ ನ್ಯೂಟೌನ್ ನಿವಾಸಿ, ಉದ್ಯಮಿ ಶ್ರೀಹರ್ಷ ಹಣ ಕಳೆದುಕೊಂಡವರು. ಕೆಂಗೇರಿ ಉಪನಗರದಲ್ಲಿ ಶ್ರೀಹರ್ಷ ಅವರು ಕಂಪನಿಯೊಂದನ್ನು ನಡೆಸುತ್ತಿದ್ದು, ಕೋಲ್ಡ್ ಪ್ರೇಸೀಡ್ ಆಯಿಲ್ ಎಂಬ ಉದ್ಯಮ ಆರಂಭಿಸುವ ಸಲುವಾಗಿ ತಮ್ಮ ಬಳಿ ಇದ್ದ ಹಾಗೂ ಸ್ನೇಹಿತರ ಬಳಿ ಸಾಲವಾಗಿ ಪಡೆದುಕೊಂಡಿದ್ದ ಹಣ ಸೇರಿಸಿ ಒಟ್ಟು 2 ಕೋಟಿ ರೂ. ಹಣ ಒಟ್ಟುಗೂಡಿಸಿದ್ದಾರೆ. ಹೊಸ ಉದ್ಯಮಕ್ಕೆ ಯಂತ್ರೋಪಕರಣಗಳು ಜರ್ಮನಿಯಲ್ಲಿ ಲಭ್ಯವಿರುವುದರಿಂದ ತಮ್ಮ ಬಳಿ ಇದ್ದ 2 ಕೋಟಿ ರೂ. ಹಣವನ್ನು ಯುಎಸ್‌ಡಿಟಿ ಕರೆನ್ಸಿಗೆ ಪರಿವರ್ತಿಸುವ ಸಲುವಾಗಿ ಸ್ನೇಹಿತ ರಕ್ಷಿತ್ ಹಾಗೂ ಪರಿಚಯಸ್ಥ ಪ್ರಕಾಶ್ ಅಗರವಾಲ್‌ಗೆ ತಿಳಿಸಿದ್ದಾರೆ. ಈ ಇಬ್ಬರು ನಾರಾಯಣ ಭರತ್ ಎಂಬುವವರನ್ನು ಶ್ರೀಹರ್ಷ ರವರಿಗೆ ಪರಿಚಯಿಸಿದ್ದಾರೆ. ನಾರಾಯಣ ಭರತ್ ಅವರು ಬೆಂಜಮಿನ್ ಹರ್ಷ ಎಂಬುವವರನ್ನು ಪರಿಚಯಿಸಿ ಇವರ ಕಡೆಯಿಂದ ನಿಮ್ಮ ಕೆಲಸ ಆಗುತ್ತದೆಂದು ತಿಳಿಸಿದ್ದಾರೆ. ನಂತರದ ದಿನದಲ್ಲಿ ಬೆಂಜಮಿನ್ ಹರ್ಷ ಅವರಿಗೆ ಕರೆ ಮಾಡಿ 2 ಕೋಟಿ ರೂ. ಹಣವನ್ನು ಯುಎಸ್‌ಡಿಟಿ ಕರೆನ್ಸಿಗೆ ಪರಿವರ್ತಿಸಿ ಕೊಡುವ ಬಗ್ಗೆ ಶ್ರೀಹರ್ಷ ಕೇಳಿಕೊಂಡಾಗ, ಹಣವನ್ನು ತೆಗೆದುಕೊಂಡು ವಿದ್ಯಾರಣ್ಯಪುರದ ಎಂಎಸ್ ಪಾಳ್ಯ ಸರ್ಕಲ್ ಬಳಿ ಬರುವಂತೆ ತಿಳಿಸಿದ್ದಾರೆ. ಜೂ.25 ರಂದು ಶ್ರೀಹರ್ಷ ರವರು 2 ಕೋಟಿ ರೂ. ಹಣವನ್ನು ತೆಗೆದುಕೊಂಡು ಸ್ನೇಹಿತರಾದ ನಾಗೇಂದ್ರ ಜೊತೆ ಮತ್ತೊಬ್ಬ ಸ್ನೇಹಿತ ಶಾಂತಕುಮಾರ್ ರವರ ಕಾರಿನಲ್ಲಿ ಎಂಎಸ್ ಪಾಳ್ಯ ಸರ್ಕಲ್ ಬಳಿ ಮಧ್ಯಾಹ್ನ 3 ಗಂಟೆ ಸುಮಾರಿಗೆ ಹೋಗಿದ್ದಾರೆ.

# ಬೊಮ್ಮಾಯಿ ವಿರುದ್ಧದ 2 ಕ್ರಿಮಿನಲ್ ಪ್ರಕರಣ ರದ್ದುಗೊಳಿಸಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ರೈತರು ಮತ್ತು ದೇವಾಲಯಗಳ ಆಸ್ತಿ ಅತಿಕ್ರಮಣಕ್ಕೆ ಸಂಬಂಧಿಸಿದಂತೆ ವಕ್ಫ್ ಮಂಡಳಿ ಹಾಗೂ ರಾಜ್ಯ ಸರ್ಕಾರದ ವಿರುದ್ಧದ ಪ್ರತಿಭಟನಾ ರ್‍ಯಾಲಿಯಲ್ಲಿ ಪ್ರಚೋದನಕಾರಿ ಹೇಳಿಕೆ ನೀಡಿದ ಆರೋಪದ ಮೇಲೆ ಬಿಜೆಪಿ ನಾಯಕ ಮತ್ತು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಿರುದ್ಧ ದಾಖಲಾಗಿದ್ದ ಎರಡು ಕ್ರಿಮಿನಲ್ ಪ್ರಕರಣಗಳನ್ನು ಕರ್ನಾಟಕ ಹೈಕೋರ್ಟ್ ಶುಕ್ರವಾರ ರದ್ದುಗೊಳಿಸಿದೆ. ಧರ್ಮ ಅಥವಾ ಜನಾಂಗದ ಆಧಾರದ ಮೇಲೆ ವಿವಿಧ ಗುಂಪುಗಳ ನಡುವೆ ದ್ವೇಷ ಉತ್ತೇಜಿಸುವುದಕ್ಕೆ ಸಂಬಂಧಿಸಿದಂತೆ ಭಾರತೀಯ ನ್ಯಾಯ ಸಂಹಿತೆ(ಬಿಎನ್‌ಎಸ್) ಸೆಕ್ಷನ್ 196(1)(ಎ) ಅಡಿಯಲ್ಲಿ ಹಾವೇರಿ ಜಿಲ್ಲೆಯ ಸವಣೂರು ಹಾಗೂ ಶಿಗ್ಗಾಂವಿ ಪೊಲೀಸ್ ಠಾಣೆಗಳಲ್ಲಿ ಬೊಮ್ಮಾಯಿ ವಿರುದ್ಧ ಕೇಸ್ ದಾಖಲಿಸಲಾಗಿತ್ತು. ತಮ್ಮ ವಿರುದ್ಧದ ಕೇಸ್ ರದ್ದು ಕೋರಿ ಬೊಮ್ಮಾಯಿ ಅವರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್ ಆರ್ ಕೃಷ್ಣಕುಮಾರ್ ಅವರು, ಮಾಜಿ ಸಿಎಂ ವಿರುದ್ಧದ ಎರಡು ಕೇಸ್ ಗಳನ್ನು ರದ್ದುಗೊಳಿಸಿ ಆದೇಶ ಹೊರಡಿಸಿದ್ದಾರೆ. ಬೊಮ್ಮಾಯಿ ಪರವಾಗಿ ವಾದಿಸಿದ ಹಿರಿಯ ವಕೀಲ ಪ್ರಭುಲಿಂಗ್ ಕೆ ನಾವದಗಿ ಅವರು, ದೂರುಗಳು ಸೆಕ್ಷನ್ 196(1)(ಎ) ಅಡಿಯಲ್ಲಿ ಅಪರಾಧವೆಂದು ಪರಿಗಣಿಸಲು ಅಗತ್ಯವಾದ ಪ್ರಚೋದನಕಾರಿ ಅಂಶಗಳು ಇಲ್ಲ ಎಂದು ಹೇಳಿದರು.

# ಬೆಂಗಳೂರಿನಲ್ಲಿ 60 ಸಾವಿರ ಪ್ರೇಕ್ಷಕರ ಸ್ಥಳಾವಕಾಶದ ನೂತನ ಸ್ಟೇಡಿಯಂ

• ಉದಯವಾಹಿನಿ, ಬೆಂಗಳೂರು

60 ಸಾವಿರ ಪ್ರೇಕ್ಷಕರು ಕುಳಿತುಕೊಳ್ಳುವಂತಹ ನೂತನ ಸ್ಟೇಡಿಯಂ ನಿರ್ಮಾಣ ಮಾಡಲಾಗುವುದು ಇದಕ್ಕಾಗಿ 50 ಎಕರೆ ಜಾಗ ಗುರುತಿಸಲಾಗಿದೆ. ಕಾವೇರಿ 5ನೇ ಹಂತದ ಯೋಜನೆ ಪೂರ್ಣಗೊಳಿಸಿ 110 ಹಳ್ಳಿಗಳಿಗೆ ನೀರು ನೀಡುತ್ತಿದ್ದೇವೆ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದ್ದಾರೆ. ಬಾಬು ಜಗಜೀವನ್ ರಾಮ್ ಭವನದಲ್ಲಿ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡರ 516ನೇ ಜಯಂತಿಯ ಅಂಗವಾಗಿ ನಡೆದ ನೂತನ ಕೆಂಪೇಗೌಡ ಭವನ ಭೂಮಿಪೂಜೆ ಹಾಗೂ ಕೆಂಪೇಗೌಡ ಅಂತಾರಾಷ್ಟ್ರೀಯ ಪ್ರಶಸ್ತಿ ವಿತರಣೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಮಾತನಾಡಿದರು. 6ನೇ ಹಂತದ ಕಾವೇರಿ ಕುಡಿಯುವ ನೀರಿನ ಯೋಜನೆಗೆ ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ. ಬೆಂಗಳೂರಿನ ಅಭಿವೃದ್ಧಿಗೆ ಬೇಕಾದಷ್ಟು ಶ್ರಮ ಪಡುತ್ತಿದ್ದೇವೆ. ಸಿಕ್ಕಿರುವ ಅವಕಾಶದಲ್ಲಿ ಸಾಕ್ಷಿ ಗುಡ್ಡೆ ನಿರ್ಮಾಣ ಮಾಡಲಾಗುವುದು'' ಎಂದರು. ಹುಟ್ಟಿದಾಗ ಭೂಮಿ ಮೇಲಿರುತ್ತೇವೆ. ಸತ್ತಾಗ ಭೂಮಿ ಕೆಳಗಿರುತ್ತೇವೆ. ಆದರೆ ನಮ್ಮ ಸಾಧನೆಗಳು ಮೇಲಿರುತ್ತವೆ. ಅದೇ ರೀತಿ ಕೆಂಪೇಗೌಡರ ಸಾಧನೆಗಳು ಶಾಶ್ವತ. ಕೆಂಪೇಗೌಡರು ಹುಟ್ಟಿದ್ದು ಒಕ್ಕಲಿಗರಾಗಿ ಆದರೆ ಬದುಕು ನಡೆಸಿದ್ದು, ಸಮಾಜಕ್ಕೆ ಸಂದೇಶ ನೀಡಿದ್ದು ವಿಶ್ವಮಾನವರಾಗಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ''ವಿಶ್ವದೆಲ್ಲೆಡೆ ಬೆಂಗಳೂರಿನ ಕೀರ್ತಿ ಹರಡಿದೆ. ಈ ನಗರದ ಅಭಿವೃದ್ಧಿಗೆ ಕೆಂಪೇಗೌಡರೇ ಸ್ಫೂರ್ತಿ ಎಂಬುದನ್ನು ನಾವು ಮರೆಯಬಾರದು. 500 ವರ್ಷಗಳ ಹಿಂದೆಯೇ ಮಾದರಿ ಆಡಳಿತಕ್ಕೆ ಅಡಿಪಾಯ ಹಾಕಿದವರು. ಎಲ್ಲಾ ಜಾತಿ, ಧರ್ಮಗಳಿಗೆ ಅವಕಾಶ ನೀಡಿ ಸಮಾಜಕ್ಕೆ ಸಂದೇಶ ನೀಡಿದವರು'' ಎಂದು ತಿಳಿಸಿದರು.



# 2 ವರ್ಷಗಳ ಬಳಿಕ ಒಎಫ್‌ಸಿ ಅಳವಡಿಕೆಗೆ ಬಿಬಿಎಂಪಿ ಅಸ್ತು!

## 11 ಟೆಲಿಕಾಂ, 2 ನಾನ್ ಟೆಲಿಕಾಂ ಹಾಗೂ 10 ಇಂಟರ್ನೆಟ್ ಸರ್ವೀಸ್ ಪ್ರೊವೈಡರ್‌ಗಳಿಂದ ಕೇಬಲ್ ಅಳವಡಿಕೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಒಎಫ್‌ಸಿ ಜಂಕ್ಷನ್ ಅಳವಡಿಕೆಗೆ 3 ಸಾವಿರ ರೂ.**

ಮೊಬೈಲ್‌ನಿಂದ ಹಿಡಿದು ದೈತ್ಯ ಐಟಿ-ಬಿಟಿ ಕಂಪನಿಗಳ ಉಸಿರೆನಿಸಿರುವ ಆಪ್ಟಿಕಲ್ ಫೈಬರ್ ಕೇಬಲ್ ಒಎಫ್‌ಸಿ ಅಳವಡಿಕೆಗೆ ಮಹಾನಗರದಲ್ಲಿ ವಿಧಿಸಿದ್ದ ನಿರ್ಬಂಧವನ್ನು ಬಿಬಿಎಂಪಿ ಸಡಿಲಗೊಳಿಸಿದೆ. ಸುಮಾರು ಎರಡು ವರ್ಷಗಳ ಬಳಿಕ ಒಎಫ್‌ಸಿ ಅಳವಡಿಕೆಗೆ ಅನುಮತಿ ನೀಡಲು ನಿರ್ಧರಿಸಿದೆ.

ಹೊಸತಾಗಿ ನಿರ್ಮಿಸಿದ್ದ ರಸ್ತೆಗಳನ್ನೂ ಒಎಫ್‌ಸಿ ಅಳವಡಿಕೆ ಸಲುವಾಗಿ ಕೆಲವು ಸಂಸ್ಥೆಗಳು ಅಗೆದು ಹಾಕಿದ್ದವು. ಹೊಸದಾಗಿ ಡಾಂಬರು ಹಾಕಿದ ರಸ್ತೆಗಳಲ್ಲೂ ಗುಂಡಿಗಳು ಕಾಣಿಸಿಕೊಂಡ ಬಗ್ಗೆ ಸಾರ್ವಜನಿಕರಿಂದ ಟೀಕೆ ವ್ಯಕ್ತವಾಗಿತ್ತು. ಈ ಹಿನ್ನೆಲೆಯಲ್ಲಿ ಒಎಫ್‌ಸಿ ಅಳವಡಿಕೆಗೆ ಅನುಮತಿ ನೀಡದಿರಲು, ನೀಡಿದ್ದ ಅನುಮತಿಗಳನ್ನೇ ರದ್ದುಪಡಿಸುವಂತಹ ಕಠಿಣ ನಿರ್ಧಾರವನ್ನು ಬಿಬಿಎಂಪಿ ತಳೆದಿತ್ತು. ಒಎಫ್‌ಸಿ ಅಳವಡಿಕೆಗೆ ಅನುಮತಿ ನೀಡುವ ವಿಧಾನವನ್ನು ಇನ್ನಷ್ಟು ಕಟ್ಟುನಿಟ್ಟುಗೊಳಿಸುವ ಸಲುವಾಗಿ ಈ ನಿರ್ಧಾರ ಕೈಗೊಳ್ಳಲಾಗಿತ್ತು. ಇದೀಗ ತೀರ್ಮಾನದಿಂದ ಹಿಂದಕ್ಕೆ ಸರಿಯಲಾಗಿದೆ.

ನಗರದಲ್ಲಿ ಒಎಫ್‌ಸಿ ಅಳವಡಿಕೆಗೆ ಅನುಮತಿ ನೀಡಬೇಕೆಂದು ಟೆಲಿಕಾಂ ಸೇವಾ ಕಂಪನಿಗಳು ಮನವಿ ಸಲ್ಲಿಸುತ್ತಲೇ ಇದ್ದವು. ಅಲ್ಲದೆ, ಕೇಂದ್ರ ಸರಕಾರ ನಿಗದಿಪಡಿಸಿರುವಂತೆಯೇ ಪ್ರತಿ ಮೀಟರ್ ಕೇಬಲ್ ಅಳವಡಿಕೆಗೆ 1 ರೂ. ಶುಲ್ಕ ಪಡೆಯುವಂತೆ ಕೋರಿದ್ದವು. ಈ ಶುಲ್ಕ ನೀತಿಯಿಂದ ಪಾಲಿಕೆಗೆ ಕೋಟ್ಯಂತರ ರೂ. ಆದಾಯ ಕೈತಪ್ಪಿ ಹೋಗುತ್ತದೆ. ಹಾಗಾಗಿ, ಪಾಲಿಕೆಯು ಟೆಲಿಕಾಂ ಕಂಪನಿಗಳ ಮನವಿ ತಿರಸ್ಕರಿಸಿದ್ದು, ಪ್ರತಿ ಮೀಟರ್‌ಗೆ 600 ರೂ. ಶುಲ್ಕ ಪಾವತಿಸಿದರಷ್ಟೇ ಅನುಮತಿ ನೀಡುವುದಾಗಿ ಪಟ್ಟು ಹಿಡಿದಿತ್ತು. ಇದನ್ನು ಕಂಪನಿಗಳು ಒಪ್ಪಿಕೊಂಡಿವೆ.

**ಒಎಫ್‌ಸಿ ಹಾವಳಿಗೆ ಬ್ರೇಕ್:** ಪಾಲಿಕೆ ವ್ಯಾಪ್ತಿಯಲ್ಲಿ ಒಎಫ್‌ಸಿ ಅಳವಡಿಕೆಗೆ ಅನುಮತಿ ನೀಡುವುದನ್ನು ಸ್ಥಗಿತಗೊಳಿಸಿದ ಬಳಿಕ ಅನಧಿಕೃತ ಕೇಬಲ್‌ಗಳ ಹಾವಳಿ ಮಿತಿ ಮೀರಿತ್ತು. ಕಂಬದಿಂದ ಕಂಬಕ್ಕೆ, ಮರದಿಂದ ಮರಕ್ಕೆ ತೋರಣ ಕಟ್ಟಿದಂತೆ ಅಳವಡಿಸಿರುವ ಒಎಫ್‌ಸಿ ಕೇಬಲ್‌ಗಳು ಜೋತಾಡುತ್ತಿರುವ ನೋಟವು ಭಯ ಹುಟ್ಟಿಸುತ್ತದೆ. ಇವು ಪಾದಚಾರಿಗಳು ವಾಹನ ಸವಾರರ ಪ್ರಾಣ ತೆಗೆಯುತ್ತಿವೆ. ಅಂತರ್ಜಾಲ ಸೌಲಭ್ಯ ಹೊಂದಿದ ಕಚೇರಿಗಳು, ಲಕ್ಷಾಂತರ ಮನೆಗಳು, ಸಾಫ್ಟ್‌ವೇರ್ ಕಂಪನಿಗಳು, ಕಾಲ್ ಸೆಂಟರ್‌ಗಳು, ವಾಣಿಜ್ಯ ಸಂಸ್ಥೆಗಳು ತಮ್ಮ ಕಾರ್ಯ ಚಟುವಟಿಕೆಗೆ ಒಎಫ್‌ಸಿ ಕೇಬಲ್‌ಗಳನ್ನು ಸಂಪೂರ್ಣವಾಗಿ ಅವಲಂಬಿಸಿವೆ. ಒಂದೆಡೆ ರಸ್ತೆ, ಫುಟ್‌ಪಾತ್‌ಗಳಲ್ಲಿ ನೇತಾಡುವ ಕೇಬಲ್‌ಗಳ ತೆರವಿಗೆ ಪ್ರತಿಭಟಿಸುವ ಜನರೇ, ಅವುಗಳನ್ನು ತೆರವು ಮಾಡಿದಾಗ ಅಂತರ್ಜಾಲ ಸಂಪರ್ಕ ಸೇವೆ ಕಡಿತಗೊಂಡರೆ ತೆರವು ಕಾರ್ಯಾಚರಣೆ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದರು.

**15 ಸಾವಿರ ಕಿ.ಮೀ. ರಸ್ತೆಗಳಲ್ಲಿ ಒಎಫ್‌ಸಿ:** ಪಾಲಿಕೆ ವ್ಯಾಪ್ತಿಯಲ್ಲಿ 2022-13 ರಿಂದ 2024-25 ರವರೆಗೆ ನಾನಾ ಟೆಲಿಕಾಂ ಸೇವಾ ಕಂಪನಿಗಳು 15 ಸಾವಿರ ಕಿ.ಮೀ. ಉದ್ದದಷ್ಟು ಒಎಫ್‌ಸಿ ಕೇಬಲ್‌ಗಳನ್ನು ಅಳವಡಿಸಿವೆ. ಇದರಿಂದ ಬಿಬಿಎಂಪಿಗೆ 1129.14 ಕೋಟಿ ರೂ. ಆದಾಯ ಬಂದಿದೆ.

ಕೆಲವೊಂದು ಕಂಪನಿಗಳು 10 ಕಿ.ಮೀ. ಉದ್ದದ ಒಎಫ್‌ಸಿ ಡಕ್ಟ್‌ಗೆ ಅನುಮತಿ ಪಡೆದುಕೊಂಡು ಹತ್ತು ಪಟ್ಟು ಅಧಿಕ ಡಕ್ಟ್ ಅಳವಡಿಸಿ ಬಿಬಿಎಂಪಿ ಕಣ್ಣಿಗೆ ಮಣ್ಣೆರಚುತ್ತಲೇ ಇವೆ. ಒಂದು ಸಂಸ್ಥೆ ಡಕ್ಟ್ ಅಳವಡಿಕೆಗೆ ಅನುಮತಿ ಪಡೆದರೆ, ಇತರೆ 3-4 ಸಂಸ್ಥೆಗಳು ಅಕ್ರಮವಾಗಿ ಅದರಲ್ಲಿ ಕೇಬಲ್ ಹಾಕುತ್ತಿವೆ. ಟೆಂಡರ್‌ಶ್ಯೂರ್ ರಸ್ತೆಗಳಲ್ಲಿ ರಸ್ತೆ ಅಗೆಯುವುದನ್ನು ತಪ್ಪಿಸಲು 130 ಕಿ.ಮೀ. ಉದ್ದದ ಒಎಫ್‌ಸಿ ಡಕ್ಟ್‌ಗಳನ್ನು ನಿರ್ಮಿಸಲಾಗಿದೆ. ಆದರೆ, ಕೇವಲ 60 ಕಿ.ಮೀ. ಉದ್ದದ ಡಕ್ಟ್‌ನಲ್ಲಿ ಮಾತ್ರ ಶುಲ್ಕ ಪಾವತಿಸಿ ಕೇಬಲ್ ಹಾಕಲಾಗಿದೆ.

### ಅನಧಿಕೃತ ಕೇಬಲ್ ತೆರವಿಗೆ ಮೀನಮೇಷ

**ನಗರದಲ್ಲಿ ಅನಧಿಕೃತವಾಗಿ ಅಳವಡಿಸಿರುವ ಒಎಫ್‌ಸಿ ಕೇಬಲ್‌ಗಳನ್ನು ತೆರವುಗೊಳಿಸುವ ಸಂಪೂರ್ಣ ಹೊಣೆಗಾರಿಕೆಯನ್ನು ಆಯಾ ವಾರ್ಡ್‌ಗಳ ಸಹಾಯಕ ಮತ್ತು ಕಿರಿಯ ಇಂಜಿನಿಯರ್‌ಗಳಿಗೆ ವಹಿಸಲಾಗಿದೆ. ಹಾಗೆಯೇ, ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆಗಳಲ್ಲಿನ ಕೇಬಲ್‌ಗಳನ್ನು ತೆರವುಗೊಳಿಸುವ ಜವಾಬ್ದಾರಿಯನ್ನು ರಸ್ತೆ ಮೂಲಸೌಕರ್ಯ ವಿಭಾಗ ಮತ್ತು ಯೋಜನಾ ವಿಭಾಗದ ಸಹಾಯಕ ಇಂಜಿನಿಯರ್‌ಗಳಿಗೆ ನೀಡಲಾಗಿದೆ. ಆದರೆ, ಅನಧಿಕೃತ ಕೇಬಲ್‌ಗಳ ತೆರವಿಗೆ ಸಂಬಂಧಪಟ್ಟ ಅಧಿಕಾರಿಗಳು ಮೀನಮೇಷ ಎಣಿಸುತ್ತಿದ್ದಾರೆ.**

# ಅಧ್ಯಕ್ಷ ಸ್ಥಾನದ ಅಭ್ಯರ್ಥಿ ಸ್ಥಾನಕ್ಕೆ ಬಿ.ಲಿಂಗೇಶ್ವರ್ ನಾಮಪತ್ರ ಸಲ್ಲಿಕೆ

• ಉದಯವಾಹಿನಿ, ವಿ.ವಿ.ಪುರಂ



ಉದಯವಾಹಿನಿ ಚಿತ್ರ

**ನೂತನ ಕಟ್ಟಡ ನಿರ್ಮಾಣ**

ಕುರುಹಿನಶೆಟ್ಟಿ ಕೇಂದ್ರ ಸಂಘ(ರಿ) 2025ನೇ ಚುನಾವಣೆಯಲ್ಲಿ ಅಧ್ಯಕ್ಷೀಯ ಅಭ್ಯರ್ಥಿ ಶ್ರೀ ಬಿ.ಲಿಂಗೇಶ್ವರ್ ರವರ ನಾಮಪತ್ರ ಸಲ್ಲಿಕೆ ಕಾರ್ಯಕ್ರಮ. ಅಧ್ಯಕ್ಷೀಯ ಅಭ್ಯರ್ಥಿಯಾದ ಬಿ.ಲಿಂಗೇಶ್ವರರವರು ಚುನಾವಣೆಯಾಧಿಕಾರಿಗೆ ನಾಮಪತ್ರ ಸಲ್ಲಿಕೆ ಮಾಡಿದರು, ಸಮಾಜದ ಮುಖಂಡರಾದ ಜಿ. ಸೋಮಣ್ಣರವರು, ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಶ್ರೀಮತಿ ರೂಪಲಿಂಗೇಶ್ವರ್ ಮತ್ತು ರಾಜ್ಯಾದ್ಯಂತ ಕುರುಹಿನಶೆಟ್ಟಿ ಸಮುದಾಯದವರು ಕಾರ್ಯಕರ್ತರು, ಅಭಿಮಾನಿಗಳು ಶ್ರೀ ಬಿ. ಲಿಂಗೇಶ್ವರರವರ ಅಭಿಮಾನಿಗಳು, ಸ್ನೇಹಿತರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಅಧ್ಯಕ್ಷೀಯ ಅಭ್ಯರ್ಥಿ ಬಿ.ಲಿಂಗೇಶ್ವರ್ ರವರು ಮಾತನಾಡಿ ರಾಜ್ಯದಲ್ಲಿ ಕುರುಹಿನ ಶೆಟ್ಟಿ ಸಮಾಜದವರು 15 ಲಕ್ಷಕ್ಕೂ ಹೆಚ್ಚು ಜನರು ಇದ್ದಾರೆ ಹಂಚಿಹೋಗಿರುವ ನಮ್ಮ ಸಮಾಜವನ್ನು ಒಗ್ಗೂಡಿಸುವ ಸಂಘಟನೆ ಮಾಡಲಾಗುತ್ತದೆ.

ಪಾರದರ್ಶಕ ಆಡಳಿತ ಸಮಾಜದ ಏಳಿಗೆಗಾಗಿ ಮತ್ತು ನೂತನ ಕಟ್ಟಡ ನಿರ್ಮಾಣ ಮಾಡಲು ಕಾರ್ಯಯೋಜನೆ ರೂಪಿಸಲಾಗುವುದು. ನೇಕಾರ ಕುಲಕಸಬು ಆಗಿದೆ, ನೇಕಾರ ಉದ್ಯಮ ನಶಿಸಿ ಹೋಗುತ್ತಿದೆ, ನೇಕಾರಿಕೆಗೆ ಪ್ರೋತ್ಸಾಹ, ಸಹಕಾರ ನೀಡಬೇಕು ಈ ಉದ್ಯಮದಲ್ಲಿ ನಮ್ಮ ಸಮಾಜ ಯುವಕರು ಮುಂದೆ ಬರಬೇಕು ಈ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಜೊತೆಯಲ್ಲಿ ಸಮನ್ವಯ ಸಾಧಿಸಿ ಕುರುಹಿನ ಶೆಟ್ಟಿ ಸಮುದಾಯ ಅಭಿವೃದ್ಧಿಗೆ ಶ್ರಮವಹಿಸಲಾಗುವುದು.

ಶಿಕ್ಷಣ ಉದ್ಯೋಗ ಮತ್ತು ರಾಜಕೀಯ ಕ್ಷೇತ್ರದಲ್ಲಿ ಕುರುಹಿನ ಶೆಟ್ಟಿ ಸಮುದಾಯಕ್ಕೆ ಹೆಚ್ಚಿನ ಅವಕಾಶಕ್ಕೆ ಕೊಡಿಸಲು ಹೋರಾಟ ಮಾಡಲಾಗುವುದು.

ಹೋರಾಟ ನಿತ್ಯ ನಿರಂತರ ಕುರುಹಿನಶೆಟ್ಟಿ ಸಮಾಜ ಮುಖ್ಯವಾಹಿನಿಗೆ ಬರಬೇಕು ಎಂಬ ಉದ್ದೇಶ ನನ್ನದು. ರಾಜ್ಯಾದ್ಯಂತ ನಮ್ಮ ತಂಡಕ್ಕೆ ಉತ್ತಮ ಬೆಂಬಲವಿದೆ ಮತ್ತು ಈ ಬಾರಿ ಚುನಾವಣೆಯಲ್ಲಿ ಗೆಲುವು ಸಾಧಿಸಲಿದ್ದೇವೆ ಎಂದು ಹೇಳಿದರು.

# ಬೆಂಗಳೂರು-ಕಣ್ಣೂರು ಎಕ್ಸ್‌ಪ್ರೆಸ್: ಸಮಯ ಪಾಲನೆಗೆ ಆಗ್ರಹ

• ಉದಯವಾಹಿನಿ, ಬೆಂಗಳೂರು



ಬೆಂಗಳೂರು- ಕಣ್ಣೂರು ಎಕ್ಸ್‌ಪ್ರೆಸ್ ರೈಲು (16511) ಕೆಲವು ದಿನಗಳಿಂದ ತೀರಾ ವಿಳಂಬವಾಗಿ ಬರುತ್ತಿದ್ದು, ಇದರಿಂದ ನಿತ್ಯ ಪ್ರಯಾಣಿಸುವವರಿಗೆ ತೀವ್ರ ಸಮಸ್ಯೆಯಾಗುತ್ತಿದೆ. ನಿಗದಿತ ಸಮಯಕ್ಕೆ ರೈಲು ಸಂಚರಿಸಲು ಕ್ರಮ ವಹಿಸಬೇಕು ಎಂದು ಪಶ್ಚಿಮ ಕರಾವಳಿ ರೈಲ್ವೆ ಯಾತ್ರಿ ಅಭಿವೃದ್ಧಿ ಸಮಿತಿಯು ನೈರುತ್ಯ ರೈಲ್ವೆ ವಲಯದ ಮೈಸೂರು ವಿಭಾಗದ ವಿಭಾಗೀಯ ವ್ಯವಸ್ಥಾಪಕರಿಗೆ ಪತ್ರ ಬರೆದಿದೆ.ಹಾಸನ ಕುಣಿಗಲ್ ಮಾರ್ಗವಾಗಿ ಕಡಿಮೆ ಅವಧಿಯಲ್ಲಿ ಪ್ರಯಾಣಿಸಿ ಬೆಂಗಳೂರು ತಲುಪಬಹುದಾದ ಈ ರೈಲನ್ನು ಕರಾವಳಿಯ ಅನೇಕ ಪ್ರಯಾಣಿಕರು ಅವಲಂಬಿಸಿದ್ದಾರೆ. ಅಲ್ಲದೆ, ಈ ರೈಲಿನ ಸಮಯವು ವಿದ್ಯಾರ್ಥಿಗಳು, ಉದ್ಯೋಗಿಗಳಿಗೆ ಸ್ಥಳೀಯ ಪ್ರಯಾಣಕ್ಕೆ ಅನುಕೂಲಕರವಾಗಿದೆ. ಆದರೆ, ಕೆಲವು ದಿನಗಳಿಂದ ಈ ರೈಲು ಮಂಗಳೂರಿಗೆ ತಡವಾಗಿ ಬರುತ್ತಿದೆ ಎಂದು ಸಮಿತಿಯು ಪತ್ರದಲ್ಲಿ ತಿಳಿಸಿದೆ.

ಎಡಕುಮೇರಿ ಬಳಿ ಭೂ ಕುಸಿತದ ಕಾರಣಕ್ಕೆ ಕೆಲವು ದಿನ ಸಮಸ್ಯೆ ಆಗಿದ್ದರೂ, ಈಗ ಆ ಸಮಸ್ಯೆ ಪರಿಹಾರವಾಗಿದೆ. ಹಳಿ ವಿದ್ಯುದೀಕರಣದ ಕಾರಣಕ್ಕೆ ಯಶವಂತಪುರ- ಮಂಗಳೂರು ಎಕ್ಸ್‌ಪ್ರೆಸ್ ರೈಲು ರದ್ದಾಗಿರುವುದರಿಂದ ಪ್ರಯಾಣಿಕರು ಬೆಂಗಳೂರು- ಕಣ್ಣೂರು ಎಕ್ಸ್ ಪ್ರೆಸ್ ರೈಲನ್ನು ಅವಲಂಬಿಸಿದ್ದಾರೆ. ನಿಗದಿತ ಸಮಯಕ್ಕೆ ರೈಲು ಮಂಗಳೂರು ತಲುಪಲು ಕ್ರಮವಹಿಸಬೇಕು ಎಂದು ಸಮಿತಿಯ ಅಧ್ಯಕ್ಷ ಹನುಮಂತ ಕಾಮತ್ ಪತ್ರದಲ್ಲಿ ವಿವರಿಸಿದ್ದಾರೆ.

# ಜುಲೈ 15-16ಕ್ಕೆ ಅಂತಿಮ ಪರಿಶೀಲನೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಮ್ಮ ಮೆಟ್ರೊ, ಹಳದಿ ಮಾರ್ಗಕ್ಕೆ ಬಿಎಂಆರ್‌ಸಿಎಲ್ ಸ್ವತಂತ್ರ ಸುರಕ್ಷತಾ ಮೌಲ್ಯಮಾಪನಾ ಪ್ರಮಾಣಪತ್ರವನ್ನು ಪಡೆದಿದೆ. ಜುಲೈ 15 ಮತ್ತು 16ರಂದು ರೈಲ್ವೆಯ ಮೆಟ್ರೊ ರೈಲು ಸುರಕ್ಷತಾ ಆಯೋಗದ ಸಿಎಂಎಸ್‌ಆರ್ ಆಯುಕ್ತರು ಅಂತಿಮ ಪರಿಶೀಲನೆ ನಡೆಸಲಿದ್ದಾರೆ. ಬೊಮ್ಮಸಂದ್ರ-ಆರ್.ವಿ. ರಸ್ತೆ ನಡುವಿನ ಈ ಮಾರ್ಗದಲ್ಲಿ ಹಳಿ ಅಳವಡಿಕೆ, ನಿಲ್ದಾಣ ನಿರ್ಮಾಣ ಕಾಮಗಾರಿಗಳು ವರ್ಷದ ಹಿಂದೆಯೇ ಪೂರ್ಣಗೊಂಡಿತ್ತು. ಚಾಲಕ ರಹಿತ ಎಂಜಿನ್ ಹೊಂದಿರುವ ಪ್ರೊಟೊಟೈಪ್ (ಮೂಲ ಮಾದರಿ) ಮೊದಲ ರೈಲು 2024ರ ಏಪ್ರಿಲ್‌ನಲ್ಲೇ ಬಂದಿತ್ತು. ಅದೇ ರೈಲು ಬಳಸಿಕೊಂಡು ಸುಮಾರು ಮೂರು ತಿಂಗಳು ವಿವಿಧ ತಂತ್ರಜ್ಞರು ಹಳದಿ ಮಾರ್ಗದಲ್ಲಿ ಹಲವು ಪರೀಕ್ಷೆಗಳನ್ನು ನಡೆಸಿದ್ದರು. ಚಾಲಕ ರಹಿತ ಎಂಜಿನ್ ಕೋಚ್‌ನಲ್ಲಿ ಸಂಚರಿಸಿ ಟ್ರ್ಯಾಕ್ಷನ್, ಬ್ರೇಕಿಂಗ್ ಪರೀಕ್ಷೆ ಕೂಡಾ ಮಾಡಿದ್ದರು. ಬಳಿಕ ಸಂಶೋಧನಾ ವಿನ್ಯಾಸ, ಗುಣಮಟ್ಟ ಸಂಸ್ಥೆ ಆರ್‌ಡಿಎಸ್‌ಒ ಪ್ರಾಯೋಗಿಕ ಸಂಚಾರದ ಮೂಲಕ ಪರೀಕ್ಷೆಗಳನ್ನು ನಡೆಸಿತ್ತು.

ರೋಲಿಂಗ್ ಸ್ಟಾಕ್ (ರೈಲು) ತಜ್ಞರು, ಹಳಿ ತಂತ್ರಜ್ಞರು, ಬ್ರೇಕ್ ತಂತ್ರಜ್ಞರು, ವಿವಿಧ ತಾಂತ್ರಿಕ ಪರಿಣಿತರ ತಂಡದ ಸದಸ್ಯರು ಈ ಪರೀಕ್ಷೆಗಳಲ್ಲಿ ಭಾಗವಹಿಸಿದ್ದರು. ಆದರೆ, ಆನಂತರ ರೈಲುಗಳ ಪೂರೈಕೆಯಾಗದೇ ಅಲ್ಲಿಗೆ ಪ್ರಗತಿ ನಿಂತು ಹೋಗಿತ್ತು.

2025ರ ಜನವರಿಯಲ್ಲಿ ಪ್ರೊಟೊಟೈಪ್ ಎರಡನೇ ರೈಲು, ಮೇ ತಿಂಗಳಲ್ಲಿ ಮೂರನೇ ರೈಲು ಬಂದಿತ್ತು. ಹಳದಿ ಮಾರ್ಗವು ಬೊಮ್ಮಸಂದ್ರ, ಹೆಬ್ಬಗೋಡಿ, ಹುಸ್ಕೂರು ರಸ್ತೆ. ಇನ್ಫೋಸಿಸ್ ಫೌಂಡೇಶನ್ ಕೋನಪ್ಪನ ಅಗ್ರಹಾರ, ಎಲೆಕ್ಟ್ರಾನಿಕ್ ಸಿಟಿ, ಬೆರಟೇನ ಅಗ್ರಹಾರ, ಹೊಸ ರಸ್ತೆ, ಸಿಂಗಸಂದ್ರ, ಕೂಡ್ಲು ಗೇಟ್, ಹೊಂಗಸಂದ್ರ, ಬೊಮ್ಮನಹಳ್ಳಿ, ಸೆಂಟ್ರಲ್ ಸಿಲ್ಕ್ ಬೋರ್ಡ್, ಬಿಟಿಎಂ ಲೇಔಟ್, ಜಯದೇವ ಆಸ್ಪತ್ರೆ, ರಾಗಿಗುಡ್ಡ, ಆರ್.ವಿ. ರಸ್ತೆ ನಿಲ್ದಾಣಗಳನ್ನು ಹೊಂದಿದೆ.

ದಕ್ಷಿಣ ಬೆಂಗಳೂರನ್ನು (ಎಲೆಕ್ಟ್ರಾನಿಕ್ ಸಿಟಿ) ನಗರದ ಕೇಂದ್ರಕ್ಕೆ ಸಂಪರ್ಕಿಸುವ ಈ ಮಾರ್ಗವು 18.8 ಕಿ.ಮೀ ಉದ್ದವನ್ನು ಹೊಂದಿದೆ.

> **'ಇಂಡಿಪೆಂಡೆಂಟ್ ಸೇಫ್ಟಿ ಅಸೆಸ್ಸರ್ (ಐಎಸ್ಎ) ಎಲ್ಲ ದಾಖಲೆ, ಅಂಕಿ ಅಂಶಗಳನ್ನು ಪರಿಶೀಲಿಸಿದ ಬಳಿಕ ಪ್ರಮಾಣ ಪತ್ರ ನೀಡಿದ್ದಾರೆ. ಸಿಎಂಎಸ್ ಆರ್ ಆಯುಕ್ತರು ಬಂದು ಅಂತಿಮ ಪರಿಶೀಲನೆ ನಡೆಸುತ್ತಾರೆ. ಅವರು ಸಂಚಾರಕ್ಕೆ ಒಪ್ಪಿಗೆ ನೀಡಿದರೆ ರಾಜ್ಯ ಮತ್ತು ಕೇಂದ್ರ ಸರ್ಕಾರ ನಿಗದಿಪಡಿಸಿದ ದಿನ ಸಂಚಾರ ಆರಂಭವಾಗುತ್ತದೆ' ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದ್ದಾರೆ. ಜುಲೈ ಹೊತ್ತಿಗೆ ಇನ್ನೂ ಒಂದು ರೈಲು ಬಂದು ಸೇರಲಿದೆ' ಎಂದು ತಿಳಿಸಿದ್ದಾರೆ.**


# ಸರ್ಕಾರಕ್ಕೆ ಬಿವೈ ವಿಜಯೇಂದ್ರ ಒತ್ತಾಯ

• ಉದಯವಾಹಿನಿ, ಬೆಂಗಳೂರು

> **ಹುಲಿಗಳು ಸಾವಿಗೀಡಾದ ಸ್ಥಳದ ಬಳಿಯೇ ಹಸುವಿನ ಮೃತದೇಹ ಪತ್ತೆಯಾಗಿದ್ದು, ಹುಲಿ ಅದರ 4 ಮರಿಗಳ ಸಾವಿಗೆ ವಿಷಪ್ರಾಶನ ಕಾರಣವಾಗಿರಬಹುದು ಎಂಬ ಅನುಮಾನ ವ್ಯಕ್ತವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.**

ಹನೂರು ತಾಲ್ಲೂಕಿನ ಮಲೆ ಮಹದೇಶ್ವರ ವನ್ಯಜೀವಿ ವಿಭಾಗದ ಹೂಗ್ಯಂ ಅರಣ್ಯ ವಲಯದಲ್ಲಿ ಹುಲಿ ಮತ್ತು ಅದರ ನಾಲ್ಕು ಮರಿಗಳು ಸಾವಿಗೀಡಾಗಿದ್ದು, ತನಿಖಾ ತಂಡ ಆದಷ್ಟು ಬೇಗ ಸತ್ಯವನ್ನು ಬಹಿರಂಗಪಡಿಸಬೇಕು ಮತ್ತು ಅಪರಾಧಿಗಳನ್ನು ಕೂಡಲೇ ಬಂಧಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಶುಕ್ರವಾರ ಒತ್ತಾಯಿಸಿದ್ದಾರೆ.

'ಮಲೆ ಮಹದೇಶ್ವರರ ವಾಹನವೆಂದು ಹುಲಿಯನ್ನು ಪೂಜಿಸುವ ಬೆಟ್ಟದ ಸನ್ನಿಧಿಯಲ್ಲೇ ತಾಯಿ ಹುಲಿ ಸೇರಿದಂತೆ ಐದು ಹುಲಿಗಳು ಸಾವನ್ನಪ್ಪಿರುವ ಸುದ್ದಿ ಅತ್ಯಂತ ಆಘಾತಕಾರಿ, ಅಮಾನವೀಯ ಹಾಗೂ ಭಕ್ತರ ಮನಸ್ಸಿಗೆ ಘಾಸಿ ತರಿಸಿರುವ ಘಟನೆಯಾಗಿದೆ. ಹುಲಿಗಳ ಸಾವಿಗೆ ವಿಷ ಪ್ರಾಶನವಾಗಿದ್ದರೆ ಅದು ಅತ್ಯಂತ ಹೇಯ, ಖಂಡನೀಯ. ಈ ನಿಟ್ಟಿನಲ್ಲಿ ಕಠಿಣ ಕ್ರಮ ಕೈಗೊಳ್ಳಲು ಸರ್ಕಾರ ರಚಿಸಿರುವ ತನಿಖಾ ತಂಡ ಶೀಘ್ರ ಸತ್ಯಾಂಶವನ್ನು ಬಯಲಿಗೆಳೆದು ದುಷ್ಕರ್ಮಿಗಳನ್ನು ಬಂಧಿಸಲಿ ಎಂದು ಒತ್ತಾಯಿಸುವೆ' ಎಂದು ಅವರು X ನಲ್ಲಿ ಪೋಸ್ಟ್ ಮಾಡಿದ್ದಾರೆ.



# ನಗರವನ್ನು ಸ್ವಚ್ಛವಾಗಿಡಲು ನಾಗರಿಕರ ಸಹಾಯ ಕೋರಿದ ಬಿಬಿಎಂಪಿ!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಬಿಬಿಎಂಪಿಯ ಘನತ್ಯಾಜ್ಯ ನಿರ್ವಹಣಾ ಎಸ್‌ಡಬ್ಲ್ಯೂಎಂ ವಿಭಾಗವಾದ ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಕಂಪನಿ ಲಿಮಿಟೆಡ್ (ಬಿಎಸ್‌ಡಬ್ಲ್ಯೂಎಂಎಲ್), ಒಂದು ವರ್ಷಕ್ಕಿಂತ ಕಡಿಮೆ ಅವಧಿಯಲ್ಲಿ 2,080 ಕಸದ ಬ್ಲ್ಯಾಕ್ ಸ್ಪಾಟ್‌ಗಳನ್ನು 400 ಕ್ಕೆ ಇಳಿಸುವ ಮೂಲಕ 'ಹೌದಿನಿ ಕಾಯ್ದೆ'ಯನ್ನು ಜಾರಿಗೆ ತಂದಿದೆ. ಜೂನ್ 14 ರಿಂದ ಪ್ರತಿ ಬಿಬಿಎಂಪಿ ವಾರ್ಡ್‌ನಲ್ಲಿ ಶನಿವಾರದಂದು ತೀವ್ರ ಕಾರ್ಯಾಚರಣೆ ನಡೆಸುತ್ತಿರುವ ಪಾಲಿಕೆ, ತ್ಯಾಜ್ಯವನ್ನು ತೆರವುಗೊಳಿಸುವ ಮತ್ತು ಗೋಡೆಗಳ ಮೇಲೆ ಕಲೆ, ಸಸಿಗಳು ಮತ್ತು ಪಾಟ್ ಗಳನ್ನು ಇಡುವ ಮೂಲಕ ಪ್ರದೇಶವನ್ನು ಸುಂದರಗೊಳಿಸುವ ಗುರಿಯನ್ನು ಹೊಂದಿದೆ.

ಕಳೆದ ಎರಡು ವಾರಗಳಲ್ಲಿ, 396 ಕಸ ಹಾಕುವ ಸ್ಥಳಗಳನ್ನು ತೆರವುಗೊಳಿಸಿದ್ದಾರೆ. ಆದರೂ ಕೆಲವರು ಇನ್ನೂ ರಾತ್ರಿ ಅಥವಾ ಮುಂಜಾನೆ ಬಂದು ಪ್ರಾಣಿಗಳ ತ್ಯಾಜ್ಯ ಮತ್ತು ಕಸವನ್ನು ಸುರಿಯುತ್ತಿರುವುದರಿಂದ ನಾಗರಿಕರು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಅಧಿಕಾರಿಗಳು ನಿರಾಶೆ ವ್ಯಕ್ತಪಡಿಸಿದರು.

ಈ ಸಮಸ್ಯೆ, ಯೋಜನೆ ಕುರಿತು ಮಾತನಾಡಿದ ಮುಖ್ಯ ಮಾರ್ಷಲ್ ಅಧಿಕಾರಿ ಕರ್ನಲ್ ರಾಜ್‌ಬೀರ್ ಸಿಂಗ್ (ನಿವೃತ್ತ), ಜೂನ್ 14, ಜೂನ್ 21 ರಂದು, ಬಿಎಸ್‌ಡಬ್ಲ್ಯೂಎಂಎಲ್‌ನ ಬಿಬಿಎಂಪಿ ಅಧಿಕಾರಿಗಳು, ಬಿಬಿಎಂಪಿ ಮಾರ್ಷಲ್‌ಗಳು, ಸ್ವಯಂಸೇವಕರು 198 ಬಿಬಿಎಂಪಿ ವಾರ್ಡ್‌ಗಳ ತ್ಯಾಜ್ಯವನ್ನು ತೆರವುಗೊಳಿಸಿದರು.

ಗೋಡೆಗಳಿಗೆ ಬಣ್ಣ ಬಳಿದರು ಮತ್ತು ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಛಗೊಳಿಸಿದರು. ಈ ಶುಚಿಗೊಳಿಸುವ ಕಾರ್ಯಕ್ರಮವು ಸ್ವಚ್ಛ ಬೆಂಗಳೂರು ಯೋಜನೆ ಭಾಗವಾಗಿದೆ. ವಾರಾಂತ್ಯದಲ್ಲಿ ಈ ಅಭಿಯಾನ ಮುಂದುವರಿಯುತ್ತದೆ ಮತ್ತು ಅಂತಹ ಬ್ಲ್ಯಾಕ್ ಸ್ಪಾಟ್‌ಗಳನ್ನು ಸರಿಪಡಿಸಲಾಗುತ್ತದೆ ಎಂದು ಅವರು ಹೇಳಿದರು.

ತ್ಯಾಜ್ಯ ನಿರ್ವಹಣೆಯನ್ನು ನಿಭಾಯಿಸುವಲ್ಲಿ ಬಿಡಬ್ಲ್ಯೂಎಸ್‌ಎಂಎಲ್‌ನ ದೊಡ್ಡ ಸವಾಲು ಜನರ ವರ್ತನೆ ಎಂದು ಅವರು ಹೇಳಿದರು. ಜನಸಂಖ್ಯೆಯಿಂದಾಗಿ ತ್ಯಾಜ್ಯವು ಕಸದ ರಾಶಿಯಾಗಿ ಹರಡುತ್ತದೆ ಎಂದು ಹೇಳಿದರು.

> **ಪ್ರಾಣಿಗಳ ತ್ಯಾಜ್ಯವನ್ನು ಕೆಲವೊಮ್ಮೆ ಪ್ರತಿದಿನ ಎತ್ತುವುದಿಲ್ಲ, ಜನರು ತಮ್ಮ ಮನೆ ಬಾಗಿಲಿಗೆ ಬರುವ ಪೌರಕಾರ್ಮಿಕರಿಗೆ ತ್ಯಾಜ್ಯವನ್ನು ಹಸ್ತಾಂತರಿಸಲು ವಿಫಲರಾಗುತ್ತಾರೆ ಮತ್ತು ಅನೇಕ ವಾಣಿಜ್ಯ ಸಂಸ್ಥೆಗಳು ಬೀದಿ ಮೂಲೆಗಳಲ್ಲಿ ಅಥವಾ ಜಂಕ್ಷನ್‌ಗಳಲ್ಲಿ ಕಸ ಹಾಕುತ್ತವೆ ಎಂದು ಸಿಂಗ್ ಹೇಳಿದರು.**

# ಒಳ ಮೀಸಲಾತಿಗಾಗಿ ಗಣತಿ: ಬೆಂಗಳೂರಿನಲ್ಲಿ ಮಂದಗತಿ

## ಜೂನ್ 30ರವರೆಗೆ ಸಮೀಕ್ಷೆಗೆ ಅವಕಾಶ | ಕಾಲೋನಿಗಳಿಗೆ ಭೇಟಿ ನೀಡುತ್ತಿರುವ ಸಮೀಕ್ಷೆದಾರರು, ಮುಖಂಡರು

• ಉದಯವಾಹಿನಿ, ಬೆಂಗಳೂರು



**ರಾಜ್ಯದಲ್ಲಿ 11 ಜಿಲ್ಲೆಗಳಲ್ಲಿ ಶೇ 100 ದಾಟಿ ಸಮೀಕ್ಷೆ**

ಒಳಮೀಸಲಾತಿ ಕಲ್ಪಿಸಲು ದತ್ತಾಂಶ ಸಂಗ್ರಹಕ್ಕೆ ನಡೆದಿರುವ ಸಮೀಕ್ಷೆಯಲ್ಲಿ ರಾಜ್ಯದ 30 ಜಿಲ್ಲೆಗಳಲ್ಲಿ ಸರಾಸರಿ ಶೇ 95ರಷ್ಟು ಸಾಧನೆಯಾಗಿದ್ದರೆ, ಶೇ 50ರಷ್ಟು ಮಾತ್ರ ಗುರಿ ಸಾಧಿಸಿರುವ ಬೆಂಗಳೂರು ನಗರ ಸಮೀಕ್ಷೆಯಲ್ಲಿ ತೀರ ಹಿಂದುಳಿದಿದೆ. ಇನ್ನು ನಾಲ್ಕು ದಿನಗಳಲ್ಲಿ ಸಮೀಕ್ಷೆ ಪೂರ್ಣಗೊಳಿಸಬೇಕಾದ ಸವಾಲು ಎದುರಾಗಿದೆ. ಪರಿಶಿಷ್ಟ ಜಾತಿಯಲ್ಲಿ 101 ಸಮುದಾಯಗಳಿವೆ. ಆಯಾ ಸಮುದಾಯಗಳ ಜನಸಂಖ್ಯೆ, ಶಿಕ್ಷಣ, ಉದ್ಯೋಗ, ಆರ್ಥಿಕ ಸ್ಥಿತಿ ಸಹಿತ ವಿವಿಧ ಮಾಹಿತಿಗಳನ್ನು ನಿಖರವಾಗಿ ಸಂಗ್ರಹಿಸಲು ನ್ಯಾಯಮೂರ್ತಿ ಎಚ್.ಎನ್.ನಾಗಮೋಹನದಾಸ್ ಅಧ್ಯಕ್ಷತೆಯ ಏಕಸದಸ್ಯ ವಿಚಾರಣಾ ಆಯೋಗಕ್ಕೆ ಜವಾಬ್ದಾರಿ ನೀಡಲಾಗಿತ್ತು. ಮೇ 5ರಿಂದ ಸಮೀಕ್ಷೆ ಆರಂಭವಾಗಿತ್ತು. ಹಲವು ಬಾರಿ ವಿಸ್ತರಣೆಯಾಗಿ ಈಗ ಜೂನ್ 30ರವರೆಗೆ ಅವಕಾಶ ನೀಡಲಾಗಿದೆ.

2011ರ ಜನಗಣತಿ ಪ್ರಕಾರ ರಾಜ್ಯದಲ್ಲಿ ಪರಿಶಿಷ್ಟ ಜಾತಿಯ ಒಟ್ಟು ಜನಸಂಖ್ಯೆ 1.08 ಕೋಟಿ ಇದ್ದು, 2025ಕ್ಕೆ 1.49 ಕೋಟಿ ಆಗಿರುತ್ತದೆ ಎಂದು ಅಂದಾಜು ಮಾಡಲಾಗಿದೆ. ಬೆಂಗಳೂರು ನಗರ ವ್ಯಾಪ್ತಿಯಲ್ಲಿ 2011ರ ಜನಗಣತಿ ಪ್ರಕಾರ ಎಸ್‌ಸಿ ಜನಸಂಖ್ಯೆ 9.60 ಲಕ್ಷ ಆಗಿದ್ದು, ಈಗ 13.62 ಲಕ್ಷ ಇದ್ದಾರೆ ಎಂದು ಅಂದಾಜು ಪ್ರಮಾಣವನ್ನು ಅಧಿಕಾರಿಗಳು ಇಟ್ಟುಕೊಂಡಿದ್ದಾರೆ. ಈ ಅಂದಾಜು ಜನಸಂಖ್ಯೆಯಲ್ಲಿ ಮಂಗಳವಾರ ಸಂಜೆಯವರೆಗೆ 6.77 ಲಕ್ಷ ಮಾತ್ರ ಗಣತಿಯಾಗಿದೆ.ರಾಜ್ಯದಲ್ಲಿ 11 ಜಿಲ್ಲೆಗಳಲ್ಲಿ ಶೇ 100 ದಾಟಿ ಸಮೀಕ್ಷೆಯಾಗಿದೆ. 8 ಜಿಲ್ಲೆಗಳಲ್ಲಿ ಶೇ 95ರಿಂದ ಶೇ 99ರಷ್ಟು ಗಣತಿಯಾಗಿದೆ. ಉಳಿದ ಜಿಲ್ಲೆಗಳಲ್ಲಿ ಶೇ 90ರಿಂದ ಶೇ 95ರಷ್ಟು ಪೂರ್ಣಗೊಂಡಿದೆ. ಬೆಂಗಳೂರಿನಲ್ಲಿ ಮಂಗಳವಾರದವರೆಗೆ ಶೇ 50ರಷ್ಟು ಸಮೀಕ್ಷೆಯಾಗಿದ್ದು, ಎರಡು ದಿನಗಳಲ್ಲಿ ಶೇ 2-3ರಷ್ಟು ಹೆಚ್ಚಳವಾಗಿರಬಹುದು ಎಂದು ಏಕಸದಸ್ಯ ವಿಚಾರಣಾ ಆಯೋಗದ ಅಧ್ಯಕ್ಷ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನದಾಸ್ 'ತಿಳಿಸಿದರು. ಬೆಂಗಳೂರು ನಗರ ಸೇರಿದಂತೆ ರಾಜ್ಯದಲ್ಲಿ ಶೇ.92ರಷ್ಟು ಸಮೀಕ್ಷೆಯಾಗಿದೆ. ಈಗ ಸಮರೋಪಾದಿಯಲ್ಲಿ ಸಮೀಕ್ಷೆ ನಡೆಸಲಾಗುತ್ತಿದೆ ಎಂದು ಹೇಳಿದರು.

**ಮತ್ತೆ ವಿಸ್ತರಣೆ ಇಲ್ಲ:** ಸಮೀಕ್ಷೆಯ ಅವಧಿಯನ್ನು ಮತ್ತೆ ವಿಸ್ತರಣೆ ಮಾಡುವುದಿಲ್ಲ. ಇನ್ನು ಉಳಿದಿರುವ ನಾಲ್ಕು ದಿನಗಳಲ್ಲಿ ಶಕ್ತಿ ಮೀರಿ ಪ್ರಯತ್ನಿಸಲಾಗುವುದು. ಬುಧವಾರ 2300 ಮನೆಗಳಿಗೆ ಭೇಟಿ ನೀಡಲಾಗಿದೆ. ಗುರುವಾರವೂ ಇದೇ ಪ್ರಮಾಣದಲ್ಲಿ ಮನೆ ಭೇಟಿ ನಡೆದಿದೆ ಎಂದು ಏಕಸದಸ್ಯ ವಿಚಾರಣಾ ಆಯೋಗದ ಅಧ್ಯಕ್ಷ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನದಾಸ್ ತಿಳಿಸಿದರು. ಬೆಂಗಳೂರಿನಲ್ಲಿ ವಲಸಿಗರ ಸಂಖ್ಯೆ ಹೆಚ್ಚಿದೆ. ಅವರು ಆಯಾ ಜಿಲ್ಲೆಗಳಲ್ಲಿ ನಡೆದ ಸಮೀಕ್ಷೆಯಲ್ಲಿ ನಮೂದಾಗಿರುವ ಸಾಧ್ಯತೆ ಇರುತ್ತದೆ. ಅಲ್ಲದೇ ಬಾಡಿಗೆ ಮನೆಯಲ್ಲಿ ಇರುವವರು ಸಾಮಾಜಿಕ ಅಸಮಾನತೆಯ ಕಾರಣಕ್ಕೆ ಜಾತಿ ಹೇಳಲು ಹಿಂಜರಿಯುವುದೂ ಕಾರಣ ಇರಬಹುದು. ಅಂಥವರೆಲ್ಲ ಆನ್‌ಲೈನ್ ಮೂಲಕ ಮಾಹಿತಿ ನೀಡಲು ಅವಕಾಶ ಇದೆ ಎಂದು ಹೇಳಿದರು.

**ಮುಖಂಡರೇ ಭೇಟಿ:** ಯಾವ ಪ್ರದೇಶದಲ್ಲಿ ಗಣತಿ ಕಡಿಮೆ ಇದೆ ಎಂದು ಗುರುತಿಸಿ ಅಲ್ಲಿಗೆ ಸಮುದಾಯದ ಮುಖಂಡರು ಜನಪ್ರತಿನಿಧಿಗಳೇ ನಾಲ್ಕು ದಿನ ಭೇಟಿ ನೀಡಲಿದ್ದಾರೆ. ನಾನೂ ಹೋಗುತ್ತಿದ್ದೇನೆ. ಪರಿಶಿಷ್ಟ ಜಾತಿಯ ಜನ ಇರುವ ಎಲ್ಲಾ ಕಾಲನಿಗಳಿಗೆ ಹೋಗಿ ಎಲ್ಲಿ ಸಮೀಕ್ಷೆ ಆಗಿಲ್ಲ ಎಂದು ನೋಡಿ ಸಮೀಕ್ಷೆ ನಡೆಸಲಾಗುವುದು.

ಜೂನ್ 30ರ ಒಳಗೆ ಸಮೀಕ್ಷೆ ಕಾರ್ಯ ಮುಗಿಸಲಾಗುವುದು ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಎಚ್. ಮುನಿಯಪ್ಪ ಪ್ರತಿಕ್ರಿಯಿಸಿದ್ದಾರೆ.

### ಸರ್ಕಾರಿ ಶಿಕ್ಷಕರಿಲ್ಲದಿರುವುದೂ ಕಾರಣ

**ಜಿಲ್ಲೆಗಳಲ್ಲಿ ಸರ್ಕಾರಿ ಶಾಲೆಗಳ ಶಿಕ್ಷಕರನ್ನು ಸಮೀಕ್ಷೆಗೆ ಬಳಸಿಕೊಳ್ಳಲಾಗಿದೆ. ಆಯಾ ಊರಿನ ಮಾಹಿತಿ ಆ ಶಿಕ್ಷಕರಿಗೆ ಇರುತ್ತದೆ. ಅವರು ನಿಖರವಾಗಿ ಗಣತಿ ಮಾಡಿದ್ದಾರೆ. ಆದರೆ ಬೆಂಗಳೂರು ನಗರದಲ್ಲಿ ಶಿಕ್ಷಕರನ್ನು ಬಳಸಿಕೊಳ್ಳಲಾಗಿಲ್ಲ. ಅಲ್ಲದೇ ಇಲ್ಲಿ ಯಾರು ಯಾವ ಸಮುದಾಯ ಎಂದು ಅಕ್ಕಪಕ್ಕದವರಿಗೇ ಗೊತ್ತಿರುವುದಿಲ್ಲ. ಇದರಿಂದ ಸಮೀಕ್ಷೆ ಪ್ರಮಾಣ ಕಡಿಮೆಯಾಗಿದೆ. ಮತ್ತೆ ಅವಧಿ ವಿಸ್ತರಣೆಗೆ ಅರ್ಥವಿಲ್ಲ. ಉಳಿದಿರುವ ದಿನಗಳಲ್ಲಿ ಸಮೀಕ್ಷೆ ಪೂರ್ಣಗೊಳಿಸಲಾಗುವುದು ಎಂದು ಸಮುದಾಯದ ಮುಖಂಡ ಎಚ್. ಆಂಜನೇಯ ತಿಳಿಸಿದ್ದಾರೆ.**

# ಆಷಾಢ ಸಂಭ್ರಮ, ಅವ್ಯವಸ್ಥೆಗೆ ಭಕ್ತರ ಆಕ್ರೋಶ


## ದೇವಿ ಚಾಮುಂಡಿ ವಿವಿಧ ಹೂವುಗಳ ನಡುವೆ ಮಹಾಲಕ್ಷ್ಮಿ ಅಲಂಕಾರದಲ್ಲಿ ಕಂಗೊಳಿಸುತ್ತಾ ಭಕ್ತರಿಗೆ ದರ್ಶನ

• **ಉದಯವಾಹಿನಿ, ಮೈಸೂರು**

ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ದರ್ಶನಕ್ಕೆ ಸೂಕ್ತ ವ್ಯವಸ್ಥೆಗಳಿಲ್ಲ ಎಂದು ಭಕ್ತಾದಿಗಳು ಆಕ್ರೋಶ ವ್ಯಕ್ತ ಪಡಿಸಿದ್ದು, ಸರ್ಕಾರಕ್ಕೆ ಹಿಡಿಶಾಪ ಹಾಕಿದ್ದಾರೆ. ಆಷಾಡ ಮಾಸದ ಮೊದಲ ವಿಶೇಷ ಪೂಜೆ ಸಲುವಾಗಿ ಕರ್ನಾಟಕವಷ್ಟೇ ಅಲ್ಲದೆ ನೆರೆಯ ಮಹಾರಾಷ್ಟ್ರ, ಆಂಧ್ರಪ್ರದೇಶ, ತಮಿಳುನಾಡು, ತೆಲಂಗಾಣ ಸೇರಿದಂತೆ ಇತರ ರಾಜ್ಯಗಳಿಂದಲೂ ಲಕ್ಷಾಂತರ ಮಂದಿ ಭಕ್ತರು ಆಗಮಿಸಿದ್ದರು.

ಚಾಮುಂಡಿಬೆಟ್ಟದಲ್ಲಿ 2 ಸಾವಿರ ರೂ.ಗಳ ವಿವಿಐಪಿ ದರ್ಶನಕ್ಕೆ ಹೆಚ್ಚಿನ ಅನುಕೂಲ ಕಲ್ಪಿಸಲಾಗಿದೆ. ಜನಸಾಮಾನ್ಯರು ಮಧ್ಯರಾತ್ರಿಯಿಂದಲೇ ಸರದಿ ಸಾಲಿನಲ್ಲಿ ನಿಂತಿದ್ದರೂ 12 ಗಂಟೆಯಾದರೂ ದರ್ಶನಕ್ಕೆ ಅವಕಾಶ ನೀಡಿಲ್ಲ ಎಂಬ ಆರೋಪಗಳು ಕೇಳಿಬಂದಿವೆ. ಅದರಲ್ಲೂ ಕಾಲ್ನಡಿಗೆಯಲ್ಲಿ ಬೆಟ್ಟ ಹತ್ತಿ ಬಂದ ಭಕ್ತಾದಿಗಳ ಪಾಡು ಹೇಳತೀರದಾಗಿದೆ ಎಂಬ ಆಕ್ರೋಶಗಳು ಕೇಳಿಬಂದಿವೆ. ನೀರು, ಶೌಚಾಲಯದಂತಹ ಕನಿಷ್ಟ ಸೌಲಭ್ಯಗಳಿಲ್ಲದೆ ಮಕ್ಕಳು, ಮಹಿಳೆಯರು ಪರದಾಡುತ್ತಿದ್ದರು. ಇನ್ನೂ ಕೆಲವರು ತಾಳ್ಮೆ ಕಳೆದುಕೊಂಡು ಬ್ಯಾರಿಕೇಡ್‌ಗಳನ್ನು ಜಿಗಿದು ಬೇರೆ ಸಾಲಿನ ದರ್ಶನಕ್ಕೆ ನಿಂತಿದ್ದು ಕಂಡುಬಂದಿತ್ತು.

ನಮ್ಮಿಂದ ಮತ ಪಡೆದವರು ಸರದಿ ಸಾಲಿನಲ್ಲಿ ಬಂದು ದರ್ಶನ ಪಡೆದು ಹೋಗಿದ್ದಾರೆ. ಆದರೆ ನಾವು ಪ್ರಜಾಪ್ರಭುತ್ವದಲ್ಲಿ ಪ್ರಭುಗಳು




ಎಂದು ಹೇಳಿಕೊಳ್ಳುವ ಮತದಾರರಾದ ನಾವು ಮಧ್ಯರಾತ್ರಿ 3 ಗಂಟೆಯಿಂದಲೂ ಕಾದುನಿಂತಿದ್ದೇವೆ. ನಮನ್ನು ಹೇಳುವವರು, ಕೇಳುವವರು ಇಲ್ಲದಂತಾಗಿದೆ ಎಂದು ಕಿಡಿಕಾರಿದ್ದಾರೆ.ಸರ್ಕಾರ ಎಲ್ಲದರಲ್ಲೂ ಲೂಟಿ ಹೊಡೆಯುವುದನ್ನೇ ನೋಡುತ್ತಿದೆ.

ಜನಸಾಮಾನ್ಯರ ಕಷ್ಟಗಳಿಗೆ ಸ್ಪಂದಿಸುತ್ತಿಲ್ಲ ಎಂದು ಸಾರ್ವಜನಿಕರು ಕಿಡಿಕಾರಿದ್ದಾರೆ. ಕಳೆದ ಬಾರಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಚಾಮುಂಡಿ ಬೆಟ್ಟಕ್ಕೆ ಆಗಮಿಸುವ ಹಿನ್ನಲೆಯಲ್ಲಿ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ಪ್ರತಿವರ್ಷದಂತೆ ಈ ಬಾರಿಯೂ ಖಾಸಗಿ

**ದೇವಸ್ಥಾನದ ಆಡಳಿತ ಮಂಡಳಿ ಭಕ್ತಾದಿಗಳಿಗೆ ಬಾದಾಮಿ ಹಾಲು, ನೀರು, ಡ್ರೈಫ್ರೂಟ್ ಸಗಳನ್ನು ಒದಗಿಸಲಾಗುತ್ತಿದೆ ಎಂದು ಹೇಳಿಕೊಂಡಿದೆ. ಆದರೆ ಇದನ್ನು ತಳ್ಳಿ ಹಾಕಿರುವ ಭಕ್ತಾದಿಗಳು, ಅಧಿಕಾರಿಗಳು ದುಡ್ಡು ಹೊಡೆಯಲು ಈ ರೀತಿಯ ಸುಳ್ಳು ಮಾಹಿತಿಗಳನ್ನು ನೀಡಿರಬಹುದು, ನಮಗೆ ಇಲ್ಲಿ ಕುಡಿಯಲು ನೀರನ್ನೂ ಕೊಟ್ಟಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.**

ವಾಹನಗಳ ಪ್ರವೇಶ ನಿರ್ಭಂಧಿಸಲಾಗಿದ್ದು, ಕೆಎಸ್‌ಆರ್‌ಟಿಸಿ ವತಿಯಿಂದ ಉಚಿತ ಬಸ್ ವ್ಯವಸ್ಥೆ ಮಾಡಲಾಗಿದೆ. ಲಲಿತಮಹಲ್ ಪ್ಯಾಲೇಸ್ ಹೆಲಿಪ್ಯಾಡ್ ಆವರಣದಿಂದ ಉಚಿತ ಬಸ್ ವ್ಯವಸ್ಥೆ ಮಾಡಲಾಗಿದ್ದು, ಭಕ್ತರಿಗೆ ನಾಡದೇವಿಯ ದರುಶನ ಪಡೆಯಲು ಜಿಲ್ಲಾಡಳಿತದ ವತಿಯಿಂದ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿತ್ತು.

**ಟಿಕೆಟ್ ವ್ಯವಸ್ಥೆ:** ಭಕ್ತರ ಅನುಕೂಲಕ್ಕಾಗಿ 300ರೂ , 2 ಸಾವಿರ ರೂ. ಟಿಕೆಟ್ ವ್ಯವಸ್ಥೆ ಮಾಡಲಾಗಿದೆ. 2000 ಟಿಕೆಟ್ ಪಡೆದವರಿಗೆ ಲಲಿತ ಮಹಲ್‌ಯಿಂದ ಬೆಟ್ಟಕ್ಕೆ ಎಸಿ ಬಸ್‌ನಲ್ಲಿ ಕರೆದುಕೊಂಡು ಹೋಗಿ ಬೆಟ್ಟದಲ್ಲಿ ನೇರವಾಗಿ ದರ್ಶನ ಮಾಡಿ ನಂತರ ಪ್ರಸಾದ ರೂಪದಲ್ಲಿ ಚಾಮುಂಡೇಶ್ವರಿ ವಿಗ್ರಹ, ಲಾಡು, ಕುಡಿಯುವ

### ಚಾಮುಂಡಿ ಬೆಟ್ಟಕ್ಕೆ ಭಕ್ತಸಾಗರ

**ಚಾಮುಂಡಿ ಬೆಟ್ಟದಲ್ಲಿ ತುಂತುರು ಮಳೆ ಹಿಮದ ನಡುವೆ ಹೂವುಗಳ ತಳಿರು ತೋರಣ, ದೀಪಾಲಂಕಾರ ಭಕ್ತರನ್ನು ಸ್ವಾಗತಿಸುತ್ತಿತ್ತು. ಆಷಾಢ ಶುಕ್ರವಾರ ಪ್ರಯುಕ್ತ ನಾಡ ಅಧಿದೇವತೆ ಚಾಮುಂಡೇಶ್ವರಿ ತಾಯಿಗೆ ಮುಂಜಾನೆ ಪಂಚಾಮೃತ ಅಭಿಷೇಕ, ಅರ್ಚನೆ, ಸಹಸ್ರನಾಮ ಅರ್ಚನೆ ಮಾಡಲಾಯಿತು.ದೇವಿ ಚಾಮುಂಡಿ ವಿವಿಧ ಹೂವುಗಳ ನಡುವೆ ಮಹಾಲಕ್ಷ್ಮಿ ಅಲಂಕಾರದಲ್ಲಿ ಕಂಗೊಳಿಸುತ್ತಾ ಭಕ್ತರಿಗೆ ದರ್ಶನ ನೀಡಿದರು.**

ನೀರಿನ ಬಾಟಲ್ ಒಳಗೊಂಡ ಬ್ಯಾಗ್ ವಿತರಿಸಲಾಯಿತು.

ಆಷಾಢ ಶುಕ್ರವಾರದ ಪ್ರಯುಕ್ತ ನಾಡ ಅಧಿದೇವತೆಯ ದರ್ಶನಕ್ಕಾಗಿ ಸಾವಿರಾರು ಮಂದಿ ಭಕ್ತರು ಮುಂಜಾನೆಯಿಂದಲೇ ಮೆಟ್ಟಿಲುಗಳನ್ನು ಹತ್ತಿ, ಆಗಮಿಸಿ ದೇವಿಯ ದರ್ಶನ ಪಡೆದರು. ರಾಜ್ಯದ ವಿವಿಧ ಕಡೆಗಳಿಂದ ಸಹಸ್ರಾರು ಭಕ್ತಾದಿಗಳು ಚಾಮುಂಡಿ ಬೆಟ್ಟಕ್ಕೆ ಆಗಮಿಸಿ, ಮುಂಜಾನೆ 4 ಗಂಟೆಯಿಂದಲೇ ಸರದಿ ಸಾಲಿನಲ್ಲಿ ನಿಂತು ದೇವಿಯ ದರ್ಶನ ಪಡೆದು ಪುನೀತರಾದರು.

# ಮಿನಿ ನ್ಯೂಸ್

## 5 ಹುಲಿಗಳ ನಿಗೂಢ ಸಾವು : ವಿಷ ಹಾಕಿದ್ದ ದುಷ್ಕರ್ಮಿ ಸೇರಿ ಐವರು ವಶಕ್ಕೆ

• **ಉದಯವಾಹಿನಿ, ಚಾಮರಾಜನಗರ**

ಮಲೆ ಮಹದೇಶ್ವರ ಬೆಟ್ಟದಲ್ಲಿ 5 ಹುಲಿಗಳ ಸಾವಿಗೆ ವಿಷಪ್ರಾಶನವೇ ಕಾರಣ ಅನ್ನೋದು ಮರಣೋತ್ತರ ಪರೀಕ್ಷೆಯಲ್ಲಿ ದೃಢವಾಗಿದೆ. ಕಿಡಿಗೇಡಿಗಳು ಸತ್ತ ಹಸುವಿನ ಕಳೇಬರದಲ್ಲಿ ವಿಷವಿಕ್ಕಿ ತಾಯಿ ಹಾಗೂ 4 ಮರಿ ಹುಲಿಗಳನ್ನು ಕೊಂದಿರೋದಾಗಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹೀರಾಲಾಲ್ ಖಚಿತಪಡಿಸಿದ್ದಾರೆ. ಈ ನಡುವೆ ತನಿಖೆ ಚುರುಕುಗೊಳಿಸಿದ್ದ ಅರಣ್ಯಾಧಿಕಾರಿಗಳು ಹುಲಿಗಳಿಗೆ ವಿಷ ಹಾಕಿದ್ದ ದುಷ್ಕರ್ಮಿಯೊಬ್ಬ ಸೇರಿ 6 ಜನರನ್ನ ವಶಕ್ಕೆ ಪಡೆದುಕೊಂಡಿದ್ದಾರೆ. ಹುಲಿ ದಾಳಿಯಿಂದ ಕೋಪಗೊಂಡ ಮಾಲೀಕ ಕಳ್ಳಬ್ಬೆದೊಡ್ಡಿ ಗ್ರಾಮದ ಶಿವಣ್ಣ ಹಸುವಿನ ಕಳೆಬರಕ್ಕೆ ವಿಷ ಸಿಂಪಡಣೆ ಮಾಡಿದ್ದ. ಈ ಕೃತ್ಯದಲ್ಲಿ ಶಿವಣ್ಣನ ಮಗನೂ ಭಾಗಿಯಾಗಿದ್ದ ಎನ್ನಲಾಗಿದೆ. ವಿಷ ಸಿಂಪಡಿಸಿದ್ದ ಕಳೆಬರವನ್ನು ತಿಂದು ಹುಲಿಗಳು ಸಾವನ್ನಪ್ಪಿರುವುದಾಗಿ ಉನ್ನತ ಮೂಲಗಳು ತಿಳಿಸಿವೆ. ಸದ್ಯ ಗಾಜನೂರು ಗ್ರಾಮದ ಅರಣ್ಯ ಇಲಾಖೆ ವಿಶ್ರಾಂತಿ ಕೊಠಡಿಯಲ್ಲಿ ಆರೋಪಿಯನ್ನಿರಿಸಲಾಗಿದೆ. ಶಿವಣ್ಣ ಜೊತೆಗೆ ಅದೇ ಗ್ರಾಮದ ಐವರನ್ನು ಅರಣ್ಯಾಧಿಕಾರಿಗಳು ವಶಕ್ಕೆ ಪಡೆದು ವಿಚಾರಣೆ ನಡೆಸಲು ಮುಂದಾಗಿದ್ದಾರೆ.

## ಬೈಕ್-ಕಾರು ಡಿಕ್ಕಿ: ಇಬ್ಬರು ಸಾವು

• **ಉದಯವಾಹಿನಿ, ಕೊಳ್ಳೇಗಾಲ**

ತಾಲ್ಲೂಕಿನ ಸತ್ತೇಗಾಲ ಗ್ರಾಮದ ಬೈಪಾಸ್ ರಸ್ತೆಯಲ್ಲಿ ಬೈಕ್ ಮತ್ತು ಕಾರು ನಡುವೆ ಮುಖಾಮುಖಿ ಡಿಕ್ಕಿಯಾಗಿ ಇಬ್ಬರು ಬೈಕ್ ಸವಾರರು ಸ್ಥಳದಲ್ಲೇ ಶುಕ್ರವಾರ ಮೃತಪಟ್ಟಿದ್ದಾರೆ.

ಸತ್ತೇಗಾಲ ಗ್ರಾಮದ ನಟರಾಜು (65) ಹಾಗೂ ಮಹೇಶ್ (50) ಮೃತರು. ಇವರು ಗ್ರಾಮದ ಹೊರವಲಯದಲ್ಲಿರುವ ಜಮೀನಿನಲ್ಲಿ ಕೆಲಸ ಮುಗಿಸಿಕೊಂಡು ಮನೆಗೆ ವಾಪಸು ಬರುವಾಗ ಕೊಳ್ಳೇಗಾಲದಿಂದ ಬೆಂಗಳೂರು ಕಡೆಗೆ ಅತಿವೇಗದಿಂದ ಹೋಗುತ್ತಿದ್ದ ಕಾರು ಡಿಕ್ಕಿ ಹೊಡೆದಿದೆ. ಸರ್ಕಾರಿ ಉಪ ವಿಭಾಗ ಆಸ್ಪತ್ರೆಯ ಶವಾಗಾರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ಶವಗಳನ್ನು ವಾರಸುದಾರರಿಗೆ ಒಪ್ಪಿಸಲಾಗಿದೆ. ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ತಾಳೆ ಬೆಳೆಯಲು ರೈತರಿಗೆ ಸಲಹೆ

• **ಉದಯವಾಹಿನಿ, ಯಳಂದೂರು**

ರೈತರಿಗೆ ಹೆಚ್ಚಿನ ಆದಾಯ ತಂದುಕೊಡುವ ತಾಳೆ ಬೆಳೆಯನ್ನು ರೈತರು ಹೆಚ್ಚಾಗಿ ಬೆಳೆಯಲು ಮುಂದಾಗಬೇಕು ಎಂದು ತೋಟಗಾರಿಕೆ ಇಲಾಖೆಯ ಹಿರಿಯ ನಿರ್ದೇಶಕ ಜಿ.ಎಸ್. ರಾಜು ಸಲಹೆ ನೀಡಿದರು.

ತಾಲ್ಲೂಕಿನ ಹೊನ್ನೂರು ಗ್ರಾಮದಲ್ಲಿ ಈಚೆಗೆ ತಾಳೆ ಬೆಳೆ ಅಭಿವೃದ್ಧಿ ಯೋಜನೆಯಡಿ ರೈತ ಪ್ರತಾಪ್ ವಿ.ಅರಸ್ ಜಮೀನಿನಲ್ಲಿ ತೋಟಗಾರಿಕೆ ಇಲಾಖೆ, ಜಿಲ್ಲಾ ಪಂಚಾಯತ್ ಹಾಗೂ ಪತಂಜಲಿ ಫುಡ್ಸ್ ಲಿಮಿಟೆಡ್ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಮೆಗಾ ತಾಳೆ ಕೃಷಿ ಪ್ರೋತ್ಸಾಹ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು. ಭಾರತದಲ್ಲಿ ಖಾದ್ಯ ತೈಲದ ವಾರ್ಷಿಕ ಬೇಡಿಕೆಯನ್ನು ಸ್ಥಳೀಯ ಉತ್ಪಾದನೆಯಿಂದ ಪೂರೈಸಲು ಸಾಧ್ಯವಾಗುತ್ತಿಲ್ಲ. ಸುಮಾರು 1 ಲಕ್ಷ ಕೋಟಿ ಮೌಲ್ಯದ ಖಾದ್ಯ ತೈಲವನ್ನು ಹೊರ ದೇಶಗಳಿಂದ ಆಮದು ಮಾಡಿಕೊಳ್ಳಲಾಗುತ್ತಿದೆ.

ಖಾದ್ಯ ತೈಲದ ಆಮದು ವೆಚ್ಚತಗ್ಗಿಸುವ ನಿಟ್ಟಿನಲ್ಲಿ ತೈಲ ಬೆಳೆಗಳ ಉತ್ಪಾದನೆಗೆ ಹೆಚ್ಚು ಆದ್ಯತೆ ನೀಡಲು ಕೇಂದ್ರ ಸರ್ಕಾರ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಪ್ರಾರಂಭಿಸಿದೆ ಎಂದು ತಿಳಿಸಿದರು.

# ಮತ್ತಷ್ಟು ಹಿಗ್ಗಿದ ಸೀಬೆ ವಿಸ್ತೀರ್ಣ

• **ಉದಯವಾಹಿನಿ, ತುಮಕೂರು**

ಜಿಲ್ಲೆಯಲ್ಲಿ ಸೀಬೆ ಹಣ್ಣಿನ ವಿಸ್ತೀರ್ಣ ಹಿಗ್ಗುತ್ತಿದ್ದು, ಸದ್ಯ ವರ್ಷಕ್ಕೆ 7 ಸಾವಿರ ಮೆಟ್ರಿಕ್‌ಟನ್‌ಗೂ ಅಧಿಕ ಸೀಬೆ ಮಾರುಕಟ್ಟೆಗೆ ಬರುತ್ತಿದೆ. 2018-19ನೇ ಸಾಲಿನಲ್ಲಿ 184 ಹೆಕ್ಟೇರ್ ಪ್ರದೇಶದಲ್ಲಿ ಸೀಬೆ ಬೆಳೆಯುತ್ತಿದ್ದರು.

2022-23ರ ವೇಳೆಗೆ ದುಪ್ಪಟ್ಟಾಗಿದ್ದು, 367 ಹೆಕ್ಟೇರ್‌ಗೆ ವಿಸ್ತರಿಸಿದೆ. ಕಳೆದ ಹಲವು ವರ್ಷಗಳಿಂದ ವಿದೇಶದ ತೈವಾನ್ ಸೀಬೆಗೆ ಮಾರುಕಟ್ಟೆಯಲ್ಲಿ ಉತ್ತಮ ದರ, ಬೇಡಿಕೆ ಇದೆ. ವಿದೇಶಿ ತಳಿ ದೇಶಕ್ಕೆ ಲಗ್ಗೆ ಇಟ್ಟಾಗ ಹೆಚ್ಚಿನ ರೈತರು ಇದೇ ತಳಿಯ ಸಸಿ ನೆಟ್ಟರು. ಈಗ ಅದು ಉತ್ತಮ ಫಸಲು ನೀಡುತ್ತಿದ್ದು, ಬೆಳೆಗಾರರ ಬದುಕು ಬೆಳಗಿದೆ. ತೋಟಗಾರಿಕಾ ಇಲಾಖೆಯ ಅಂಕಿ ಅಂಶಗಳ ಪ್ರಕಾರ 5 ವರ್ಷಗಳ ಹಿಂದೆ ವರ್ಷಕ್ಕೆ 3 ಸಾವಿರ ಮೆಟ್ರಿಕ್ ಟನ್ ಹಣ್ಣು ಉತ್ಪಾದನೆ ಆಗುತ್ತಿತ್ತು. ಈಗ 7 ಸಾವಿರ ಮೆಟ್ರಿಕ್ ಟನ್‌ಗೆ ಏರಿಕೆ ಕಂಡಿದೆ. ಬರದ ನಾಡು ಎಂದೇ ಕರೆಸಿಕೊಳ್ಳುವ ಪಾವಗಡ, ಮಧುಗಿರಿ, ಶಿರಾ ತಾಲ್ಲೂಕಿನ ವ್ಯಾಪ್ತಿಯಲ್ಲಿ ಸೀಬೆ ಬೆಳೆ ವಿಸ್ತೀರ್ಣ ಪ್ರತಿ ವರ್ಷ ಜಾಸ್ತಿಯಾಗುತ್ತಿದೆ. ಮಧುಗಿರಿಯಲ್ಲಿ ಅತಿ ಹೆಚ್ಚು 107 ಹೆಕ್ಟೇರ್‌ನಲ್ಲಿ ಬೆಳೆಯಲಾಗಿದೆ. ತುರುವೇಕೆರೆ ಭಾಗದಲ್ಲಿ ಅತಿ ಕಡಿಮೆ 0.64 ಹೆಕ್ಟೇರ್ ಪ್ರದೇಶದಲ್ಲಿ ಸೀಬೆ ಬೆಳೆಯಲಾಗುತ್ತಿದೆ. ಜಿಲ್ಲೆಯ ರೈತರು ದೇಸಿ




ತಳಿಯ ಜತೆಗೆ 'ತೈವಾನ್ ವೈಟ್ ಸೀಬೆ' ಬೆಳೆಯುತ್ತಿದ್ದಾರೆ. ಇದು ಒಣ ಹವೆ, ಬಿಸಿಲು ಹೆಚ್ಚಿರುವ ಕಡೆಗಳಲ್ಲಿ ಉತ್ತಮ ಫಸಲು ನೀಡುತ್ತದೆ. ಎಕರೆಗೆ 7ರಿಂದ 8 ಟನ್ ಇಳುವರಿ ಸಿಗುತ್ತದೆ. ರೈತರಿಂದ ಕೆ.ಜಿಗೆ ರೂ.25ರಿಂದ ರೂ.30ಕ್ಕೆ ಖರೀದಿಸಿ, ಮಾರುಕಟ್ಟೆಯಲ್ಲಿ ಕೆ.ಜಿ ರೂ.100ರಿಂದ ರೂ.120ರ ವರೆಗೂ ಮಾರಾಟ ಮಾಡಲಾಗುತ್ತಿದೆ.

ಬೆಂಗಳೂರು, ಮೈಸೂರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆ ಹಾಗೂ ಮಹಾರಾಷ್ಟ್ರ, ಮುಂಬೈ, ಪುಣೆಗೂ ಜಿಲ್ಲೆಯ ಹಣ್ಣು ರಫ್ತಾಗುತ್ತಿದೆ. ದೇಶಿಯ ತಳಿಗೆ ಹೋಲಿಸಿದರೆ 'ತೈವಾನ್ ಸೀಬೆ' ಗಾತ್ರ ದಪ್ಪವಾಗಿರುತ್ತದೆ. ಮಾರುಕಟ್ಟೆಯಲ್ಲಿ ಬೇಡಿಕೆಯೂ ಹೆಚ್ಚಿರುವ ಕಾರಣಕ್ಕೆ ರೈತರು ತೈವಾನ್ ತಳಿ ಕಡೆಗೆ ಮುಖ ಮಾಡುತ್ತಿದ್ದಾರೆ. ಖಾಸಗಿ ಕಂಪನಿಯವರು ಸಸಿ ಮಾರಾಟ ಮಾಡುತ್ತಿದ್ದಾರೆ. ಕೆಲವು ಕಡೆ ಸಸಿ ಕೊಟ್ಟು ರೈತರ ಜತೆಗೆ ಹಣ್ಣು ಖರೀದಿಯ ಒಪ್ಪಂದ ಮಾಡಿಕೊಳ್ಳುತ್ತಾರೆ.

# ಕೆಂಪೇಗೌಡ ಜಯಂತಿ: ಸ್ತಬ್ಧಚಿತ್ರಗಳ ಅದ್ದೂರಿ ಮೆರವಣಿಗೆ

• **ಉದಯವಾಹಿನಿ, ಚಿಂತಾಮಣಿ**

ನಗರದಲ್ಲಿ ತಾಲ್ಲೂಕು ಆಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಒಕ್ಕಲಿಗರ ಸಂಘ, ಕೆಂಪೇಗೌಡರ ಕ್ಷೇಮಾಭಿವೃದ್ಧಿ ಟ್ರಸ್ಟ್ ಆಶ್ರಯದಲ್ಲಿ ಶುಕ್ರವಾರ ಕೆಂಪೇಗೌಡರ 516ನೇ ಜಯಂತಿ ಅಂಗವಾಗಿ ಆಯೋಜಿಸಿದ್ದ ಸ್ತಬ್ಧ ಮೆರವಣಿಗೆ ಅದ್ದೂರಿಯಾಗಿ ನಡೆಯಿತು.

ನಗರದ ಪ್ರವಾಸಿ ಮಂದಿರದ ಬಳಿ ತಹಶೀಲ್ದಾರ್ ಸುದರ್ಶನ ಯಾದವ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಸ್.ಆನಂದ್, ಪೌರಾಯುಕ್ತ ಜಿ.ಎನ್.ಚಲಪತಿ ಮತ್ತು ಒಕ್ಕಲಿಗ ಸಮುದಾಯದ ಮುಖಂಡರು ಸ್ತಬ್ಧಚಿತ್ರಗಳ ಮೆರವಣಿಗೆಗೆ ಚಾಲನೆ ನೀಡಿದರು.

ಕೆಂಪೇಗೌಡರ ಭಾವಚಿತ್ರಗಳನ್ನು ಹೊತ್ತ ಬೆಳ್ಳಿ ಕುದುರೆ ಸಾರೋಟು, ಕುದುರೆ ಸವಾರಿ, ಸಾರಿಗೆ ಸಂಸ್ಥೆಯ ಬಸ್ ಸೇರಿದಂತೆ ನೂರಾರು ವಾಹನಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದವು. ತಾಲ್ಲೂಕಿನ ಪ್ರತಿಯೊಂದು ಗ್ರಾಮ ಪಂಚಾಯಿತಿಯಿಂದ ಒಂದೊಂದು ಪಲ್ಲಕ್ಕಿ ಭಾಗವಹಿಸಿದ್ದವು.

ಮಂಗಳವಾದ್ಯಗಳು, ಒಂದೇ ಸಮವಸ್ತ್ರ ಧರಿಸಿ ಕಳಶ ಹೊತ್ತ ಮಹಿಳೆಯರು, ಗಾರುಡಿಗೊಂಬೆಗಳು,




ತಮಟೆವಾದ್ಯಗಳ ತಂಡಗಳು ಸೇರಿದಂತೆ ಹಲವಾರು ಸಾಂಸ್ಕೃತಿಕ ತಂಡಗಳು ಸ್ತಬ್ಧಚಿತ್ರಗಳ ಮೆರವಣಿಗೆಗೆ ಮೆರಗು ನೀಡಿದವು.

ತಾಲ್ಲೂಕಿನ ಮೂಲೆ ಮೂಲೆಗಳಿಂದ ಬಂದಿದ್ದ ಸಾವಿರಾರು ಜನರು ಮೆರವಣಿಗೆಯಲ್ಲಿ ಭಾಗವಹಿಸಿದ್ದರು. ಮಾಳಪಲ್ಲಿ ಗೌತಮ್ ವಿಭಿನ್ನವಾಗಿ ಕುದುರೆ ಸವಾರಿ ಮಡುವ ಮೂಲಕ ಗಮನ ಸೆಳೆದರು. ತಮಟೆ ಸದ್ದಿಗೆ ಯುವಕರು ಕುಣಿದು ಕುಪ್ಪಳಿಸಿದರು. ಸಚಿವ ಡಾ.ಎಂ.ಸಿ.ಸುಧಾಕರ್ ಸಹ ಯುವಕರೊಂದಿಗೆ ತಮಟೆ ಸದ್ದಿಗೆ ಹೆಜ್ಜೆ ಹಾಕಿದರು. ಇಡೀ ನಗರದಲ್ಲಿ ಹಬ್ಬದ ವಾತಾವರಣವಿತ್ತು. ಪ್ರವಾಸಿ ಮಂದಿರದಿಂದ ಹೊರಟ ಮೆರವಣಿಗೆ

**ಸುಮಾರು 12 ಗಂಟೆಗೆ ಆರಂಭವಾದ ಮೆರವಣಿಗೆ ಮಧ್ಯಾಹ್ನ 3ಗಂಟೆಗೆ ವೇದಿಕೆ ಸ್ಥಳಕ್ಕೆ ಸೇರಿತು. ಸ್ತಬ್ಧ ಚಿತ್ರಗಳ ಮೆರವಣಿಗೆಯಿಂದ ಸಂಚಾರ ಅಸ್ತವ್ಯಸ್ತಗೊಂಡಿತು. ಸಂಚಾರ ವ್ಯವಸ್ಥೆ ತಹಬದಿಗೆ ತರಲು ಪೊಲೀಸರು ಹೆಣಗಾಡಬೇಕಾಯಿತು. ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಬಿಗಿ ಬಂದೋಬಸ್ತ್ ಏರ್ಪಡಿಸಿದ್ದರು.**

ಜೋಡಿರಸ್ತೆ, ಗಣೇಶ ಟೆಂಪಲ್ ರಸ್ತೆ, ಗಜಾನನ ವೃತ್ತ, ಬಾಗೇಪಲ್ಲಿ ವೃತ್ತ, ಎಂ.ಜಿ.ರಸ್ತೆ, ಪಿಸಿಆರ್ ಕಾಂಪ್ಲೆಕ್ಸ್, ಚೇಳೂರು ವೃತ್ತ, ಸರ್ಕಾರಿ ಬಸ್ ನಿಲ್ದಾಣ, ಯೋಗಿನಾರೇಯಣ ವೃತ್ತದ ಮೂಲಕ ಕಾರ್ಯಕ್ರಮದ ಸ್ಥಳವಾದ ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ಸ್ಥಾಪಿಸಲಾಗಿದ್ದ ವೇದಿಕೆಗೆ ತಲುಪಿತು. ಪ್ರಮುಖ ವೃತ್ತಗಳಲ್ಲಿ ಜನಪದ ತಂಡಗಳಾದ ತಮಟೆವಾದ್ಯ, ಗಾರುಡಿಗೊಂಬೆಗಳು ತಮ್ಮ ಪ್ರದರ್ಶನ ನೀಡಿದರು.

# ಪಟ್ಟಣ ಬೆಳೆಯುತ್ತಿದ್ದರೂ ಮದ್ಯದ ಅಂಗಡಿಗಳ ಆರಂಭಕ್ಕೆ ಅವಕಾಶ ಇಲ್ಲ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಇರಾನ್ ಸರ್ವೋಚ್ಚ ನಾಯಕ ಅಯಾತೊಲ್ಲಾ ಅಲಿ ಖಮೇನಿ ಅವರ ಭೇಟಿ, ಇರಾನ್ ಜೊತೆಗಿನ ನಂಟಿನ ಕಾರಣ ಗೌರಿಬಿದನೂರು ತಾಲ್ಲೂಕಿನ ಅಲೀಪುರ ಗ್ರಾಮವು ರಾಜ್ಯದ ಗಮನ ಸೆಳೆದಿದೆ. 25 ಸಾವಿರ ಜನಸಂಖ್ಯೆ ಹೊಂದಿರುವ ಗ್ರಾಮವು ಈಗ ಗ್ರಾಮ ಪಂಚಾಯಿತಿ ಹಂತದಿಂದ ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೇರುವ ಹಂತದಲ್ಲಿದೆ. ಇಂತಿಪ್ಪ ದೊಡ್ಡ ಸಂಖ್ಯೆಯ ಜನರನ್ನು ಹೊಂದಿರುವ ಪಟ್ಟಣವಾಗಿ ಬೆಳೆದಿರುವ ಅಲೀಪುರದಲ್ಲಿ ಇಂದಿಗೂ ಒಂದು ಮದ್ಯದ ಅಂಗಡಿ, ಚಿತ್ರಮಂದಿರವಿಲ್ಲ

ದೊಡ್ಡಹಳ್ಳಿಗಳಲ್ಲಿ ಸಾಮಾನ್ಯವಾಗಿ ಮದ್ಯದ ಅಂಗಡಿಗಳು ಆರಂಭವಾಗುತ್ತವೆ. ಆದರೆ ಅಲೀಪುರವು ವೇಗವಾಗಿ ಬೆಳೆಯುತ್ತಿದ್ದರೂ ಮದ್ಯದ ಅಂಗಡಿಗಳ ಆರಂಭಕ್ಕೆ ಅವಕಾಶ ನೀಡಿಲ್ಲ.

**ಪೊಲೀಸ್ ಠಾಣೆಯೂ ಇಲ್ಲ:** ಗ್ರಾಮದ ಬಹುತೇಕ ಮಂದಿ




ಇರಾನ್, ಅರಬ್ ದೇಶಗಳು ಸೇರಿದಂತೆ ಜಗತ್ತಿನ ವಿವಿಧ ದೇಶಗಳ ಜೊತೆ ವ್ಯಾಪಾರ, ವಹಿವಾಟು, ಶಿಕ್ಷಣದ ಕಾರಣಕ್ಕೆ ಸಂಪರ್ಕ ಹೊಂದಿದ್ದಾರೆ. ಅಲ್ಲದೆ ಗ್ರಾಮದ ಕೆಲವರು ಹರಳುಗಳ ವ್ಯಾಪಾರ ಸಹ ನಡೆಸುವರು. ಇದು ವಜ್ರದ ವ್ಯಾಪಾರಿಗಳ ಊರು ಎಂದು ಜಿಲ್ಲೆಯ ಹಲವರು ನುಡಿಯುವರು.

ಇಷ್ಟೆಲ್ಲಾ ವ್ಯಾಪಾರ ವಹಿವಾಟನ್ನು ಹೊಂದಿದ್ದರೂ ಗ್ರಾಮದಲ್ಲಿ ಪೊಲೀಸ್ ಠಾಣೆ ಇಲ್ಲ. ಪಕ್ಕದ ಮಂಚೇನಹಳ್ಳಿ ಠಾಣೆ ವ್ಯಾಪ್ತಿಗೆ ಅಲೀಪುರ ಒಳಪಡುತ್ತದೆ. ಅಲೀಪುರ ಪಂಚಾಯಿತಿಯಲ್ಲಿ 28 ಮಂದಿ ಸದಸ್ಯರು ಇದ್ದಾರೆ. ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗ ಸೇರಿದಂತೆ ಎಲ್ಲರೂ ಪಂಚಾಯಿತಿ ಸದಸ್ಯರಾಗಿದ್ದಾರೆ. ಎಲ್ಲರೂ ಒಗ್ಗಟ್ಟಿನಿಂದ ಇದ್ದಾರೆ. ಮದ್ಯದ ಅಂಗಡಿಗೆ ಅವಕಾಶ ನೀಡದಿರಲು ತೀರ್ಮಾನಿಸಿದ್ದಾರೆ. ಅಂಜುಮನ್ ಜಾಫರಿಯಾ ಸಂಸ್ಥೆಯೂ ಮದ್ಯದ ಅಂಗಡಿ ಆರಂಭಕ್ಕೆ ಒಪ್ಪಿಗೆ ನೀಡುವುದಿಲ್ಲ ಎಂದು ಹೇಳಿದರು.

**ಬೆಳ್ಳಿಕುಂಟೆ ಅಲೀಪುರವಾಯಿತು:** ಅಲೀಪುರದ ಮೂಲ ಹೆಸರು ಬೆಳ್ಳಿಕುಂಟೆ. ಈ ಹಿಂದೆ ಬಿಜಾಪುರ ಆದಿಲ್‌ಶಾಹಿಗಳ ಅವಧಿಯಲ್ಲಿ ಅಲ್ಲಿನ ಜನರು ಇಲ್ಲಿಗೆ ವಲಸೆ ಬಂದರು. ಮುಸ್ಲಿಮರ ಸಂಖ್ಯೆ ಹೆಚ್ಚಿದಂತೆ ಬೆಳ್ಳುಕುಂಟೆವು ಅಲೀಪುರವಾಗಿ ರೂಪಾಂತರವಾಯಿತು. ಅಲಿಪುರದಲ್ಲಿ ಶಿಯಾ ಮುಸ್ಲಿಮರೇ ಬಹುಸಂಖ್ಯಾತರು. ದಕ್ಷಿಣ ಭಾರತದಲ್ಲಿ ಶಿಯಾ ಮುಸ್ಲಿಮರು ಹೆಚ್ಚಿರುವ ಗ್ರಾಮಗಳಲ್ಲಿ ಅಲೀಪುರವು ಪ್ರಮುಖವಾಗಿದೆ. ಗ್ರಾಮದಲ್ಲಿ ಅಂಜುಮನ್ ಜಾಫರಿಯಾ ಸಮಿತಿಯೇ ಕೇಬಲ್ ಚಾನಲ್ ಹೊಂದಿದೆ.

**ಏನೇ ಸಮಸ್ಯೆಗಳು ಬಂದರೂ ಅಂಜುಮನ್ ಜಾಫರಿಯಾ ಸಂಸ್ಥೆಯ ನೇತೃತ್ವದಲ್ಲಿ ಪರಿಹರಿಸಲಾಗುತ್ತದೆ. ನಮ್ಮೂರಿನಲ್ಲಿ ಗಲಾಟೆ ಮಾಡಿ ಕೊಂಡು ಅಥವಾ ನಾನಾ ಕಾರಣಕ್ಕೆ ಪೊಲೀಸ್ ಠಾಣೆ ಮೆಟ್ಟಿಲೇರುವುದು ಕಡಿಮೆ. ನಮ್ಮಲ್ಲಿಯೇ ನ್ಯಾಯ ಪಂಚಾಯಿತಿ ಮಾಡಲಾಗುತ್ತದೆ' ಎಂದು ಅಲೀಪುರ ಗ್ರಾಮಸ್ಥ ಮೀರ್ ಯಾಕುಬ್ ಅಲಿ ತಿಳಿಸಿದರು.**

# ರೈತ ಹೋರಾಟಕ್ಕೆ ಮಹಿಳಾ ಸಂಘಟನೆ ಬೆಂಬಲ

• **ಉದಯವಾಹಿನಿ, ಹುಳಿಯಾರು**

ಪಟ್ಟಣದಲ್ಲಿ ವಿವಿಧ ಮಹಿಳಾ ಸಂಘಟನೆಗಳಿಂದ ದೇವನಹಳ್ಳಿ, ಚನ್ನರಾಯಪಟ್ಟಣ ತಾಲ್ಲೂಕಿನ 13 ಹಳ್ಳಿಗಳ ರೈತರ ಕೃಷಿ ಭೂಮಿಯನ್ನು ರಾಜ್ಯ ಸರ್ಕಾರ ಸ್ವಾಧೀನ ಪಡಿಸಿಕೊಳ್ಳುತ್ತಿರುವುದನ್ನು ವಿರೋಧಿಸಿ ನಡೆಸುತ್ತಿರುವ ಹೋರಾಟ ಬೆಂಬಲಿಸಿ ಶುಕ್ರವಾರ ಪ್ರತಿಭಟನೆ ನಡೆಸಲಾಯಿತು. ಸುವರ್ಣ ವಿದ್ಯಾ ಚೇತನ ಅಧ್ಯಕ್ಷ ರಾಮಕೃಷ್ಣಪ್ಪ ಮಾತನಾಡಿ, ಅನ್ನ ಬೆಳೆವ ರೈತರ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಬಾರದು.

ಭೂಮಿ ವಶಪಡಿಸಿಕೊಂಡರೆ ರೈತರು ಬೀದಿಗೆ




ಬರುತ್ತಾರೆ. ಅಲ್ಲದೆ ಮುಂದಿನ ದಿನಗಳಲ್ಲಿ ತಿನ್ನುವ ಅನ್ನಕ್ಕೆ ಬರ ಬರಬಹುದು ಎಂದರು. ಸೃಜನ ಮಹಿಳಾ ಸಂಘಟನೆ ತಾಲ್ಲೂಕು ಘಟಕದ ಅಧ್ಯಕ್ಷೆ ಎನ್.ಇಂದಿರಮ್ಮ ಮಾತನಾಡಿ, ಹೋರಾಟ ನಿರತರನ್ನು ಪಶುಗಳಂತೆ ಎಳೆದಾಡಿದ್ದು ಖಂಡನೀಯ. ಇದೊಂದು ಅಮಾನವೀಯ ಘಟನೆ ಎಂದರು.

ಮಹಿಳಾ ಸಂಘಟನೆ ಪದಾಧಿಕಾರಿಗಳು ಉಪ ತಹಶೀಲ್ದಾರ್ ವಿನುತಾ ಅವರ ಮೂಲಕ ಭೂಸ್ವಾಧೀನ ಕೈಬಿಡುವಂತೆ ಆಗ್ರಹಿಸಿ ಮನವಿ ಸಲ್ಲಿಸಿದರು. ನಿರಾಶ್ರಿತ ಮಹಿಳಾ ಸಂಘಟನೆ ಅಧ್ಯಕ್ಷೆ ಜಯಲಕ್ಷ್ಮಮ್ಮ, ತಾಲ್ಲೂಕು ಸಿಐಟಿಯು ಘಟಕದ ಅಧ್ಯಕ್ಷೆ ಪೂರ್ಣಮ್ಮ ಮಾತನಾಡಿದರು. ಸರಸ್ವತಿ, ಮಮತಾ, ಜರೀನಾ, ವಸಂತಲಕ್ಷ್ಮಿ, ದೇವರಾಜಮ್ಮ, ದುರ್ಗಮ್ಮ, ಅಲೆಮಾರಿ ಸಂಘಟನೆ ಲಕ್ಷ್ಮಿ, ಮಾಲಾ ಭಾಗವಹಿಸಿದ್ದರು.

# ಬಸವಣ್ಣನವರ ಆದರ್ಶಗಳು ಪ್ರಸ್ತುತ

• **ಉದಯವಾಹಿನಿ, ಎಚ್.ಡಿ.ಕೋಟೆ**

ಬಸವ ಜಯಂತಿ ಕೇವಲ ಆಚರಣೆಗೆ ಸೀಮಿತವಾಗದೆ ಮಹನೀಯರ ಬೋಧನೆಗಳನ್ನು ಸ್ಮರಿಸುವ, ಹರಡುವ ಒಂದು ಸಂದರ್ಭವಾಗಿದೆ ಎಂದು ಗುಂಡ್ಲುಪೇಟೆ ಶಾಸಕ ಗಣೇಶ್ ಪ್ರಸಾದ್ ತಿಳಿಸಿದರು.ಪಟ್ಟಣದ ಚಾಮುಂಡೇಶ್ವರಿ ದೇವಸ್ಥಾನದ ಸಮೀಪದ ಬಸವ ಭವನ ನಿವೇಶನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ವತಿಯಿಂದ ಶುಕ್ರವಾರ ಹಮ್ಮಿಕೊಂಡಿದ್ದ ಬಸವ ಜಯಂತಿ, ಬಸವ ಭವನ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜಾತಿ ಜಾತಿ ಮತ್ತು ಧರ್ಮ ಧರ್ಮಗಳ ನಡುವೆ ಬ್ಯಾರಿಕೇಡ್ ಹಾಕಿಕೊಂಡಿರುವ ಇಂಥ ಸಂದರ್ಭದಲ್ಲಿ ಬಸವಣ್ಣನವರ ಆದರ್ಶಗಳು ಪ್ರಸ್ತುತವಾಗಿವೆ. ಅವುಗಳನ್ನು ಪಾಲಿಸುವ ಮೂಲಕ ಸಮಾಜದಲ್ಲಿ ಸುಂದರ ಬದುಕು ರೂಪಿಸಿಕೊಳ್ಳಬಹುದು ಎಂದರು.

ಸಮಾನತೆ ಮತ್ತು ಸಾಮಾಜಿಕ ನ್ಯಾಯ, ಶ್ರಮದ ಪ್ರಾಮುಖ್ಯತೆಯನ್ನು ಕಾಯಕವೇ ಕೈಲಾಸ ಎಂದರು. ಅನುಭವ ಮಂಟಪವನ್ನು ಸ್ಥಾಪಿಸಿ ಸರ್ವರಿಗೂ ಸಮಾನತೆಯನ್ನು ಸಾರಿದ ಮಹಾನ್ ದಾರ್ಶನಿಕ ಬಸವಣ್ಣ ಎಂದು ಹೇಳಿದರು. ಶಿಕ್ಷಣ ಸಂಸ್ಥೆಗಳಲ್ಲಿ ಯಾವುದೇ ಜಾತಿ, ಧರ್ಮ ಎಂದು ಕೇಳದೆ ಎಲ್ಲರಿಗೂ ಶಿಕ್ಷಣ ಮತ್ತು ದಾಸೋಹವನ್ನು ನಮ್ಮ ಸಮಾಜದ ಸ್ವಾಮೀಜಿಗಳು ನೀಡುತ್ತಿದ್ದಾರೆ.




ಸರ್ಕಾರಗಳೇ ಮಾಡಲು ಸಾಧ್ಯವಾಗದ ಬಹು ದೊಡ್ಡ ಕಾರ್ಯಕ್ರಮಗಳನ್ನು ಮಠ ಮಾನ್ಯಗಳು ಮಾಡುತ್ತಿವೆ ಎಂದರು. ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿ, ಬಸವಣ್ಣನವರು ನುಡಿದ ಆಶಯದಂತೆ ತಾಲ್ಲೂಕಿನಲ್ಲಿ ಕೆಲಸ ಮಾಡುತ್ತಿದ್ದು, ಸರ್ವರಿಗೂ ಸಮಾನತೆ, ಸಮಬಾಳು ಸಿಗಬೇಕು, ಎಲ್ಲರನ್ನೂ ಸಹೋದರತ್ವದಿಂದ ಕಾಣಬೇಕು ಎಂದರು.

ಎಲ್ಲರೂ ಒಟ್ಟಿಗೆ ಸೇರುವುದು, ಸಮಾಜದ ಒಳಿತಿಗೆ ಬೇಕಾದ ಯೋಜನೆಗಳನ್ನು ರೂಪಿಸುವುದೇ ಜಯಂತಿ ಆಚರಣೆ ಉದ್ದೇಶವಾಗಿದೆ. ಆದ್ದರಿಂದ ಸಮಾಜದ ಕಾರ್ಯಕ್ರಮಗಳನ್ನು ನಡೆಸಲು ಪಟ್ಟಣದ ಕೇಂದ್ರಸ್ಥಾನದಲ್ಲಿ ಬಸವ ಭವನ ನಿರ್ಮಿಸಲು ಎಲ್ಲಾ ರೀತಿಯ ನೆರವುಗಳನ್ನು ನಮ್ಮ ಸರ್ಕಾರದ ವತಿಯಿಂದ ನೀಡಲಾಗುವುದು ಎಂದರು.

# ಮಾವು ಬೆಳೆಗಾರರಿಗಿಲ್ಲ ಬೆಂಬಲ ಬೆಲೆ ಭಾಗ್ಯ

## ಎಚ್‌ಡಿಕೆ ಸೇರಿದಂತೆ ಸಂಬಂಧಪಟ್ಟವರನ್ನು ಬೆಳೆಗಾರರ ನಿಯೋಗವು ಶೀಘ್ರ, ಭೇಟಿ ಮಾಡಿ ಮನವಿ

• **ಉದಯವಾಹಿನಿ, ರಾಮನಗರ**

ಮಾವು ಬೆಲೆ ಕುಸಿತದಿಂದ ಕಂಗಾಲಾಗಿರುವ ಬೆಳೆಗಾರರ ಸಂಕಷ್ಟಕ್ಕೆ ಕಡೆಗೂ ಮಿಡಿದಿರುವ ಕೇಂದ್ರ ಸರ್ಕಾರ, ಮಾರುಕಟ್ಟೆ ಮಧ್ಯಸ್ಥಿಕೆ ಬೆಲೆ ಯೋಜನೆಯಡಿ (ಎಂಐಎಸ್) ಬೆಂಬಲ ಬೆಲೆ ಘೋಷಿಸಿದೆ. ಆದರೆ, ಬೆಂಗಳೂರು ದಕ್ಷಿಣ ಜಿಲ್ಲೆಯ ಬೆಳೆಗಾರರು ಈ ಬೆಂಬಲ ಬೆಲೆಯ ಭಾಗ್ಯದಿಂದ ವಂಚಿತರಾಗಿದ್ದಾರೆ. ರಾಜ್ಯದಲ್ಲೇ ಮೊದಲ ಬಾರಿಗೆ ರಾಮನಗರ ಜಿಲ್ಲೆಯ ಮಾವು ಮಾರುಕಟ್ಟೆ ಪ್ರವೇಶಿಸುವುದು ವಾಡಿಕೆ. ಬಳಿಕ ಕೋಲಾರ, ಚಿಕ್ಕಬಳ್ಳಾಪುರ ಸೇರಿದಂತೆ ಇತರೆಡೆ ಮಾವು ಅಬ್ಬರ ಶುರುವಾಗುತ್ತದೆ. ಜಿಲ್ಲೆಯಲ್ಲಿ ಈಗಾಗಲೇ ಕೊಯ್ಲು ಮತ್ತು ವಹಿವಾಟು ಮುಗಿದಿದೆ. ಬೆಂಬಲ ಬೆಲೆಯು ಈಗ ಕೊಯ್ಲು ಆರಂಭಿಸುವವವರಿಗಷ್ಟೇ ಅನ್ವಯಿಸುವುದರಿಂದ ಜಿಲ್ಲೆಯ ಬೆಳೆಗಾರರು ಅದರಿಂದ ಹೊರಗುಳಿಯಲಿದ್ದಾರೆ. ಬೆಂಬಲ ಬೆಲೆ ಆಸರೆಯೂ ಸಿಗದೆ ಅತಂತ್ರ ಸ್ಥಿತಿ ತಲುಪಿರುವ ಬೆಳೆಗಾರರ ಸ್ಥಿತಿ, ಮಾವು ಉತ್ಪಾದನೆ ಹಾಗೂ ಬೆಳೆ-ಬೆಲೆ ಕೈ ಕೊಟ್ಟಿರುವುದರಿಂದ ಆಗಿರುವ ನಷ್ಟಕ್ಕೆ ಪರ್ಯಾಯ ಪರಿಹಾರ ಒದಗಿಸುವ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸಲು ಅಧಿಕಾರಿಗಳು ಸಿದ್ಧತೆ ನಡೆಸಿದ್ದಾರೆ. ಮತ್ತೊಂದೆಡೆ ಮಾವು ಬೆಳೆಗಾರರ ಸಂಘವೂ ಸರ್ಕಾರದ ಗಮನ ಸೆಳೆಯಲು ಮುಂದಾಗಿದೆ.

**ಪತ್ರ ಬರೆದಿದ್ದ ಸಮಿತಿ:** ಬೆಲೆ ಕುಸಿತದಿಂದಾಗಿ ನಷ್ಟಕ್ಕೆ ಸಿಲುಕಿರುವ ಜಿಲ್ಲೆಯ ಮಾವು ಬೆಳೆಗಾರರಿಗೆ ಬೆಂಬಲ ಬೆಲೆ ನೀಡುವಂತೆ ಕೋರಿ, ಜಿಲ್ಲಾಧಿಕಾರಿ ನೇತೃತ್ವದ ಜಿಲ್ಲಾ ಮಟ್ಟದ ಸಮಿತಿ ಜೂನ್ 12ರಂದೇ




ಸರ್ಕಾರದ ಮುಖ್ಯ ಕಾರ್ಯದರ್ಶಿ, ಕೃಷಿ ಮಾರಾಟ ಇಲಾಖೆ ನಿರ್ದೇಶಕರು, ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರಿಗೆ ಪತ್ರ ಬರೆದಿದೆ. ಹೂ ಬಿಡುವು ಮತ್ತು ಕಾಯಿ ಕಟ್ಟುವಾಗ ಬಿದ್ದ ಆಲಿಕಲ್ಲು ಮಳೆ, ಗಾಳಿಯಿಂದಾಗಿ ಬೆಳೆಗೆ ಪೆಟ್ಟು ಬಿದ್ದಿದೆ. ಇದರಿಂದಾಗಿ ಪ್ರತಿ ಹೆಕ್ಟೇರ್‌ಗೆ ಮಾವಿನ ಸರಾಸರಿ ಇಳುವರಿ 2.68 ಟನ್‌ಗೆ ತಗ್ಗಿದೆ.

ಮಾವಿನಕಾಯಿ ಗುಣಮಟ್ಟವೂ ಕಳಪೆಯಾಗಿದ್ದರಿಂದ ಧಾರಣೆ ತೀವ್ರ ಕುಸಿದಿದೆ. ಹಾಗಾಗಿ, ಬೆಳೆಗಾರರಿಗೆ ಎನ್ ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಪ್ರತಿ ಹೆಕ್ಟೇರ್‌ಗೆ ರೂ.22,500 ಬೆಂಬಲ ಬೆಲೆ ನೀಡಬೇಕು ಎಂದು ಸಮಿತಿ ಪತ್ರದಲ್ಲಿ ಕೋರಿತ್ತು.

**ಕೈಕೊಟ್ಟ ಬೆಳೆ-ಬೆಲೆ:** ಜಿಲ್ಲೆಯ ಮಾವಿನ ತೋಟಗಳಲ್ಲಿ ಏಪ್ರಿಲ್ ಆರಂಭದಿಂದಲೇ ಕೊಯ್ಲು ಆರಂಭವಾಗಿ ಮಂಡಿಗೆ ಕಾಯಿಗಳು ಬರತೊಡಗುತ್ತವೆ. ಹಣ್ಣು ಮಾಡುವ ಪ್ರಕ್ರಿಯೆಯೂ ಶುರುವಾಗುತ್ತದೆ. ಜೂನ್ ತಿಂಗಳಾಂತ್ಯಕ್ಕೆ ಕೊಯ್ಲು ಮಾರಾಟ ಸೇರಿದಂತೆ ಎಲ್ಲಾ ರೀತಿಯ ವಹಿವಾಟುಗಳು ಮುಗಿಯುತ್ತವೆ. ಈ ಸಲ ಜೂನ್ ಆರಂಭದಲ್ಲೇ ಕಾಯಿಗಳು ಮಂಡಿಗೆ ಬರುವುದು ನಿಲ್ಲತೊಡಗಿತು. ಹವಾಮಾನ ವೈಪರೀತ್ಯ ಹಾಗೂ ರೋಗಬಾಧೆಯಿಂದಾಗಿ ಬೆಳೆ ಕೈ ಕೊಟ್ಟಿತು. ಅಷ್ಟೂ ಇಷ್ಟೂ ಬೆಳೆ ಉಳಿಸಿಕೊಂಡವರಿಗೆ ಬೆಲೆಯೂ ಸಿಗದಾಯಿತು. ಇದರಿಂದಾಗಿ ಬೆಳೆಗಾರರಷ್ಟೇ ಅಲ್ಲದೆ ವ್ಯಾಪಾರಿಗಳು ಸಹ ನಷ್ಟ ಅನುಭವಿಸಿದ್ದಾರೆ. ಕಳೆದ ಸಲ ಇದಕ್ಕಿಂತಲೂ ಹೆಚ್ಚು ಬೆಳೆ ನಷ್ಟವಾಗಿತ್ತು. ಸಂಕಷ್ಟದಲ್ಲಿರುವ ಬೆಳೆಗಾರರಿಗೆ ಸರ್ಕಾರ ನೆರವಾಗಬೇಕು' ಎಂದು ರೈತಸಂಘದ ಮುಖಂಡ ಸಿ. ಪುಟ್ಟಸ್ವಾಮಿ ಒತ್ತಾಯಿಸಿದರು.

**ಸಂಕಷ್ಟದಲ್ಲಿರುವ ಬೆಳೆಗಾರರಿಗೆ ಸರ್ಕಾರ ಪ್ರತಿ ಹೆಕ್ಟೇರ್‌ಗೆ ರೂ.45 ಸಾವಿರ ಪರಿಹಾರ ನೀಡಬೇಕು. ಈ ಕುರಿತು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಸೇರಿದಂತೆ ಸಂಬಂಧಪಟ್ಟವರನ್ನು ಬೆಳೆಗಾರರ ನಿಯೋಗವು ಶೀಘ್ರ, ಭೇಟಿ ಮಾಡಿ ಮನವಿ ಸಲ್ಲಿಸಲಿದೆ**

**- ಧರಣೇಶ್ ಅಧ್ಯಕ್ಷ ಬೆಂಗಳೂರು ದಕ್ಷಿಣ ಜಿಲ್ಲೆ ಮಾವು ಬೆಳೆಗಾರರ ಸಂಘ**

# ಮತ್ತೊಂದು ಸುತ್ತಿನ ರಾಜಕೀಯ ಜಟಾಪಟಿ!

## ಕಾಂಗ್ರೆಸ್ ಬೆಂಬಲಿತರು ಭರ್ಜರಿ ಮೇಲುಗೈ ಸಾಧಿಸುತ್ತಿದ್ದಂತೆ ಅಧ್ಯಕ್ಷ ಸ್ಥಾನದ ಚರ್ಚೆ

• **ಉದಯವಾಹಿನಿ, ಕೋಲಾರ**

ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಕೋಮುಲ್ ಆಡಳಿತ ಮಂಡಳಿ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತರು ಭರ್ಜರಿ ಮೇಲುಗೈ ಸಾಧಿಸುತ್ತಿದ್ದಂತೆ ಅಧ್ಯಕ್ಷ ಸ್ಥಾನದ ಚರ್ಚೆಗಳು ಗರಿಗೆದರಿವೆ. ಕಳೆದ ಐದು ವರ್ಷ ಒಕ್ಕೂಟದ ಅಧ್ಯಕರಾಗಿದ್ದ ಕಾಂಗ್ರೆಸ್ ಶಾಸಕ ಕೆ.ವೈ.ನಂಜೇಗೌಡ ಮೂರನೇ ಬಾರಿ ನಿರ್ದೇಶಕರಾಗಿ ಆಯ್ಕೆಯಾಗಿದ್ದು, ಮತ್ತೆ ಅಧ್ಯಕ್ಷ ಗಾದಿ ಮೇಲೆ ಕಣ್ಣಿಟ್ಟಿದ್ದಾರೆ.

ಅವರ ವಿರುದ್ಧ ಪದೇಪದೇ ಮಾತಿನ ವಾಗ್ದಾಳಿ ನಡೆಸುತ್ತಿರುವ ಸ್ವಪಕ್ಷೀಯ ಶಾಸಕ ಬಂಗಾರಪೇಟೆಯ ಎಸ್.ಎನ್.ನಾರಾಯಣಸ್ವಾಮಿ ಕೂಡ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಯಾಗುವ ಸಾಧ್ಯತೆಗಳಿವೆ. ಕಾಂಗ್ರೆಸ್‌ನ ಎರಡು ಬಣಗಳಲ್ಲಿ ಗುರುತಿಸಿಕೊಂಡಿರುವ ಇವರಿಬ್ಬರು ಅಗತ್ಯ ವಿರುವ ನಿರ್ದೇಶಕರ ಬೆಂಬಲ ಗಿಟ್ಟಿಸಿಕೊಳ್ಳಲು ಸಿದ್ಧತೆ ನಡೆಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ. ಅಕಸ್ಮಾತ್ ಒಬ್ಬರ ಸ್ಪರ್ಧೆಗೆ ಕಾಂಗ್ರೆಸ್‌ನ ಯಾವುದೇ ಬಣದಿಂದ ವಿರೋಧ ವ್ಯಕ್ತವಾದರೆ ಜೆಡಿಎಸ್-ಬಿಜೆಪಿ ಮೈತ್ರಿಕೂಟ ಬೆಂಬಲಿತ ಸದಸ್ಯರನ್ನು ತಮ್ಮ ಕಡೆಗೆ ಸೆಳೆದು ನೆರವು ಗಿಟ್ಟಿಸಿಕೊಂಡರೂ ಅಚ್ಚರಿ ಇಲ್ಲ ಎನ್ನಲಾಗುತ್ತಿದೆ. ಈ ನಡುವೆ ಸಚಿವ ಕೆ.ಎಚ್.ಮುನಿಯಪ್ಪ ತಾವು ಸೂಚಿಸುವ ಅಭ್ಯರ್ಥಿಗೆ ಅವಕಾಶ ಮಾಡಿಕೊಡಬೇಕೆಂದು ಕೋರಿದ್ದಾರೆ ಎಂಬ ಮಾತುಗಳು ಆ ಬಣದಿಂದ ಕೇಳಿ ಬರುತ್ತಿದೆ. ತಮ್ಮ ಸ್ಪರ್ಧೆ ಬಗ್ಗೆ ಪ್ರತಿಕ್ರಿಯಿಸಿರುವ ನಂಜೇಗೌಡ, 'ಅಧ್ಯಕ್ಷ ಸ್ಥಾನ ಅಭ್ಯರ್ಥಿ ಆಯ್ಕೆ ವಿಚಾರ ಕಾಂಗ್ರೆಸ್ ವರಿಷ್ಠರಿಗೆ




ಬಿಟ್ಟಿದ್ದು. ರಾಜ್ಯ, ಕೋಲಾರ ನಾಯಕರ ಸೂಚನೆಯಂತೆ ನಡೆಯುತ್ತೇವೆ. ಕಾಂಗ್ರೆಸ್ ಬೆಂಬಲಿತ 9 ನಿರ್ದೇಶಕರು ಗೆದ್ದಿದ್ದು. ನಾವು ಮೇಲುಗೈ ಹೊಂದಿದ್ದೇವೆ ಎಂದಿದ್ದಾರೆ. ಈ ಬಗ್ಗೆ ಮಾತನಾಡಿರುವ ನಾರಾಯಣಸ್ವಾಮಿ, ಪಕ್ಷದ ವರಿಷ್ಠರು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸಿದ್ದರಾಮಯ್ಯ ಬಳಿ ನನ್ನ ಅಹವಾಲು ಹೇಳುತ್ತೇನೆ.

ಅವರು ಏನು ತೀರ್ಮಾನ ಮಾಡುತ್ತಾರೆಯೋ ಅದಕ್ಕೆ ಬದ್ಧ ಎಂದು ನುಡಿದಿದ್ದಾರೆ. ಕಾಂಗ್ರೆಸ್ ಬೆಂಬಲದಲ್ಲಿ ನಂಜೇಗೌಡ ಸೇರಿದಂತೆ ಘಟಬಂಧನ್ ಏಳು ನಿರ್ದೇಶಕರು ಗೆದ್ದಿದ್ದಾರೆ. ಕೆ.ಎಚ್.ಮುನಿಯಪ್ಪ ಬಣದ ಮಹಾಲಕ್ಷ್ಮಿ, ಇನ್ನು ಸ್ವತಃ ಎಸ್.ಎನ್.ನಾರಾಯಣಸ್ವಾಮಿ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ.

ಕೋಮುಲ್ ಅಧ್ಯಕ್ಷ ಸ್ಥಾನಕ್ಕೆ ಸದ್ಯದಲ್ಲೇ ಚುನಾವಣಾ ಪ್ರಕ್ರಿಯೆ ನಡೆಯಲಿದೆ. ಜೆಡಿಎಸ್-ಬಿಜೆಪಿ ಮೈತ್ರಿಕೂಟದ ನಾಲ್ವರು ಗೆದ್ದಿದ್ದು, ಅವರ ಪಾತ್ರ ಏನಿರಬಹುದು ಎಂಬ ಚರ್ಚೆಯೂ ನಡೆಯುತ್ತಿದೆ. ಕಾಂಗ್ರೆಸ್ ಗುಂಪುಗಾರಿಯನ್ನೇ ಮುಂದಿಟ್ಟುಕೊಂಡಿರುವ ಮೈತ್ರಿ ನಾಯಕರು ಒಳಗೊಳಗೆ ತಂತ್ರಗಾರಿಕೆ ರೂಪಿಸುತ್ತಿದ್ದಾರೆ. ಚುನಾವಣೆ ವೇಳೆಗೆ ಏನೆಲ್ಲಾ ಬೆಳವಣಿಗೆ ನಡೆಯಬಹುದು.

ಯಾರು ಯಾರನ್ನು ಸೆಳೆಯಲು ಪ್ರಯತ್ನಿಸಬಹುದು ಎಂಬ ಕುತೂಹಲ ಮೂಡಿಸಿದೆ.ಕೋಮುಲ್‌ನಲ್ಲಿ ಚುನಾಯಿತ 13 ನಿರ್ದೇಶಕರು, ಸರ್ಕಾರದ 5 ಪ್ರತಿನಿಧಿಗಳು ಸೇರಿ 18 ಸ್ಥಾನ ಇವೆ. ಹೀಗಾಗಿ, ಅಧ್ಯಕ್ಷ ಸ್ಥಾನ ಗೆಲ್ಲಲು 10 ನಿರ್ದೇಶಕರ ಬೆಂಬಲ ಬೇಕಾಗುತ್ತದೆ. ಹಾಗೆ ನೋಡಿದರೆ 9 ನಿರ್ದೇಶಕ ಸ್ಥಾನಗಳನ್ನು ಈಗಾಗಲೇ ಗೆದ್ದಿರುವ ಕಾಂಗ್ರೆಸ್ ಬೆಂಬಲಿತರೇ ಆಡಳಿತ ಚುಕ್ಕಾಣಿ ಹಿಡಿಯುವ ಸಾಧ್ಯತೆ ಹೆಚ್ಚಿದ್ದು, ಅಧ್ಯಕ್ಷ ಸ್ಥಾನ ಯಾರಿಗೆ ಒಲಿಯಲಿದೆ ಎಂಬುದು ಸದ್ಯದ ಕುತೂಹಲ.

### ಹೈಕಮಾಂಡ್ ಸೂಚನೆಯಂತೆ ನಡೆ

**ಕೋಮುಲ್ ಅಧ್ಯಕ್ಷ ಸ್ಥಾನಕ್ಕೆ ನಾನು ಸೇರಿದಂತೆ ಯಾರೂ ಆಕಾಂಕ್ಷಿಗಳು ಅಲ್ಲ. ಅವಕಾಶ ಮಾಡಿಕೊಟ್ಟರೆ ಎಲ್ಲರೂ ಸ್ಪರ್ಧಿಸಲು ಸಿದ್ಧರಿದ್ದೇವೆ. ಹೈಕಮಾಂಡ್ ಯಾರನ್ನೇ ಸೂಚಿಸಿದರೂ ಅವರಿಗೆ ಬೆಂಬಲ ನೀಡುತ್ತೇವೆ. ಎಸ್.ಎನ್.ನಾರಾಯಣಸ್ವಾಮಿ ಈಗ ನಿರ್ದೇಶಕರಾಗಿದ್ದಾರೆ ಅವರನ್ನು ಸ್ವಾಗತಿಸುತ್ತೇನೆ ಕೆ.ವೈ.ನಂಜೇಗೌಡ ಶಾಸಕ ಕೋಮುಲ್ ನಿರ್ದೇಶಕ**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಹೊಸ ಕುಟುಂಬದ ಸದಸ್ಯರ ಆಗಮನದ ಸುದ್ದಿ ನಮ್ಮನ್ನು ರೋಮಾಂಚನಗೊಳಿಸಬಹುದು. ನಿರೀಕ್ಷೆಯಲ್ಲಿ ಒಂದು ಪಾರ್ಟಿ ನೀಡುವ ಮೂಲಕ ನಿಮ್ಮ ಸಂತೋಷವನ್ನು ಆಚರಿಸಿ.

**ವೃಷಭ** ಪ್ರಣಯ ಮತ್ತು ಸಾಮಾಜಿಕವಾಗಿ ಬೆರೆಯುವುದು ಬಾಕಿಯಿರುವ ಕೆಲಸಗಳ ಹೊರತಾಗಿಯೂ ನಿಮ್ಮ ಮನಸ್ಸಿನ ಮೇಲೆ ಪ್ರಭಾವ ಬೀರುತ್ತವೆ. ಚಿಲ್ಲರೆ ಮತ್ತು ಸಗಟು ವ್ಯಾಪಾರಿಗಳಿಗೆ ಒಳ್ಳೆಯ ದಿನ.

**ಮಿಥುನ** ದಿನ ನಿಕಟ ಸಂಬಂಧಿಗಳು, ಸ್ನೇಹಿತರಿಂದ ಉತ್ತಮ ಸುದ್ದಿಯೊಡನೆ ಆರಂಭವಾಗುತ್ತದೆ. ಪ್ರಣಯದ ನೆನಪುಗಳು ನಿಮ್ಮ ದಿನವನ್ನು ಆಕ್ರಮಿಸುತ್ತವೆ. ನೀವು ಒಂದು ದಿನದ ತಜೆಯ ಮೇಲೆ ಹೋಗುತ್ತಿದ್ದಲ್ಲಿ ಚಿಂತಿಸಬೇಡಿ.

**ಕರ್ಕಾಟಕ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ತಮ್ಮ ವ್ಯಾಪರಕ್ಕಾಗಿ ಮನೆಯಿಂದ ಹೊರಗೆ ಹೋಗಿರುವ ವ್ಯಾಪಾರಿಗಳು, ಹಣವನ್ನು ಜಾಗರೂಕವಾಗಿಡಿ, ಹಣದ ಕಳ್ಳತನವಾಗುವ ಸಾಧ್ಯತೆ ಇದೆ.

**ಸಿಂಹ** ಆಕರ್ಷಕವಾದ ಮತ್ತು ನಿಮ್ಮನ್ನು ಶಾಂತವಾಗಿರಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ಅದು ನಿಮ್ಮ ಕೈಯಿಂದ ಜಾರಿಹೋಗದಿರಲು ಪ್ರಯತ್ನಿಸಿ.

**ಕನ್ಯಾ** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ತುಲಾ** ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ.

**ವೃಶ್ಚಿಕ** ಬಲವಾದ ಧೃಢತೆ, ನಿರ್ಭಯತೆ ನಿಮ್ಮ ಮಾನಸಿಕ ಶಕ್ತಿ ವರ್ಧಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತವೆ. ಇದು ನಿಮಗೆ ಯಾವುದೇ ಪರಿಸ್ಥಿತಿಯನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಉತ್ತೇಜಿಸುವುದರಿಂದ ಇದನ್ನು ಕಾಯ್ದುಕೊಳ್ಳಿ.

**ಧನಸ್ಸು** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ಅಹಂಭಾವ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ.

**ಮಕರ** ನಿಮ್ಮ ಬಗ್ಗೆ ಕೆಟ್ಟ ಭಾವನೆ ಹೊಂದಿದ್ದ ಯಾರಾದರೂ ವಿಷಯವನ್ನು ಸ್ಪಷ್ಟಗೊಳಿಸಲು ಹಾಗೂ ನಿಮ್ಮ ಜೊತೆ ರಾಜಿ ಮಾಡಿಕೊಳ್ಳಲು ಪ್ರಯತ್ನಿಸುವ ಒಂದು ದಿನ. ಧಾರ್ಮಿಕ ಮತ್ತು ಶುದ್ಧ ಪ್ರೀತಿಯನ್ನು ಅನುಭವಿಸಿ.

**ಕುಂಭ** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ಮೀನ** ವಿಶೇಷವಾಗಿ ಹೃದಯ ರೋಗಿಗಳು ಕಾಫಿಯನ್ನು ಬಿಡಬೇಕು. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

# ಶಿಥಿಲಗೊಂಡ ಗೋವನಕೊಪ್ಪ ಸರ್ಕಾರಿ ಪ್ರೌಢಶಾಲೆ ಕಟ್ಟಡ

• ಉದಯವಾಹಿನಿ, ಚಕುಳಗೇರಿ ಕ್ರಾಸ್

ಗೋವನಕೊಪ್ಪ ಸರ್ಕಾರಿ ಪ್ರೌಢಶಾಲೆಯ ವರ್ಗದ ಕೊಠಡಿಗಳು ಶಿಥಿಲಗೊಂಡು ವರ್ಷವೇ ಕಳೆದರೂ ರಿಪೇರಿ ನಡೆದಿಲ್ಲ. ಮಕ್ಕಳು ಶಾಲಾ ಆವರಣದಲ್ಲಿಯೇ ಕುಳಿತು ಪಾಠ ಆಲಿಸುವಂತ ಪರಿಸ್ತಿತಿ ನಿರ್ಮಾಣವಾಗಿದೆ.

ಪ್ರೌಢ ಶಾಲೆಯ ವರ್ಗದ ಕೊಠಡಿಗಳನ್ನು ನಿರ್ಮಾಣ ಮಾಡುವಲ್ಲಿ ಶಿಕ್ಷಣ ಇಲಾಖೆ ಹಿಂದೇಟು ಹಾಕುತ್ತಿರುವುದು ಶಾಲೆಯಲ್ಲಿ ವ್ಯಾಸಾಂಗ ಮಾಡುತ್ತಿರುವ ವಿದ್ಯಾರ್ಥಿನೀಯರ ಹಾಗೂ ಪಾಲಕರ ಮತ್ತು ಗ್ರಾಮದ ಪ್ರಮುಖರ ಆಕ್ರೋಶಕ್ಕೆ ಕಾರಣವಾಗಿದೆ.

ಗೋವನಕೊಪ್ಪ ಪ್ರೌಢ ಶಾಲೆಯಲ್ಲಿರುವ 6 ಕೊಠಡಿಗಳು ಮೇಲ್ಛಾವಣೆಯಲ್ಲಿರುವ ಕಬ್ಬಿಣದ ಸರಳುಗಳು ಹಾಗೂ ಮೇಲ್ಛಾವಣೆಯ ಸಿಮೆಂಟ್ ಕಾಂಕ್ರೇಟ್ ತುಂಡುಗಳು ಉದಿರು ಬೀಳುತ್ತಿವೆ ಎಲ್ಲಾ ಕೊಠಡಿಗಳು ಸಂಪೂರ್ಣ ಹಾಳಾಗಿವೆ ಎಂದು ಶಿಕ್ಷಣ ಇಲಾಖೆಗೆ ಪ್ರೌಢ ಶಾಲೆಯ ಮುಖ್ಯಶಿಕ್ಷಕಿ ಎಸ್.ವಿ. ಸಾಲಿಮಠ ಅವರು ವರದಿ ನೀಡಿ ವರ್ಷವೇ ಕಳೆದಿವೆ ಎಂದು ಮಕ್ಕಳ ಪಾಲಕರಿಗೆ ತಿಳಿಸಿದರು.

2025-26 ನೇ ಶೈಕ್ಷಣಿಕ ವರ್ಷದ ಪ್ರೌಢಶಾಲೆಯಲ್ಲಿ 8 ನೇ ತರಗತಿಗೆ 57 ಗಂಡು ಹಾಗೂ 48 ಹೆಣ್ಣು ಒಟ್ಟು -105, 9ನೇ ವರ್ಗಕ್ಕೆ 77 ಗಂಡು ಹಾಗೂ 48 ಹೆಣ್ಣು ಒಟ್ಟು -125, 10 ನೇ ವರ್ಗಕ್ಕೆ 43 ಗಂಡು ಹಾಗೂ 61 ಹೆಣ್ಣು ಒಟ್ಟು 104 ಸೇರಿದಂತೆ ಪ್ರೌಢ ಶಾಲೆಯಲ್ಲಿ ಒಟ್ಟು 334 ವಿದ್ಯಾರ್ಥಿಗಳು ದಾಖಲಾತಿ ಹೊಂದಿದ್ದಾರೆ.


ಪ್ರೌಢ ಶಾಲೆಯ ಪ್ರತಿಯೊಂದು ವರ್ಗದ ಕೊಠಡಿಯಲ್ಲಿ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದ್ದರಿಂದ ಒಂದೊಂದು ಡೆಸ್ಕನಲ್ಲಿ ನಾಲ್ಕೈದು ಮಕ್ಕಳು ಸೇರಿ ಪಾಠ ಆಲಿಸುವುದು, ಕೆಲವು ವಿದ್ಯಾರ್ಥಿಗಳಿಗೆ ನೆಲ ಹಾಸಿಗೆಯೇ ಕುಳಿತುಕೊಳ್ಳುವ ಆಸನವಾಗಿದೆ. ಈ ಪ್ರೌಢಶಾಲೆಗೆ ಕುಳಗೇರಿ ಹೋಬಳಿಯ ಕುಳಗೇರಿ, ತಿಮ್ಮಾಪುರ ಎಸ್.ಎನ್, ಖಾನಾಪುರ ಎಸ್.ಕೆ, ಆಲೂರು ಎಸ್.ಕೆ, ಬೀರನೂರ, ತಳಕವಾಡ, ಹಾಗನೂರ ಹಾಗೂ ಕರ್ಲಕೊಪ್ಪ ಚಿರ್ಲಕೊಪ್ಪ, ವಡವಟ್ಟಿ ಗ್ರಾಮಗಳ ಬಹುತೇಕ ವಿದ್ಯಾರ್ಥಿಗಳು ವ್ಯಾಸಾಂಗಕ್ಕೆ ಬರುತ್ತಾರೆ.

ಶಿಥಿಲಗೊಂಡ ವರ್ಗದ ಕೊಠಡಿಯಲ್ಲಿ ಮಕ್ಕಳ ಪಾಠ ಭೋಧನೆಗೆ ಗ್ರಾಮಸ್ಥರ ಸಂಪೂರ್ಣ ವಿರೋಧವಿದೆ ಹಾಗೂ ಮುಂದಿನ ದಿನಮಾನಗಳಲ್ಲಿ ಪ್ರೌಢ ಶಾಲೆಯ ಮಕ್ಕಳಿಗೆ ವರ್ಗದ ಕೊಠಡಿಗಳನ್ನು ನಿರ್ಮಾಣ ಮಾಡದೆ ಹೋದರೇ ಮಕ್ಕಳು ಹಾಗೂ ಪಾಲಕರು ಸೇರಿ ಶಾಲೆಗೆ ಬೀಗ ಜಡಿದು ಪ್ರತಿಭಟನೆ ಮಾಡುವ ಕಾಲ ಸನ್ನಿಹವಾಗಿದೆ ಎಂದು ಗ್ರಾಮದ ಮುದಕಣ್ಣ ಹೆರಕಲ್, ರಾಜು ಹರಿಜನ, ದಾವಲಸಾಬ ಹೊಸಮನಿ, ಮುರುಳೀಧರ ಯಡನ್ನವರ, ಹನುಮಂತಗೌಡ ಪಾಟೀಲ, ಲಚ್ಚಪ್ಪ ದೊಡಮನಿ, ಲಕ್ಷ್ಮಣ ಹರಿಜನ, ಸುರೇಶ ಅಮಟರ್, ರಂಗನ ಗೌಡ ಪಾಟೀಲ, ಪಾಂಡು ಗಿಡ್ನಂದಿ, ನಾಗಪ್ಪ ಹಸಬಿ ಮುಂತಾದವರು ಎಚ್ಚರಿಕೆ ನೀಡಿದ್ದಾರೆ. ಕ್ಷೇತ್ರಶಿಕ್ಷಣಾಧಿಕಾರಿ ಕೇಶವ ಪೆಟ್ಲೂರ ಅವರು ಪ್ರೌಢಶಾಲೆಗೆ ಬಂದು ಸಮಸ್ಯೆಗೆ ಪರಿಹಾರ ನೀಡುವಂತೆ ಒತ್ತಾಯಿಸಿದರು.

**ಸಮಸ್ಯೆಗೆ ಪರಿಹಾರ ಮಾಡೋಣ**

**ಬಾದಾಮಿ ಕ್ಷೇತ್ರಶಿಕ್ಷಣಾಧಿಕಾರಿ ಕೇಶವ ಪೆಟ್ಲೂರು ಸಂಪರ್ಕಿಸಿದಾಗ, 'ಗೋವನಕೊಪ್ಪ ಪ್ರೌಢಶಾಲೆಗೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದೇನೆ. ಗ್ರಾಮಸ್ಥರ ಸಮಸ್ಯೆಯನ್ನು ಆಲಿಸಿದ್ದು, ಈ ಗ್ರಾಮಕ್ಕೆ ಕೆಪಿಎಸ್ ಮಂಜೂರಾತಿಗೆ ವರದಿ ಕಳುಹಿಸಿದ್ದೇನೆ. ಶಾಸಕ ಜತೆ ಚರ್ಚೆ ಮಾಡಿ ಸಮಸ್ಯೆಗೆ ಪರಿಹಾರ ಮಾಡೋಣ ಎಂದರು.**





ಉದಯವಾಹಿನಿ ಚಿತ್ರ

**ಈ ಪ್ರೌಢಶಾಲೆಯು 1996 ರಲ್ಲಿ ಪ್ರಾರಂಭವಾಗಿದೆ. ಈ ಶಾಲೆ ಆರಂಭದಿಂದಲೂ ಉತ್ತಮವಾದ ಶಿಕ್ಷಕ ವರ್ಗವನ್ನು ಹೊಂದಿದ್ದು ಇಲ್ಲಿ ಮಕ್ಕಳ ದಾಖಲಾತಿಯೂ ಆರಂಭದಲ್ಲಿ ಕಡಿಮೆಯಾದರೂ ನಂತರದ ದಿನಗಳಲ್ಲಿ ಉತ್ತಮವಾದ ದಾಖಲೆ ಹೊಂದಿದೆ. ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮವಾದ ಫಲಿತಾಂಶವನ್ನು ನೀಡುತ್ತಾ ಈ ಭಾಗದಲ್ಲಿನ ಉತ್ತಮ ಪ್ರೌಢಶಾಲೆ ಎಂಬ ಹೆಸರು ಮಾಡಿದೆ. ಹೊಸ ಕೊಠಡಿಗಳನ್ನು ನೀಡುವಲ್ಲಿ ವಿಳಂಬವಾಗುತ್ತಿರುವುದರಿಂದ ಮಕ್ಕಳಿಗೆ ಶಾಲೆಯ ಆವರಣದಲ್ಲಿಯೇ ಪಾಠ ಮಾಡಬೇಕಾದ ಹಾಗೂ ಮಕ್ಕಳು ಆಲಿಸಬೇಕಾದ ಸ್ಥಿತಿ ನಿರ್ಮಾಣವಾಗಿದೆ. -ಪ್ರವೀಣ ಮೇಟಿ, ಗ್ರಾಮಸ್ಥ**

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಹನುಮಂತಗೌಡ ಮಿರ್ಜಿ ಸಂಪರ್ಕಿಸಿದಾಗ 'ಸದರಿ ಪ್ರೌಢ ಶಾಲೆಗೆ ಬಾದಾಮಿ ಕ್ಷೇತ್ರ ಶಿಕ್ಷಣಾಧಿಕಾರಿ ಕೇಶವ ಪೆಟ್ಲೂರ ಅವರನ್ನು ಭೇಟಿ ನೀಡಿ ಲೋಕೋಪಯೋಗಿ ಎಂಜಿನಿಯರ್ ಅಥವಾ ಪಿಆರ್‌ಡಿ ಇಲಾಖೆಗೆ ಸಂಭಂಧಿಸಿದ ಎಂಜಿನಿಯರ್ ಅವರಿಂದ ಅಂದಾಜು ತಯಾರಿಸಿ ವರದಿ ಕೊಟ್ಟ ಮೇಲೆ ಸ್ಥಳಿಯ ಶಾಸಕ ಭೀಮಸೇನ ಚಿಮ್ಮನಕಟ್ಟಿ ಅವರ ಜೊತೆಗೆ ಮಾತನಾಡಿ ಶಾಸಕರ ಅನುದಾನದಲ್ಲಿಯಾದರೂ ಅನುದಾನ ನೀಡುವಂತೆ ಕೇಳಿ, ಒಂದು ವೇಳೆ ಶಾಸಕರ ಅನುದಾನದಲ್ಲಿರದ ಹೋದರೆ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಶಿಕ್ಷಣ ಇಲಾಖೆಗೆ ವರದಿ ಸರ್ಕಾರಕ್ಕೆ ಕಳುಹಿಸುತ್ತೇವೆ. -ಹನುಮಂತಗೌಡ ಮಿರ್ಜಿ**

## ವಿಶ್ವ ಮಾದಕ ವಸ್ತು ವಿರೋಧಿ ದಿನಾಚರಣೆ

• ಉದಯವಾಹಿನಿ, ಚಿಂಚೋಳಿ



ಉದಯವಾಹಿನಿ ಚಿತ್ರ

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಬಸ್ ಡಿಪೊವರೆಗೆ ಚಿಂಚೋಳಿ ಪೋಲಿಸ್ ಠಾಣೆ ವತಿಯಿಂದ ಶಾಲಾಮಕ್ಕಳೊಂದಿಗೆ ವಿಶ್ವ ಮಾದಕ ವಸ್ತು ವಿರೋಧಿ ದಿನಾಚರಣೆ ಅಂಗವಾಗಿ ಬೃಹತ್ ಜಾಗೃತ ಜಾಥಾ ನಡಿಗೆ ಹಮ್ಮಿಕೊಂಡು ವಿದ್ಯಾರ್ಥಿಗಳು ಮಾದಕ ದ್ರವ್ಯ ಸೇವನೆ ಆರೋಗ್ಯಕ್ಕೆ ಹಾನಿಕಾರವೆಂಬ ಭಿತ್ತಿ ಪತ್ರಗಳು ಕೈಯಲ್ಲಿ ಹಿಡಿಕೊಂಡು ಪ್ರದರ್ಶನ ಮಾಡುತ್ತಾ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಡಿವೈಎಸ್ಪಿ ಸಂಗಮನಾಥ ಹಿರೇಮಠ,ಸಿಪಿಐ ಕಪಿಲದೇವ, ಪಿಎಸ್‌ಐ ಗಂಗಮ್ಮ ಜಿನಕೇರಿ ಸೇರಿದಂತೆ ಶಾಲಾಮಕ್ಕಳು ಪೋಲಿಸ್ ಸಿಬ್ಬಂದಿ ವರ್ಗದವರು ಅನೇಕರಿದ್ದರು.

## ಮಾದಕ ದ್ರವ್ಯದಿಂದ ಶಾಂತಿಗೆ ಭಂಗ: ಅಶೋಕ ಎಂ.

• ಉದಯವಾಹಿನಿ ಬ್ರಹ್ಮಾವರ

ಇಲ್ಲಿನ ಎಸ್.ಎಂ.ಎಸ್‌ಪದವಿ ಪೂರ್ವ ಕಾಲೇಜಿನಲ್ಲಿ ರಾಷ್ಟ್ರೀಯ ಮಾದಕ ವ್ಯಸನ ವಿರೋಧ ದಿನಾಚರಣೆ ನಡೆಯಿತು. ಇಲ್ಲಿನ ಪೊಲೀಸ್ ಠಾಣೆ ಸಬ್ ಇನ್ಸ್ಪೆಕ್ಟರ್ ಅಶೋಕ ಎಂ. ಮಾತನಾಡಿ, ಮಾದಕ ದ್ರವ್ಯ ಸಮಾಜದ ಸೌಹಾರ್ದತೆ, ಕುಟುಂಬಗಳ ಶಾಂತಿ, ಯುವಜನರ ಭವಿಷ್ಯ ನಾಶ ಮಾಡುತ್ತಿದೆ. ಮಾದಕ ವ್ಯಸನದ ವಿರುದ್ಧ ಎಚ್ಚರಿಕೆ ಮೂಡಿಸಿ, ಜನರಲ್ಲಿ ಜಾಗೃತಿ ಬೆಳೆಸುವುದು ಪ್ರತಿಯೊಬ್ಬರ ಜವಾಬ್ದಾರಿ. ಈ ದಿನಾಚರಣೆ ಒಂದು ದಿನಕ್ಕೆ ಮಾತ್ರವಲ್ಲ, ಇದು ಸಂಕಲ್ಪದ ದಿನ. ನಶೆಮುಕ್ತ ಸಮಾಜದತ್ತ ಮುನ್ನಡೆಯುವ ನಿಮ ಬದ್ಧತೆ ಎಂದರು. ವಿದ್ಯಾರ್ಥಿಗಳು, ಯುವಕರು, ಪೋಷಕರು ಮಾದಕ ವ್ಯಸನದ ಅಪಾಯಗಳನ್ನು ಅರಿಯಬೇಕಾಗಿರುವ ಅಗತ್ಯವಿದೆ. ಶಿಕ್ಷಣ ಸಂಸ್ಥೆಗಳು, ಸಂಘಟನೆಗಳು, ಸರ್ಕಾರ ಕೈಜೋಡಿಸಿ ಈ ಅಭಿಯಾನ ಯಶಸ್ವಿಗೊಳಿಸಬೇಕು. ನಾವೆಲ್ಲರೂ ಕೈಜೋಡಿಸಿ ನಶೆಮುಕ್ತ ಭಾರತದ ಕನಸು ಕಂಡು ಅದನ್ನು ನಿಜವಾಗಿಸೋಣ ಎಂದು ಹೇಳಿದರು.

## ಗ್ರಾಮೀಣ ಹಾಗೂ ನಗರ ಪ್ರದೇಶ ವ್ಯಾಪ್ತಿಯಲ್ಲಿ ಮನೆ ಕಟ್ಟುವ ಸಾರ್ವಜನಿಕರಿಗೆ ಯಾವುದೇ ಸೌಲಭ್ಯವಿಲ್ಲ

• ಉದಯವಾಹಿನಿ ಅರಸೀಕೆರೆ

ಸುಪ್ರೀಂ ಕೋರ್ಟ್ ನೀಡಿರುವ ಆದೇಶವು ಇನ್ನು ಮುಂದೆ ಗ್ರಾಮೀಣ ಪ್ರದೇಶದಲ್ಲಿ ಹಾಗೂ ನಗರ ಪ್ರದೇಶದಲ್ಲಿ ವಾಸ ಮಾಡಲು ಮನೆ ಕಟ್ಟುವ ಸಾರ್ವಜನಿಕರಿಗೆ ಹಾಗೂ ಬಡವರಿಗೆ ಇನ್ನು ಮುಂದೆ ಅವರಿಗೆ ಯಾವುದೇ ರೀತಿಯ ಸವಲತ್ತು ನೀಡಲು ಆದೇಶ ಕೊಡುವುದಿಲ್ಲ. ಅವರಿಗೆ ವಿದ್ಯುತ್, ಕುಡಿಯುವ ನೀರು ಹಾಗೂ ಅವರ ಜಾನುವಾರುಗಳಿಗೆ ಕುಡಿಯುವ ನೀರು, ರಸ್ತೆ ಹಾಗೂ ಯಾವುದೇ ಸೌಕರ್ಯ ನೀಡುವುದಿಲ್ಲ ಎಂದು ಆದೇಶ ನೀಡಿರುವುದನ್ನು ಘನವೆತ್ತ ಸುಪ್ರೀಂ ಕೋರ್ಟ್ ಕೂಡಲೇ ವಾಪಸ್ ಪಡೆಯಬೇಕು.

ಈ ಆದೇಶವನ್ನು ಮಾಡುವಾಗ ಘನವೆತ್ತ ಸುಪ್ರೀಂಕೋರ್ಟ್, ಭಾರತ ಸರ್ಕಾರದ ಘನವೆತ್ತ ರಾಷ್ಟ್ರಪತಿಯವರ ಅನುಮೋದನೆ ಮೂಲಕ ಜಾರಿ ಮಾಡಬೇಕು. ಅದು ಭಾರತ ರಾಷ್ಟ್ರದ ಘನವೆತ್ತ ರಾಷ್ಟ್ರಪತಿ ಯವರ ಅನುಮೋದನೆಯ ಮೂಲಕ ಕಾರ್ಯಗತಕ್ಕೆ ಮುಂದಾಗಬೇಕಾದ ಆದೇಶ ಆಗಿರುತ್ತದೆ.

ಆದರೆ ಘನವೆತ್ತ ಸುಪ್ರೀಂ ಕೋರ್ಟ್ ಏಕಾಏಕಿ ನಿರ್ಧಾರ ತೆಗೆದುಕೊಂಡು ಆದೇಶ ಮಾಡಿರುವುದು ಇದು ಭಾರತ ದೇಶದ ನ್ಯಾಯಕ್ಕೆ ಸರಿಯಾದ ಮಾರ್ಗವಲ್ಲ ಎಂದು ವಿಶ್ವ ರೈತನಾಯಕ ಪ್ರೊ: ಎಂ ಡಿ ನಂಜುಂಡಸ್ವಾಮಿ ಸ್ಥಾಪಿತ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಸಂಚಾಲಕ ಹಾಗೂ ರಾಜ್ಯ ಉಸ್ತುವಾರಿ ಕನಕಂಚೇನಹಳ್ಳಿ ಪಟೇಲ್ ಪ್ರಸನ್ನ ಕುಮಾರ್ ಹೇಳಿದರು. ರೈತ ಮುಖಂಡರುಗಳಾದ ಏಜಾಜ್ ಪಾಷ, ಮಹಮ್ಮದ್ ದಸ್ತಿಗಿರ್ ,ನಂಜಮ್ಮ, ಅಬ್ದುಲ್ ಕುಂಜಿ, ಅಮ್ಜದ್ ಖಾನ್, ತಮ್ಮಯ್ಯ, ಮಂಜುನಾಥ್, ರಾಮಣ್ಣ ,ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ಸುಪ್ರೀಂ ಕೋರ್ಟ್‌ಗೆ ಮನವಿ**

**ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ಆರ್ ವಿನಯ್ ಕುಮಾರ್ ಹಾಗೂ ನಗರಸಭೆ ಕಂದಾಯ ಅಧಿಕಾರಿ ಮಂಜುನಾಥ್ ಮತ್ತು ವ್ಯವಸ್ಥಾಪಕರಾದ ಕಲಾವತಿ ಇವರಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿ ಘನವೆತ್ತ ಸುಪ್ರೀಂ ಕೋರ್ಟ್ ತಕ್ಷಣವೇ ಈ ನಿರ್ಧಾರವನ್ನು ನಿಲ್ಲಿಸಬೇಕು, ಇದನ್ನು ಕೂಡಲೇ ವಾಪಸ್ ಪಡೆದುಕೊಳ್ಳಬೇಕು ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ರಾಷ್ಟ್ರ ಮತ್ತು ರಾಜ್ಯಾದ್ಯಂತ ಹೋರಾಟ ನಡೆಯುವುದು ಖಚಿತ, ಆದ್ದರಿಂದ ಘನವೆತ್ತ ಸುಪ್ರೀಂಕೋರ್ಟಗೆ ಮನವಿ ಮಾಡಿಕೊಳ್ಳುತ್ತಿದ್ದೇವೆ. ಕೂಡಲೇ ಎಲ್ಲರಿಗೂ ಒಳ್ಳೆಯ ಅನುಕೂಲ ವಾಗುವಂತಹ ನಿರ್ಧಾರವನ್ನು ಘನವೆತ್ತ ಸುಪ್ರೀಂ ಕೋರ್ಟ್ ತೆಗೆದುಕೊಳ್ಳಬೇಕೆಂದು ಮನವಿ ಮಾಡಿಕೊಳ್ಳುತ್ತಿದ್ದೇವೆ ಹಾಗೂ ಕೂಡಲೇ ಎಲ್ಲರಿಗೂ ಅನುಕೂಲ ವಾಗುವಂತಹ ಆದೇಶವನ್ನು ಪುನಃ ನೀಡಬೇಕಾಗಿ ತಮ್ಮಲ್ಲಿ ಕಳಕಳಿಯ ಮನವಿ ಪತ್ರವನ್ನು ಘನವೆತ್ತ ಸುಪ್ರೀಂಕೋರ್ಟಗೆ ತಮ್ಮ ಮೂಲಕ ಮನವಿ ಸಲ್ಲಿಸುತ್ತಿದ್ದೇವೆ ಎಂದು ಮನವಿ ಪತ್ರ ಸಲ್ಲಿಸಿದರು.**

## ನಶಾ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರ ಸಹಕಾರ ಅಗತ್ಯ

• ಉದಯವಾಹಿನಿ ಚಿತ್ರದುರ್ಗ

ನಶಾ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರ ಸಹಕಾರ ಅಗತ್ಯ ಎಂದು ನಿವೃತ್ತ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಹೇಳಿದರು.

ನಗರದ ಅಮೃತ್ ನರ್ಸಿಂಗ್ ಕಾಲೇಜಿನ ಸಭಾಂಗಣದಲ್ಲಿ ಆರೋಗ್ಯ ಇಲಾಖೆ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಅಮೃತ್ ನರ್ಸಿಂಗ್ ಕಾಲೇಜು ಸಹಯೋಗದೊಂದಿಗೆ ವಿಶ್ವ ಮಾದಕದ್ರವ್ಯ ಸೇವನೆ ಮತ್ತು ಕಳ್ಳಸಾಗಣೆ ವಿರೋಧಿ ದಿನ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿ ವರ್ಷ ಜೂನ್ 26ರಂದು ವಿಶ್ವ ಮಾದಕ ವಸ್ತು ವಿರೋಧಿ ದಿನವನ್ನು ಆಚರಿಸಲಾಗುತ್ತದೆ. ಸೆಪ್ಟೆಂಬರ್ 7, 1987 ರಂದು, ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ಮಾದಕ ವಸ್ತುಗಳ ದುರುಪಯೋಗ ಮತ್ತು ಕಳ್ಳಸಾಗಾಣಿಕೆ ತಡೆಗಟ್ಟಲು ನಿರ್ದಿಷ್ಟ ಆಚರಣೆ ಜಾರಿಗೆ ತರಬೇಕು ಎಂದು ಒಂದು ನಿರ್ಣಯ ಅಂಗೀಕರಿಸಿತು. ಅದರಂತೆ ಪ್ರತಿ ವರ್ಷ ಜೂನ್ 26 ರಂದು ಅಕ್ರಮ ಮಾದಕ ವಸ್ತುಗಳ ಬಗ್ಗೆ ಮತ್ತು ಅವು ಸಮಾಜಕ್ಕೆ ತರುವ ಪ್ರಮುಖ ಸಮಸ್ಯೆಯ ಬಗ್ಗೆ ಜಾಗೃತಿ ಅರಿವು ಮೂಡಿಸಲು ಆಚರಿಸಲಾಗುತ್ತಿದೆ ಎಂದು ಹೇಳಿದರು.

ಮಾನಸಿಕ ಆರೋಗ್ಯ ವಿಭಾಗದ ಮಾನಸಿಕ ತಜ್ಞ ಡಾ. ಶ್ರೀಧರ್ ಮಾತನಾಡಿ, ಈ ವರ್ಷದ ಘೋಷ ವಾಖ್ಯಾ ಕೊಂಡಿಗಳನ್ನು ಕತ್ತರಿಸಿ, ತಡೆಗಟ್ಟುವಿಕೆ ಚಿಕಿತ್ಸೆ ಮತ್ತು ಪುನರ್ವಸತಿ ಸೇವೆಗಳನ್ನು ಬಲಪಡಿಸೋಣ ಎನ್ನುವುದಾಗಿದೆ ಎಂದು ಹೇಳಿದರು.

ಕಾಲೇಜಿನ ಪ್ರಾಂಶುಪಾಲ ಮೊಹಮ್ಮದ್ ವಜಹತ್ತುಲ್ಲಾ ಮಾತನಾಡಿ, ಮೊದಲು ನೀವು ನಿಮ್ಮ ಕುಟುಂಬದ ಸದಸ್ಯರು ನಂತರ ಸಮುದಾಯದಲ್ಲಿ ವ್ಯಸನ ಮುಕ್ತ ಮಾಡಲು ಪ್ರಯತ್ನ ನಡೆಯಲಿ ಎಂದು ಕಾರ್ಯಕ್ರಮದಲ್ಲಿ ಪ್ರತಿಜ್ಞಾ ವಿಧಿ ಭೋದಿಸಲಾಯಿತು. ರೆಡ್ ಕ್ರಾಸ್ ಸಂಸ್ಥೆಯವರು ಎಲ್ಲಾ ವಿದ್ಯಾರ್ಥಿಗಳಿಗೆ ಮಾಸ್ಕ್ ವಿತರಿಸಿದರು

ಕಾರ್ಯಕ್ರಮದಲ್ಲಿ ಜಿಲ್ಲಾ ರೆಡ್‌ಕ್ರಾಸ್ ಸಂಸ್ಥೆಯ ಕಾರ್ಯದರ್ಶಿ ಎನ್.ಮಜಹರ್ ಉಲ್ಲಾ, ಸದಸ್ಯ ಶಿವರಾಮ್, ಕಾಲೇಜಿನ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

**ರೆಡ್ ಕ್ರಾಸ್ ಸಂಸ್ಥೆ ಸಮಾಜಮುಖಿಯಾಗಿ ಕಾರ್ಯ ಮೊದಲಿನಿಂದಲೂ ಮಾಡುತ್ತಾ ಬಂದಿದೆ. ಅದರಂತೆ ನಶಾ ಮುಕ್ತ ಸಮಾಜ ನಿರ್ಮಿಸಲು ಅರಿವು ಮೂಡಿಸಲು ಯೋಜನೆ ಸಿದ್ದಪಡಿಸಿ ಕಾರ್ಯೋನ್ಮುಖ ವಾಗುತ್ತದೆ. -ಗಾಯಿತ್ರಿ ಶಿವರಾಮ್, ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿ**

## ಬಸವಚೇತನ ಪ್ರಶಸ್ತಿಗೆ ಪತ್ರಕರ್ತ ಮಲ್ಲಿಕಾರ್ಜುನ ಕೆಂಭಾವಿ ಆಯ್ಕೆ

• ಉದಯವಾಹಿನಿ ಸಿಂದಗಿ



ವಿಜಯಪುರದ ಅಮ್ಮ ಫೌಂಡೇಶನ್ ವತಿಯಿಂದ ನೀಡುವ ರಾಜ್ಯಮಟ್ಟದ ಬಸವಚೇತನ ಪ್ರಶಸ್ತಿಗೆ ಮಾಧ್ಯಮ ಕ್ಷೇತ್ರದಿಂದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಕಾರ್ಯದರ್ಶಿ, ಸಿಂದಗಿ ತಾಲ್ಲೂಕಿನ ಬ್ರಹ್ಮದೇವನಮಡು ಗ್ರಾಮದ ವಿಜಯವಾಣಿ ಪತ್ರಕರ್ತ ಮಲ್ಲಿಕಾರ್ಜುನ ಎನ್. ಕೆಂಭಾವಿ ಆಯ್ಕೆಯಾಗಿದ್ದಾರೆ. ವಿಜಯಪುರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಜುಲೈ.6ರಂದು ನಡೆಯುವ ರಾಜ್ಯಮಟ್ಟದ ಬಸವಚೇತನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಅಮ್ಮ ಫೌಂಡೇಶನ್ ಸಂಚಾಲಕ ಕಬೂಲ್ ಕೊಕಟನೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 6 ವರ್ಷ ಕಳೆದರೂ ಶೇ. 50ರಷ್ಟು ಕೆಲಸ ಬಾಕಿ

• ಉದಯವಾಹಿನಿ ಭದ್ರಾವತಿ

ಶಿವಮೊಗ್ಗ- ಭದ್ರಾವತಿ ನಡುವೆ ನಡೆಯುತ್ತಿರುವ ರಾಷ್ಟ್ರೀಯ ಹೆದ್ದಾರಿ ವಿಸ್ತರಣೆ ಕಾಮಗಾರಿಯು 6 ವರ್ಷ ಕಳೆದರೂ ಮುಗಿಯುತ್ತಿಲ್ಲ. ಅದರಲ್ಲೂ ಶೇ 50ರಷ್ಟು ಮಾತ್ರ ಕಾಮಗಾರಿ ಮುಗಿದಿದ್ದು, ಇನ್ನೂ ಅರ್ಧ ಕೆಲಸ ಬಾಕಿ ಇದೆ. ಶಿಮುಲ್ ಡೈರಿ ಬಳಿ ಇರುವ ಕಲ್ಲಿನ ಬೆಟ್ಟವನ್ನು ಸಮತಟ್ಟು ಮಾಡಿ ರಸ್ತೆ ನಿರ್ಮಿಸಲು ನಾಲ್ಕು ವರ್ಷ ತೆಗೆದುಕೊಳ್ಳಲಾದೆ.

ಸುತ್ತಮುತ್ತ ಕೈಗಾರಿಕಾ ಪ್ರದೇಶ ಇರುವುದರಿಂದ ಸ್ಫೋಟಕಗಳನ್ನು ಬಳಸುವಂತಿಲ್ಲ. ಡ್ರಿಲ್ ಮಾಡಿ ಕಲ್ಲನ್ನು ಪುಡಿ ಮಾಡಬೇಕಿದೆ. ಗುತ್ತಿಗೆದಾರ ಇದಕ್ಕೆ ಹೆಚ್ಚಿನ ಆದ್ಯತೆ ಕೊಡದ ಪರಿಣಾಮ ಕಾಮಗಾರಿ ಮಂದಗತಿಯಲ್ಲಿ ಸಾಗುತ್ತಿದೆ.

**ಕಿರಿದಾದ ಸರ್ವೀಸ್ ರಸ್ತೆ:** ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಮಾಚೇನಹಳ್ಳಿ ಡೇರಿ ಬಳಿಯ ಕಲ್ಲು ಬಂಡೆ ಕರಗಿಸಲು ಸಾಹಸ ಪಡುತ್ತಿದೆ. ಸದಾ ಜನ ಜಂಗುಳಿಯಿಂದ ಕೂಡಿರುವ ಈ ಭಾಗದಲ್ಲಿ ಕಿರಿದಾದ ಸರ್ವೀಸ್ ರಸ್ತೆಗೆ ಅನುವು ಮಾಡಿದೆ. ಇಲ್ಲಿ ಮದ್ಯದ ಅಂಗಡಿ, ಕ್ಯಾಂಟೀನ್, ಗ್ಯಾರೇಜ್‌ಗಳು ಇರುವುದರಿಂದ ಸದಾ ಜನದಟ್ಟಣೆ ಇರುತ್ತದೆ. ತುಮಕೂರು- ಶಿವಮೊಗ್ಗ ಚತುಷ್ಪಥ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಆರಂಭವಾಗಿ 10 ವರ್ಷ ದಾಟಿದೆ.

4 ಪ್ಯಾಕೇಜ್‌ಗಳಲ್ಲಿ ನಡೆಯುತ್ತಿರುವ ಕಾಮಗಾರಿಯಲ್ಲಿ ತುಮಕೂರಿನಿಂದ ತರೀಕೆರೆವರೆಗೆ 3ನೇ ಪ್ಯಾಕೇಜ್ ಮುಕ್ತಾಯ ಹಂತಕ್ಕೆ ತಲುಪಿದೆ.

**ಫ್ಲೈ ಓವರ್:** ಭದ್ರಾವತಿ – ಬೈಪಾಸ್, ಮಾಚೇನಹಳ್ಳಿ ಡೇರಿ, ಗ್ಲಾಸ್ ಹೌಸ್ ನಡುವೆ ಫ್ಲೈ ಓವರ್ ಹಾಗೂ ಅಂಡರ್ ಪಾಸ್ ಕಾಮಗಾರಿ ಸಹ ನಿಧಾನಗತಿಯಲ್ಲಿ ನಡೆಯುತ್ತಿದೆ. ಕಾಮಗಾರಿಗೆ ಹೈ ಟೆನ್ಷನ್ ವಿದ್ಯುತ್ ಲೈನ್‌ಗಳು ಅಡ್ಡಿಯಾಗಿದ್ದವು. ಲೈನ್ ಎತ್ತರಿಸಿ ಕಾಮಗಾರಿಗೆ ಅನುವು ಮಾಡಿಕೊಳ್ಳಲು ಎರಡು ವರ್ಷ ತೆಗೆದುಕೊಳ್ಳಲಾಯಿತು. ಈಗ ಲೈನ್ ಎತ್ತರಿಸಲಾಗಿದ್ದರೂ ಕೆಲಸ ಮಾತ್ರ ವೇಗ ಪಡೆಯುತ್ತಿಲ್ಲ.





ಉದಯವಾಹಿನಿ ಚಿತ್ರ

**ಕಾಮಗಾರಿ ಮಂದಗತಿಯಲ್ಲಿ ಸಾಗುತ್ತಿದೆ**

## ಮಾಚನೂರು ಭೀಮಾ ನದಿಯಲ್ಲಿ ಇಬ್ಬರು ಯುವಕರು ನೀರುಪಾಲು ಸಿಗದ ಶವಗಳು

• ಉದಯವಾಹಿನಿ ವಡಗೇರಾ

ಮಹಾರಾಷ್ಟ್ರದ ಪಶ್ಚಿಮ ಘಟ್ಟಗಳಲ್ಲಿ ಬಾರಿ ಮಳೆ ಹಿನ್ನೆಲೆ ತಾಲ್ಲೂಕಿನ ಮಾಚನೂರು ಗ್ರಾಮದ ಭೀಮಾನದಿ ಪ್ರವಾಹಕ್ಕೆ ಇಬ್ಬರು ಯುವಕರ ಬಲಿ ಭೀಮಾನದಿಯಲ್ಲಿ ಕೊಚ್ಚಿ ಹೋದ ದನಗಾಯಿ ಯುವಕರು ಭೀಮಾನದಿಗೆ ದನಕ್ಕೆ ನೀರು ಕುಡಿಸಲು ಬಂದ ಯುವಕರು ನದಿ ಪಾಲು ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ಮಾಚನೂರ ಗ್ರಾಮದಲ್ಲಿ ಈ ಘಟನೆ ನಡೆದಿದೆ.

ಗ್ರಾಮದ ಹೊರವಲಯದಲ್ಲಿನ ಭೀಮಾನದಿಯಲ್ಲಿ ಕೊಚ್ಚಿ ಹೋದ ದನಗಾಯಿಗಳು ರಮೇಶ್ (17) ಸಿದ್ದಪ್ಪ (21)ಗುರುಸಣಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿಂದ ಭೀಮಾನದಿ ಅಪಾರ ಪ್ರಮಾಣದ ನೀರು ಬಿಡುಗಡೆ ಅಪಾಯದ ಮಟ್ಟ ಮೀರಿ ಹರಿಯುತ್ತದೆ ಭೀಮಾನದಿಯಲ್ಲಿ ಅಗ್ನಿಶಾಮಕ, ಪೊಲೀಸ್ ಸಿಬ್ಬಂದಿಗಳಿಂದ ಶೋಧ ಕಾರ್ಯ ಬೆಳಗ್ಗೆ 10 ಗಂಟೆಯಿಂದ ಮೃತ ಯುವಕರ ಶವಕ್ಕಾಗಿ ಶೋಧ ಸಿಗದ ಶವಗಳು ಸ್ಥಳದಲ್ಲಿ ಮುಗಿಲು ಮುಟ್ಟಿದ ಮೃತರ ಕುಟುಂಬಸ್ಥರ ಆಕ್ರಂದನ ಘಟನಾ ಸ್ಥಳಕ್ಕೆ ವಡಗೇರಾ ತಹಶೀಲ್ದಾರ್ ಶ್ರೀಮತಿ ಮಂಗಳಾ. ಎಂ ಭೇಟಿ ನೀಡಿ ಮೃತರ ಕುಟುಂಬಕ್ಕೆ ಸಾಂತ್ವನ ತಿಳಿಸಿ ಮಾತನಾಡಿದವರು ಭೀಮಾ ನದಿಯಲ್ಲಿ ನೀರಿನ ಪ್ರಮಾಣ ಹೆಚ್ಚಾಗಿದ್ದು ಮತ್ತು ಮೊಸಳೆಗಳ ಕಾಟದಿಂದ ಶವಗಳ ಹುಡುಕಾಟಕ್ಕೆ ತೊಡಕಾಗುತ್ತಿದೆ ಆದರೂ ಕೂಡಾ ನಾಳೆ ಮತ್ತಷ್ಟು ಸಿಬ್ಬಂದಿಗಳನ್ನು ಮತ್ತು ನುರಿತ ಈಜುಗಾರರನ್ನು ಕರೆಸಿ ಶವಗಳ ಹುಡುಕುವಲ್ಲಿ ಪ್ರಯತ್ನಿಸುವುದಾಗಿ ಅವರು ತಿಳಿಸಿದರು. ಈ ಸಂದರ್ಭದಲ್ಲಿ ಪಿಎಸ್‌ಐ ಮೈಬೂಬ ಅಲಿ, ಕಂದಾಯ ನಿರೀಕ್ಷಕ ಬಸವರಾಜ, ಪೊಲೀಸ್ ಹಾಗೂ ಅಗ್ನಿಶಾಮಕದಳ ಕಂದಾಯ ಇಲಾಖೆ ಸಿಬ್ಬಂದಿಗಳು ಇನ್ನಿತರರು ಇದ್ದರು.



ಉದಯವಾಹಿನಿ ಚಿತ್ರ

## ಮಳೆಗಾಗಿ ವಿಶೇಷ ಪ್ರಾರ್ಥನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಕೆಂಭಾವಿ

ಪಟ್ಟಣದ ರೈತರು, ಮುಸ್ಲಿಂ ಬಾಂಧವರು ಗ್ರಾಮ ದೇವತೆ ಹಜರತ್ ಜಚ್ಚಾ ಮಾಸಾಬಿ ಬೆಟ್ಟಕ್ಕೆ ಹೋಗಿ ಮಳೆಗಾಗಿ ಪ್ರಾರ್ಥನೆ ಮಾಡಿ ಪೂಜೆ ಸಲ್ಲಿಸಿದರು. ಕೆಂಭಾವಿ ಸೀಮೆಯಲ್ಲಿರುವ ಗ್ರಾಮ ದೇವತೆಗಳಾದ ಗುಡ್ಡದ ರಾಮಲಿಂಗೇಶ್ವರ ಹಾಗೂ ಬೆಟ್ಟದ ಮಾಸಾಬಿ ದೇವಿಗೆ ಮಳೆಗಾಗಿ ಪ್ರಾರ್ಥನೆ ಸಲ್ಲಿಸಿ ವಿಶೇಷ ಪೂಜೆ ಸಲ್ಲಿಸುವುದು ಪ್ರತಿ ವರ್ಷದ ಸಂಪ್ರದಾಯ.

ಪಟ್ಟಣದ ರೈತರು ಹಾಗೂ ಮುಸ್ಲಿಂ ಬಾಂಧವರು, ಹಿಂದೂ ಮುಸ್ಲಿಂ ಭಾವೈಕ್ಯತೆಯ ಸಂಕೇತವಾದ ಹಜರತ್ ಜಚ್ಚಾ ಮಾಸಾಬಿ ಕುದುರೆಗಳಿಗೆ ವಿಶೇಷವಾಗಿ ಅಲಂಕಾರಗೊಳಿಸಿ ಸಕಲ ವಾದ್ಯ ಮೇಳಗಳೊಂದಿಗೆ ಪಟ್ಟಣದಿಂದ ಪಾದಯಾತ್ರೆ ಮೂಲಕ ಮಾಸಾಬಿ ಬೆಟ್ಟಕ್ಕೆ ಹೋಗಿ ಪೂಜೆ ಸಲ್ಲಿಸಿ ದೇವಿಗೆ ಮಳೆ ನೀಡುವಂತೆ ಬೇಡಿಕೊಂಡರು. ನಂತರ ಸಾಮೂಹಿಕ ಪ್ರಸಾದ ಸ್ವೀಕರಿಸಿ ಗ್ರಾಮಕ್ಕೆ ಮರಳಿದರು. ಇದನ್ನು ಮಾಸಾಬಿಯನ್ನು ಕರೆದುಕೊಂಡು ಬರುವುದು ಎಂದು ಕರೆಯಲಾಗುತ್ತದೆ.

### ನಾಡಪ್ರಭು ಕೆಂಪೇಗೌಡರ ಜಯಂತಿ ಪ್ರಯುಕ್ತ ಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ

## ಬೆಂಗಳೂರು ನಗರದ ನಿರ್ಮಾಣದಲ್ಲಿದೆ ರೋಚಕ ಚರಿತ್ರೆ:ಡಾ.ಬಿ.ಎಂ.ಗುರುನಾಥ

• ಉದಯವಾಹಿನಿ ಚಿತ್ರದುರ್ಗ

ಕರ್ನಾಟಕ ಸಾಂಸ್ಕೃತಿಕ ಚರಿತ್ರೆಯಲ್ಲಿ ಬೆಂಗಳೂರು ನಿರ್ಮಾಣ ಮಾಡುವಲ್ಲಿ ಕೆಂಪೇಗೌಡರ ಅಹರ್ನಿಶಿ ದುಡಿಮೆ ಇದೆ. ಬೆಂಗಳೂರು ನಗರ ನಿರ್ಮಾಣದ ರೋಚಕ ಚರಿತ್ರೆ ಮಕ್ಕಳು ತಿಳಿದುಕೊಳ್ಳಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ ಹೇಳಿದರು.

ನಗರದ ರೋಟರಿ ಶಾಲಾ ಭವನದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿ ಪ್ರಯುಕ್ತ ಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಗದ್ವಿಖ್ಯಾತ, ಸಿಲಿಕಾನ್ ಸಿಟಿ ಬೆಂಗಳೂರು ನಗರವು ಪ್ರಸ್ತುತ ಲಕ್ಷಾಂತರ ಜನಸಾಮಾನ್ಯರಿಗೆ ಬದುಕು ಕಟ್ಟಿಕೊಳ್ಳಲು ಹಾಗೂ ನಿರುದ್ಯೋಗಿಗಳಿಗೆ ಉದ್ಯೋಗ ನೀಡುವ ಪ್ರಮುಖ ನಗರವಾಗಿದೆ ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ ಕ್ಷೇತ್ರ ಸಮನ್ವಯಾಧಿಕಾರಿ ಈ.ಸಂಪತ್ ಕುಮಾರ್ ಮಾತನಾಡಿ, ಪ್ರಪಂಚದ ಭೂಪಟದಲ್ಲಿ ಬೆಂಗಳೂರಿಗೆ ವಿಶೇಷವಾದ ಸ್ಥಾನವಿದೆ. ಇದಕ್ಕೆ ಕಾರಣ ದೂರದೃಷ್ಟಿಯ ಕೆಂಪೇಗೌಡರು ಎಂದು ಹೇಳಿದರು.

ನಾಡಪ್ರಭು ಕೆಂಪೇಗೌಡರ ಜಯಂತಿ ಪ್ರಯುಕ್ತ ಶಾಲಾ ವಿದ್ಯಾರ್ಥಿಗಳಿಗೆ ಬೆಂಗಳೂರು ಸಾಂಸ್ಕೃತಿಕ ನಗರವಾಗುವಲ್ಲಿ ಕೆಂಪೇಗೌಡರ ನಾಯಕತ್ವ ಮತ್ತು ಪಾತ್ರ ಕುರಿತು ಭಾಷಣ ಸ್ಪರ್ಧೆ, ಕೆಂಪೇಗೌಡರ ಜೀವನ ಮತ್ತು ಸಾಧನೆ ಕುರಿತು ಪ್ರಬಂಧ ಸ್ಪರ್ಧೆ, ಕೆಂಪೇಗೌಡರ ವ್ಯಕ್ತಿ ಚಿತ್ರ, ಸಾಧನೆ ಕುರಿತಾದ ಯಾವುದೇ ಚಿತ್ರ ಕುರಿತು ಚಿತ್ರಕಲಾ ಸ್ಪರ್ಧೆ ಹಾಗೂ ಆಶುಭಾಷಣ ಸ್ಪರ್ಧೆ ನಡೆಯಿತು.

ಇಸಿಒ ಮಲ್ಲಿಕಾರ್ಜುನ್, ಸಿಆರ್‌ಪಿ ಅಜಯ್ ಕೋಟೆ ಸೇರಿದಂತೆ ತೀರ್ಪುಗಾರರು, ಶಿಕ್ಷಕರು ಹಾಗೂ ಚಿತ್ರದುರ್ಗ ತಾಲ್ಲೂಕಿನ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಇದ್ದರು.



ಉದಯವಾಹಿನಿ ಚಿತ್ರ

**ರಾಜ್ಯದ ರಾಜ್ಯಧಾನಿ ಬೆಂಗಳೂರು ಕಟ್ಟಿ ಬೆಳೆಸಿದ ಕೀರ್ತಿ ನಾಡಪ್ರಭು ಕೆಂಪೇಗೌಡ ಅವರಿಗೆ ಸಲ್ಲುತ್ತದೆ. ಅತ್ಯುನ್ನತ ಮಾದರಿ, ಯೋಜನಾ ಬದ್ಧ ಶೈಲಿಯ ನಗರಕ್ಕೆ ಬೆಂಗಳೂರು ಸಾಕ್ಷಿಯಾಗಿದೆ ಎಂದು ತಿಳಿಸಿದ ಅವರು, ನಾಡಪ್ರಭು ಕೆಂಪೇಗೌಡರ ಜಯಂತಿ ಪ್ರಯುಕ್ತ ಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸುವ ಮೂಲಕ ಮಕ್ಕಳಲ್ಲಿ ಜಾಗೃತಿ ಮೂಡಿಸುವ ಕೆಲಸವಾಗುತ್ತಿದೆ -ಎಸ್.ನಾಗಭೂಷಣ್, ಶಾಲಾ ಶಿಕ್ಷಣ ಇಲಾಖೆ ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ**

**ಮಕ್ಕಳಲ್ಲಿ ಸಾಂಸ್ಕೃತಿಕ ಪ್ರಜ್ಞೆ ಮೂಡಿಸಬೇಕು. ನಾಡು-ನುಡಿಗೆ ಶ್ರಮಿಸಿದ ಮಹನೀಯರ ಜೀವನ, ಆದರ್ಶ, ಕೊಡುಗೆಗಳನ್ನು ಮಕ್ಕಳಿಗೆ ತಿಳಿಸಿಕೊಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 32 ವಿವಿಧ ಮಹನೀಯರ ಜಯಂತಿಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಆಚರಣೆ ಮಾಡಲಾಗುತ್ತಿದ್ದು, ಮಹನೀಯರ ಮಾರ್ಗದರ್ಶನ ಹಾಗೂ ಜೀವನವನ್ನು ಜನರಿಗೆ ತಿಳಿಸುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದ ಅವರು, ನಾಡಪ್ರಭು ಕೆಂಪೇಗೌಡರ ಜಯಂತಿ ಪ್ರಯುಕ್ತ ಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದ್ದು, ಸ್ಪರ್ಧಾತ್ಮಕ ಮನೋಭಾವದಿಂದ, ಸೃಜನಾತ್ಮಕವಾಗಿ ಸ್ಪರ್ಧೆಯಲ್ಲಿ ಪಾಲ್ಗೊಳ್ಳಬೇಕು. -ಡಾ.ಬಿ.ಎಂ.ಗುರುನಾಥ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ**

**ನಾಡಪ್ರಭು ಕೆಂಪೇಗೌಡರ ಜಯಂತಿ**

## ಹಿಂದಿ ಹೇರಿಕೆ ವಿರುದ್ಧ ಪ್ರತಿಭಟನೆ

**ಮುಂಬೈ:** ದೂರವಾಗಿರುವ ಸೋದರಸಂಬಂಧಿಗಳ ನಡುವಿನ ಸಾಮರಸ್ಯದ ಪ್ರಮುಖ ಸಂಕೇತವಾಗಿ, ಉದ್ಧವ್ ಠಾಕ್ರೆ, ಅವರ ಶಿವಸೇನೆ (ಯುಬಿಟಿ) ಮತ್ತು ರಾಜ್ ಠಾಕ್ರೆ ನೇತೃತ್ವದ ಮಹಾರಾಷ್ಟ್ರ ನವನಿರ್ಮಾಣ ಸೇನೆ (ಎಂಎನ್‌ಎಸ್) ಜುಲೈ 5 ರಂದು ಮುಂಬೈನಲ್ಲಿ ಜಂಟಿ ಮೆರವಣಿಗೆ ನಡೆಸುವುದಾಗಿ ಘೋಷಿಸಿವೆ.

ಈ ಹಿಂದೆ ಯೋಜಿಸಿದಂತೆ ಪ್ರತ್ಯೇಕ ಮೆರವಣಿಗೆಗಳ ಬದಲು ರಾಜ್ಯದಲ್ಲಿ ಹಿಂದಿ ಹೇರಿಕೆಯನ್ನು ಪ್ರತಿಭಟಿಸಲು ಉದ್ಧವ್ ಮತ್ತು ರಾಜ್ ಇಬ್ಬರೂ ಗಿರ್ಗಾಂವ್ ಚೌಪಟ್ಟಿಯಿಂದ ಆಜಾದ್ ಮೈದಾನದವರೆಗೆ ನಡೆಯುವ ಪ್ರತಿಭಟನೆಯ ನೇತೃತ್ವವಹಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. 1 ರಿಂದ 5 ನೇ ತರಗತಿಯವರೆಗೆ ಹಿಂದಿಯನ್ನು ಐಚ್ಛಿಕ ಮೂರನೇ ಭಾಷೆಯಾಗಿ ಪರಿಚಯಿಸುವ ದೇವೇಂದ್ರ ಫಡ್ನವೀಸ್ ಸರ್ಕಾರದ ನಿರ್ಧಾರದ ಮಧ್ಯೆ, ಈ ಕ್ರಮ ಕೈಗೊಳ್ಳಲಾಗಿದೆ.ಇದಕ್ಕೂ ಮೊದಲು, ಶಿವಸೇನೆ (ಯುಬಿಟಿ) ಮತ್ತು ಮಹಾರಾಷ್ಟ್ರ ನವ ನಿರ್ಮಾಣ ಸೇನೆ ಎರಡೂ ಫಡ್ನವೀಸ್ ಅವರ ಕ್ರಮವನ್ನು ಟೀಕಿಸಿ,ಇದನ್ನು ಭಾಷಾ ತುರ್ತುಸ್ಥಿತಿ ಹೇರಿಕೆ ಮತ್ತು ಮರಾಠಿ-ತನವನ್ನು ಅಳಿಸುವ ಪ್ರಯತ್ನ ಎಂದು ಆರೋಪಿಸಿದ್ದವು.

ಬಿಜೆಪಿ ಭಾಷಾ ತುರ್ತುಸ್ಥಿತಿ ಹೇರಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ ಉದ್ಧವ್ ಠಾಕ್ರೆ, ಮರಾಠಿ ಮಾತನಾಡುವ ರಾಜ್ಯದಲ್ಲಿ ಹಿಂದಿ ಹೇರಿಕೆಯನ್ನು ಮಾತ್ರ ವಿರೋಧಿಸುತ್ತೇನೆ, ಭಾಷೆಯನ್ನಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಭಾಷೆಯ ಆಧಾರದ ಮೇಲೆ ಜನರಲ್ಲಿ ವಿಭಜನೆಯನ್ನು ಸೃಷ್ಟಿಸಲು ಬಿಜೆಪಿ ಪ್ರಯತ್ನಿಸುತ್ತಿದೆ. ಭಾಷಾ ತುರ್ತು ಪರಿಸ್ಥಿತಿಯನ್ನು ಹೇರುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹೇಳಿದ್ದಾರೆ.

## ವಿಶ್ವ ವಿಖ್ಯಾತ ಪುರಿ ಜಗನ್ನಾಥ ಯಾತ್ರೆ, ಪುರಿಯಲ್ಲಿ ಸಾಗರ, ಭಾರಿ ಭದ್ರತೆ

**ಪುರಿ:** ವಿಶ್ವ ವಿಖ್ಯಾತ ಜಗನ್ನಾಥ ಸ್ವಾಮಿಯ ವಾರ್ಷಿಕ ರಥಯಾತ್ರೆಗಾಗಿ ಲಕ್ಷಾಂತರ ಭಕ್ತರು ಕಡಲತೀರದ ಯಾತ್ರಾ ಸ್ಥಳ ಪುರಿಯಲ್ಲಿ ಸೇರಿದ್ದಾರೆ. ಯಾತ್ರಾ ಸ್ಥಳದಲ್ಲಿ ಯಾವುದೇ ಅಹಿತಕರ ಘಟನೆ ನಡೆಸಯದಂತೆ ನೋಡಿಕೊಳ್ಳಲು ಒಡಿಶಾ ಸರ್ಕಾರವು ವಿಸ್ತಾರವಾದ ವ್ಯವಸ್ಥೆಗಳನ್ನು ಮಾಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ನಿನ್ನೆ ಸಂಜೆಯ ವೇಳೆಗೆ ಸುಮಾರು ಒಂದು ಲಕ್ಷ ಜನರು ಪುರಿ ತಲುಪಿದ್ದಾರೆ ಮತ್ತು ಬೆಳಿಗ್ಗೆ ಸಂಖ್ಯೆ ಹಲವು ಪಟ್ಟು ಹೆಚ್ಚಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ದೇಶಾದ್ಯಂತ ಮತ್ತು ವಿದೇಶಗಳಿಂದ ಲಕ್ಷಾಂತರ ಭಕ್ತರು ಈ ಕಾರ್ಯ ಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು.

ಮಹಾಪ್ರಭು (ಜಗನ್ನಾಥ ದೇವರು) ಅವರ ಕೃಪೆಯಿಂದ, ಸುಗಮ ರಥಯಾತ್ರೆ ನಡೆಸಲಾಯಿತು. ನಮಗೆ ಸೇವಕರಿಂದ ಸಂಪೂರ್ಣ ಬೆಂಬಲ ಮತ್ತು ಸಹಕಾರ ಸಿಗುತ್ತಿದೆ. ಮೆಗಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಎಲ್ಲಾ ವ್ಯವಸ್ಥೆಗಳು ಜಾರಿಯಲ್ಲಿವೆ ಎಂದು ಶ್ರೀ ಜಗನ್ನಾಥ ದೇವಾಲಯ ಆಡಳಿತ ಮುಖ್ಯ ಆಡಳಿತಾಧಿಕಾರಿ ಅರಬಿಂದ ಪಾಧೀ ಹೇಳಿದರು.

ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಎಂಟು ಕಂಪನಿಗಳು ಸೇರಿದಂತೆ ಸುಮಾರು 10.000 ಭದ್ರತಾ ಸಿಬ್ಬಂದಿಯ ನಿಯೋಜನೆಯೊಂದಿಗೆ ಪಟ್ಟಣವು ಭಾರೀ ಭದ್ರತೆಯಿಂದ ಕೂಡಿದೆ. ಒಡಿಶಾ ಡಿಜಿಪಿ ವೈ ಬಿ ಖುರಾನಿಯಾ ಮಾತನಾಡಿ, ಮೊದಲ ಬಾರಿಗೆ ಪುರಿಯಲ್ಲಿ ಸಮಗ್ರ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರವನ್ನು ತೆರೆಯಲಾಗಿದ್ದು, ಇಡೀ ಉತ್ಸವವನ್ನು ಹತ್ತಿರದಿಂದ ಮೇಲ್ವಿಚಾರಣೆ ಮಾಡಲು ಇದನ್ನು ತೆರೆಯಲಾಗಿದೆ ಎಂದರು.

ಪುರಿಯಾದ್ಯಂತ ಮತ್ತು 35 ಕಿಮೀ ದೂರದಲ್ಲಿರುವ ಮತ್ತು 13 ನೇ ಶತಮಾನದ ಸೂರ್ಯ ದೇವಾಲಯಕ್ಕೆ ಹೆಸರುವಾಸಿಯಾದ ಕೊನಾಕ್ 9ನೇ ರಸ್ತೆಗಳಲ್ಲಿ ಕಣ್ಗಾವಲುಗಾಗಿ 275 ಕ್ಕೂ ಹೆಚ್ಚು ಎಐ-ಶಕ್ತಗೊಂಡ ಸಿಸಿಟಿವಿ ಕ್ಯಾಮೆರಾಗಳನ್ನು ಸ್ಥಾಪಿಸಲಾಗಿದೆ.ಇದಲ್ಲದೆ, ರಾಷ್ಟ್ರೀಯ ಭದ್ರತಾ ಸಿಬ್ಬಂದಿ (ಎನ್‌ಎಸ್‌ಜಿ) ಸ್ನೈಪರ್‌ಗಳು ದೇವಾಲಯದ ಮುಂಭಾಗದಲ್ಲಿರುವ ಗ್ರ್ಯಾಂಡ್ ರಸ್ತೆಯ ಉದ್ದಕ್ಕೂ ಮೇಲ್ಛಾವಣಿಗಳ ಮೇಲೆ ಸ್ಥಾನ ಪಡೆಯುತ್ತಾರೆ ಎಂದು ಡಿಜಿಪಿ ಹೇಳಿದರು.

## ಚೀನಾದಲ್ಲಿ ಪ್ರವಾಹಕ್ಕೆ 6 ಮಂದಿ ಬಲಿ

**ಬೀಜಿಂಗ್‌ಳ:** ನೈಋತ್ಯ ಚೀನಾದ ಗುಯಿಝೌ ಪ್ರಾಂತ್ಯದಲ್ಲಿ ಉಂಟಾದ ತೀವ್ರ ಪ್ರವಾಹದಿಂದಾಗಿ ಆರು ಜನರು ಸಾವನ್ನಪ್ಪಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ. ನಿರಂತರ ಭಾರೀ ಮಳೆ ಮತ್ತು ಮೇಲ್ಮುಖ ಒಳಹರಿವು ಗುಯಿಝೌನ ರೊಂಗ್ಜಿಯಾಂಗ್ ಮತ್ತು ಕಾಂಗ್ಜಿಯಾಂಗ್ ಕೌಂಟಿಗಳಲ್ಲಿ ತೀವ್ರ ಪ್ರವಾಹಕ್ಕೆ ಕಾರಣವಾಗಿದ್ದು, ಸಾಮೂಹಿಕ ಸ್ಥಳಾಂತರಿಸುವಿಕೆಗೆ ಕಾರಣವಾಗಿದೆ. ಪ್ರವಾಹ ಪೀಡಿತ ಕೌಂಟಿಗಳಿಂದ 80,000 ಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದೆ.ಪ್ರವಾಹ ನಿಯಂತ್ರಣ ತುರ್ತು ಪ್ರತಿಕ್ರಿಯೆಯನ್ನು ಎರಡೂ ಕೌಂಟಿಗಳಲ್ಲಿ ಅತ್ಯಧಿಕ ಮಟ್ಟಕ್ಕೆ ಹೆಚ್ಚಿಸಲಾಗಿದೆ. 100 ಕ್ಕೂ ಹೆಚ್ಚು ಹಳ್ಳಿ ತಂಡಗಳನ್ನು ಒಳಗೊಂಡ ಮತ್ತು ದೇಶಾದ್ಯಂತ ಹಲವಾರು ಅಭಿಮಾನಿಗಳನ್ನು ಆಕರ್ಷಿಸುವ ಗ್ರಾಮೀಣ ಫುಟ್ಬಾಲ್ ಲೀಗ್ ಆಗಿರುವ ಕುನ್ ಚಾವೊಗೆ ಹೆಸರುವಾಸಿಯಾದ ಕೌಂಟಿಯಾದ ರೊಂಗ್ಜಿಯಾಂಗ್ ಕಳೆದ ಹಲವು ದಿನಗಳಿಂದ ಭಾರೀ ಮಳೆಯಾಗಿದೆ.ಪ್ರಾಂತೀಯ ತುರ್ತು ವಿಭಾಗವು 30,000 ಬಾಟಲಿ ಕುಡಿಯುವ ನೀರು ಮತ್ತು 10,000 ಬೌಲ್ ಇನ್ಸ್ಟಂಟ್ ನೂಡಲ್ಸ್ ಸೇರಿದಂತೆ ವಿಪತ್ತು ಪರಿಹಾರ ವಸ್ತುಗಳನ್ನು ಹೈಸ್ಪೀಡ್ ರೈಲು ಮತ್ತು ರಸ್ತೆ ಸಾರಿಗೆ ಮೂಲಕ ಎರಡು ಕೌಂಟಿಗಳಿಗೆ ಹಂಚಿಕೆ ಮಾಡಿದೆ.

● ನ್ಯೂಯಾರ್ಕ್ ಮೇಯರ್ ಚುನಾವಣೆಯಲ್ಲಿ ಸ್ಪರ್ಧಿಸಿರುವ ಜೋಹ್ರಾನ್ ಮಮ್ದಾನಿ ವಿರುದ್ಧ ಆಕ್ರೋಶ

# ಲಿಬರ್ಟಿ ಪ್ರತಿಮೆಗೆ ಬೂರ್ಖಾ?: ಯುಎಸ್ ಬಲಪಂಥೀಯರ ವಿರೋಧ

**ನ್ಯೂಯಾರ್ಕ್:** 33 ವರ್ಷದ ಡೆಮಾಕ್ರೆಟಿಕ್ ಸಮಾಜವಾದಿ ಭಾರತೀಯ ಮೂಲದ ಜೋಹ್ರಾನ್ ಮಮ್ದಾನಿ, ನ್ಯೂಯಾರ್ಕ್ ನಗರದ ಡೆಮಾಕ್ರೆಟಿಕ್ ಮೇಯರ್ ಪ್ರಾಥಮಿಕ ಚುನಾವಣೆಯನ್ನು ಗೆದ್ದಿದ್ದಾರೆ. ಆದರೆ ರಿಪಬ್ಲಿಕನ್ ಪಕ್ಷದ ಬೆಂಬಲಿಗರು ಮತ್ತು ಅಮೆರಿಕದ ತೀವ್ರ ಬಲಪಂಥೀಯರು ಜೋಹ್ರಾನ್ ಮಮ್ದಾನಿ ವಿರುದ್ಧ ತೀವ್ರ ವಾಗ್ದಾಳಿ ನಡೆಸುತ್ತಿದ್ದಾರೆ.

ಅಮೆರಿಕದ ತೀವ್ರ ಬಲಪಂಥೀಯ ರಾಜಕಾರಣಿಗಳು ಮತ್ತು ಸಾಮಾಜಿಕ ಮಾಧ್ಯಮ ಬಳಕೆದಾರರು, ಜೋಹ್ರಾನ್ ಮಮ್ದಾನಿ ವಿರುದ್ಧ ಇಸ್ಲಾಮೋಫೋಬಿಕ್ ಪೋಸ್ಟ್‌ಗಳನ್ನು ಹಂಚಿಕೊಳ್ಳುತ್ತಿದ್ದಾರೆ. 2021ರಿಂದ ಜಾರ್ಜಿಯಾದ 14ನೇ ಕಾಂಗ್ರೆಸ್ ಪ್ರತಿನಿಧಿ ಮಾರ್ಜೋರಿ ಟೇಲರ್ ಗ್ರೀನ್ ಅವರು, ನ್ಯೂಯಾರ್ಕ್ ನಗರದಲ್ಲಿರುವ ಸ್ವಾತಂತ್ರ್ಯ ದೇವಿ ಪ್ರತಿಮೆ ಬೂರ್ಖಾದಲ್ಲಿ ಮುಚ್ಚಿದ ಮಾರ್ಪಡಿಸಿದ ಫೋಟೋವೊಂದನ್ನು ತಮ್ಮ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಳ್ಳುವ ಮೂಲಕ ಜೋಹ್ರಾನ್ ಮಮ್ದಾನಿ ಆಯ್ಕೆಯನ್ನು ತೀವ್ರವಾಗಿ ವಿರೋಧಿಸಿದ್ದಾರೆ.

ಈ ಪೋಸ್ಟ್‌ನಲ್ಲಿ ಕಪ್ಪು ಬುರ್ಖಾದಲ್ಲಿ ಮುಚ್ಚಿದ ಸ್ವಾತಂತ್ರ್ಯ ದೇವಿಯ ಪ್ರತಿಮೆಯ ಡಿಜಿಟಲ್ ಮಾರ್ಪಡಿಸಿದ ಚಿತ್ರವನ್ನು ತೋರಿಸಲಾಗಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೇಕ್ ಅಮೆರಿಕ ಗ್ರೇಟ್ ಅಗೈನ್ (ಅಮೆರಿಕವನ್ನು ಮತ್ತೊಮ್ಮೆ ಶ್ರೇಷ್ಠವಾಗಿಸಿ) ಘೋಷಣೆಯ ರಿಪಬ್ಲಿಕನ್ ಬೆಂಬಲಿಗರು, ಜೋಹ್ರಾನ್ ಮಮ್ದಾನಿ ಅವರು ನ್ಯೂಯಾರ್ಕ್



ನಗರದ ಡೆಮಾಕ್ರೆಟಿಕ್ ಮೇಯರ್ ಪ್ರಾಥಮಿಕ ಚುನಾವಣೆ ಗೆದ್ದಿರುವುದಕ್ಕೆ ಸಿಡಿದೆದ್ದಿದ್ದಾರೆ.

ಓರ್ವ ಎಂಎಜಿಎ ಬೆಂಬಲಿಗ ಡಾನ್ ಕೀತ್ ಅಭಿನಂದನೆಗಳು ನ್ಯೂಯಾರ್ಕ್ ಎಂಬ ಶೀರ್ಷಿಕೆಯೊಂದಿಗೆ, ಬೂರ್ಖಾದಿಂದ ಮುಚ್ಚಲ್ಪಟ್ಟ ಸ್ಟ್ಯಾಚ್ಯೂ ಆಫ್ ಲಿಬರ್ಟಿಯ ಮಾರ್ಪಡಿಸಿದ ಚಿತ್ರವನ್ನು ಹಂಚಿಕೊಂಡಿದ್ದಾರೆ. ರಿಪಬ್ಲಿಕನ್ ರಾಜಕಾರಣಿಗಳಲ್ಲದೆ ಹಲವು ಬಲಪಂಥೀಯ ಸಾಮಾಜಿಕ ಬಳಕೆದಾರರು ಕೂಡ,

- ನ್ಯೂಯಾರ್ಕ್ ಮೇಯರ್ ಚುನಾವಣೆಯಲ್ಲಿ ಸ್ಪರ್ಧಿಸಿರುವ ಜೋಹ್ರಾನ್ ಮಮ್ದಾನಿ ವಿರುದ್ಧ ಬಲಪಂಥೀಯರ ಆಕ್ರೋಶ.
- ಭಾರತೀಯ ಮೂಲದ ಮುಸ್ಲಿಂ ಜೋಹ್ರಾನ್ ಮಮ್ದಾನಿ ವಿರುದ್ಧ ತೀವ್ರಗೊಂಡ ಬಲಪಂಥೀಯರ ವಾಗ್ದಾಳಿ.
- ಸ್ವಾತಂತ್ರ್ಯ ದೇವಿ ಪ್ರತಿಮೆಗೆ ಬೂರ್ಖಾ ಹಾಕಿದ ಮಾರ್ಪಡಿಸಿದ ಫೋಟೋ ಹಂಚಿಕೊಂಡು ಆಕ್ರೋಶ.


ಜೋಹ್ರಾನ್ ಮಮ್ದಾನಿ ಆಯ್ಕೆಯನ್ನು ವಿರೋಧಿಸಿ ಪೋಸ್ಟ್ ಮಾಡುತ್ತಿದ್ದಾರೆ. 2025 ರಲ್ಲಿ ನ್ಯೂಯಾರ್ಕ್ ಓರ್ವ ಮುಸ್ಲಿಂ ಮೇಯರ್ ಆಯ್ಕೆ ಮಾಡುತ್ತದೆ. 2040ರಲ್ಲಿ ಶರಿಯಾ ಕಾನೂನನ್ನು ಪಾಲಿಸಿ ಅಥವಾ ನಗರ ತ್ಯಜಿಸಿ ಎಂಬುದನ್ನು ಕೇಳಿಸಿಕೊಳ್ಳುತ್ತದೆ. 2060ರಲ್ಲಿ ಇಸ್ಲಾಂಗೆ ಮತಾಂತರಗೊಳ್ಳಿ ಅಥವಾ ಸಾಯಿರಿ ಎಂಬ ಘೋಷಣೆಯನ್ನು ನ್ಯೂಯಾರ್ಕ್ ಕೇಳಿಸಿಕೊಳ್ಳುತ್ತದೆ ಎಂದು ಮತ್ತೋರ್ವ ಎಂಎಜಿಎ ಬೆಂಬಲಿಗ ತೀವ್ರ ಅಸಮಧಾನ ಹೊರಹಾಕಿದ್ದಾನೆ.

ಇನ್ನೋರ್ವ ಎಂಎಜಿಎ ಬೆಂಬಲಿಗ, ತಮ್ಮ ಸ್ವಂತ ಅವನತಿಗಾಗಿ ನ್ಯೂಯಾರ್ಕ್ ನಗರವಾಸಗಳು ಮತ ಚಲಾಯಿಸಲಿದ್ದಾರೆ ಎಂದು ಎಚ್ಚರಿಸಿದ್ದಾನೆ. ಜೋಹ್ರಾನ್ ಮಮ್ದಾನಿ ಅವರನ್ನು ಜಿಹಾದಿ ಭಯೋತ್ಪಾದಕ, ಹಮಾಸ್ ಭಯೋತ್ಪಾದಕ ಸಂಘಟನೆ ಸಹಾನುಭೂತಿಗಾರ ಎಂದೆಲ್ಲಾ ಬಲಪಂಥೀಯರು ಜರೆಯುತ್ತಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವಲಸೆ ನೀತಿಗಳನ್ನು ವಿರೋಧಿಸಿರುವ ಜೋಹ್ರಾನ್ ಮಮ್ದಾನಿ, ಗಾಜಾ ಮೇಲಿನ ಇಸ್ರೇಲ್ ದಾಳಿಯನ್ನೂ ತೀವ್ರವಾಗಿ ಖಂಡಿಸಿದ್ದಾರೆ. ಆದರೆ ನಾನು ಯಹೂದಿ ವಿರೋಧಿಯಲ್ಲ ಎಂದು ಜೀಹ್ರಾನ್ ಮಮ್ದಾನಿ ಸ್ಪಷ್ಟಪಡಿಸಿದ್ದಾರೆ.

ಜೀಹ್ರಾನ್ ಮಮ್ದಾನಿ ಅವರ ಪ್ರಾಥಮಿಕ ವಿಜಯವನ್ನು ತೀವ್ರವಾಗಿ ಟೀಕಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಜೋಹ್ರಾನ್ ಮಮ್ದಾನಿ ಅವರನ್ನು ಕಮ್ಯೂನಿಸ್ಟ್ ಹುಚ್ಚ ಎಂದು ಕರೆದಿರುವುದು ಈಗಾಗಲೇ ಜಾಗತಿಕ ಮಟ್ಟದಲ್ಲಿ ಗಮನ ಸೆಳೆಯುತ್ತಿದೆ.

### ಯಾರು ಜೋಹ್ರಾನ್ ಮಮ್ದಾನಿ?



ಭಾರತೀಯ ಮೂಲದ ಅಮೆರಿಕನ್ ಚಲನಚಿತ್ರ ನಿರ್ಮಾಪಕಿ ಮೀರಾ ನಾಯರ್ ಮತ್ತು ಭಾರತೀಯ ಮೂಲದ ಉಗಾಂಡಾದ ಮಾರ್ಕ್ಸ್‌ವಾದಿ ವಿದ್ವಾಂಸ ಮಹಮೂದ್ ಮಮ್ದಾನಿ ಅವರ ಪುತ್ರ ಜೋಹ್ರಾನ್ ಮಮ್ದಾನಿ, ಆರಂಭದಿಂದಲೂ ಎಡಪಂಥೀಯ ವಿಚಾರಧಾರೆಗಳನ್ನು ಪ್ರತಿಪಾದಿಸುತ್ತಾ ಬಂದಿದ್ದಾರೆ. ರಾಜಕಾರಣ ಪ್ರವೇಶಕ್ಕೂ ಮೊದಲು, ಜೋಹ್ರಾನ್ ಮಮ್ದಾನಿ ರ್‍ಯಾಪರ್ ಆಗಿ ಗುರುತಿಸಿಕೊಂಡಿದ್ದರು. ನ್ಯೂಯಾರ್ಕ್ ಮೇಯರ್ ಸ್ಥಾನಕ್ಕೆ ಭಾರತೀಯ ದಂಪತಿಯ ಮಗ ಜೊಹ್ರಾನ್ ಮಮದಾನಿ ಸ್ಪರ್ಧೆ, ಉಗಾಂಡಾದಲ್ಲಿ ಹುಟ್ಟಿ, ಯುಎಸ್‌ನಲ್ಲಿ ಬೆಳೆದವ, ಸದ್ಯ ನ್ಯೂಯಾರ್ಕ್ ನಗರದ ಡೆಮಾಕ್ರೆಟಿಕ್ ಮೇಯರ್ ಪ್ರಾಥಮಿಕ ಚುನಾವಣೆಯನ್ನು ಗೆದ್ದುಕೊಂಡಿರುವ ಜೋಹ್ರಾನ್ ಮಮ್ದಾನಿ, ಒಂದು ವೇಳೆ ಮೇಯರ್ ಆಗಿ ಆಯ್ಕೆಯಾದರೆ, ನ್ಯೂಯಾರ್ಕ್ ನಗರದ ಇತಿಹಾಸದಲ್ಲಿ ಮೊದಲ ಭಾರತೀಯ-ಅಮೆರಿಕನ್ ಮತ್ತು ಮುಸ್ಲಿಂ ಮೇಯರ್ ಆಗಿ ಇತಿಹಾಸ ನಿರ್ಮಿಸಲಿದ್ದಾರೆ.

## ಭಾರತದೊಂದಿಗೆ ದೊಡ್ಡ ವ್ಯಾಪಾರ ಒಪ್ಪಂದ ನಡೆಯುತ್ತಿದೆ : ಟ್ರಂಪ್


**ವಾಷಿಂಗ್ಟನ್:** ಭಾರತದೊಂದಿಗೆ ಬಹಳ ದೊಡ್ಡ ವ್ಯಾಪಾರ ಒಪ್ಪಂದ ನಡೆಯುತ್ತಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಇದು ಎರಡೂ ದೇಶಗಳ ನಡುವಿನ ಬಹುನಿರೀಕ್ಷಿತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮಾತುಕತೆ ಪ್ರಕ್ರಿಯೆಯಲ್ಲಿ ಗಮನಾರ್ಹ ಪ್ರಗತಿಯ ಬಗ್ಗೆ ಸುಳಿವು ನೀಡಿದೆ. ನಾವು ಕೆಲವು ಉತ್ತಮ ಒಪ್ಪಂದಗಳನ್ನು ಹೊಂದಿದ್ದೇವೆ. ನಮ್ಮಲ್ಲಿ ಒಂದು ಬರಲಿದೆ. ಬಹುಶಃ ಭಾರತದೊಂದಿಗೆ. ಬಹಳ ದೊಡ್ಡದು. ನಾವು ಭಾರತವನ್ನು ಎಲ್ಲಿ ತೆರೆಯಲಿದ್ದೇವೆ. ಎಂದು ಟ್ರಂಪ್ ಅವರು ಶ್ವೇತ ಭವನದಲ್ಲಿ ನಡೆದ ಬಿಗ್ ಬ್ಯೂಟಿಫುಲ್ ಬಿಲ್ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಹೇಳಿದರು.

ಅಮೆರಿಕವು ಚೀನಾದೊಂದಿಗೆ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಿದೆ ಎಂದು ಅಧ್ಯಕ್ಷರು ಹೇಳಿದರು. ಆದಾಗ್ಯೂ, ಚೀನಾದೊಂದಿಗೆ ಸಹಿ ಹಾಕಿದ ಒಪ್ಪಂದದ ವಿವರಗಳನ್ನು ಅವರು ವಿವರಿಸಲಿಲ್ಲ.ಪ್ರತಿಯೊಬ್ಬರೂ ಒಪ್ಪಂದ ಮಾಡಿಕೊಳ್ಳಲು ಮತ್ತು ಅದರಲ್ಲಿ ಭಾಗವಹಿಸಲು ಬಯಸುತ್ತಾರೆ. ಕೆಲವು ತಿಂಗಳ ಹಿಂದೆ, ಪತ್ರಿಕೆಗಳು, ನಿಮಗೆ ನಿಜವಾಗಿಯೂ ಆಸಕ್ತಿ ಇರುವ ಯಾರಾದರೂ ಇದ್ದಾರೆಯೇ ಸರಿ, ನಾವು ನಿನ್ನೆ ಚೀನಾದೊಂದಿಗೆ ಸಹಿ ಹಾಕಿದ್ದೇವೆ. ನಾವು ಕೆಲವು ಉತ್ತಮ ಒಪ್ಪಂದಗಳನ್ನು ಹೊಂದಿದ್ದೇವೆ ಎಂದು ಅವರು ಹೇಳಿದರು. ನಾವು ಎಲ್ಲರೊಂದಿಗೆ ಒಪ್ಪಂದ ಮಾಡಿಕೊಳ್ಳುವುದಿಲ್ಲ.

ಕೆಲವರಿಗೆ ನಾವು ತುಂಬಾ ಧನ್ಯವಾದಗಳು ಎಂದು ಹೇಳುವ ಪತ್ರವನ್ನು ಕಳುಹಿಸಲಿದ್ದೇವೆ. ನೀವು 25, 35, 45 ಪ್ರತಿಶತವನ್ನು ಪಾವತಿಸುತ್ತೀರಿ. ಅದು ಅದನ್ನು ಮಾಡಲು ಸುಲಭವಾದ ಮಾರ್ಗವಾಗಿದೆ ಎಂದು ಅಧ್ಯಕ್ಷರು ಹೇಳಿದರು.ಮುಖ್ಯ ಸಮಾಲೋಚಕ ರಾಜೇಶ್ ಅಗರ್ವಾಲ್ ನೇತೃತ್ವದ ಭಾರತೀಯ ತಂಡವು ಗುರುವಾರ ಅಮೆರಿಕದೊಂದಿಗೆ ಮುಂದಿನ ಸುತ್ತಿನ ವ್ಯಾಪಾರ ಮಾತುಕತೆಗಾಗಿ ವಾಷಿಂಗ್ಟನ್‌ಗೆ ಆಗಮಿಸಿದ ಸಂದರ್ಭದಲ್ಲಿ ಟ್ರಂಪ್ ಅವರ ಹೇಳಿಕೆಗಳು ಬಂದಿವೆ. ಎರಡೂ ದೇಶಗಳು ಮಧ್ಯಂತರ ವ್ಯಾಪಾರ ಒಪ್ಪಂದಕ್ಕಾಗಿ ಮಾತುಕತೆಗಳಲ್ಲಿ ತೊಡಗಿವೆ.

### ಭಾರತಕ್ಕೆ ಡೈರಿ ಕ್ಷೇತ್ರ ಕಷ್ಟಕರ

ಕೃಷಿ ಮತ್ತು ಡೈರಿ ಕ್ಷೇತ್ರಗಳು ಅಮೆರಿಕಕ್ಕೆ ಸುಂಕ ರಿಯಾಯಿತಿಗಳನ್ನು ನೀಡಲು ಭಾರತಕ್ಕೆ ಕಷ್ಟಕರ ಮತ್ತು ಸವಾಲಿನ ಕ್ಷೇತ್ರಗಳಾಗಿವೆ. ಭಾರತವು ಇಲ್ಲಿಯವರೆಗೆ ಸಹಿ ಹಾಕಿರುವ ಯಾವುದೇ ಮುಕ್ತ ವ್ಯಾಪಾರ ಒಪ್ಪಂದಗಳಲ್ಲಿ ಡೈರಿಯನ್ನು ತೆರೆದಿಲ್ಲ. ಕೆಲವು ಕೈಗಾರಿಕಾ ಸರಕುಗಳು, ಆಟೋಮೊಬೈಲ್‌ಗಳು ವಿಶೇಷವಾಗಿ ವಿದ್ಯುತ್ ವಾಹನಗಳು, ವೈನ್‌ಗಳು, ಪೆಟ್ರೋಕೆಮಿಕಲ್ ಉತ್ಪನ್ನಗಳು,ಡೈರಿ , ಸೇಬುಗಳು, ಮರದ ಬೀಜಗಳು ಮತ್ತು ತಳೀಯವಾಗಿ ಮಾರ್ಪಡಿಸಿದ ಬೆಳೆಗಳಂತಹ ಕೃಷಿ ವಸ್ತುಗಳ ಮೇಲೆ ಸುಂಕ ರಿಯಾಯಿತಿಗಳನ್ನು ಅಮೆರಿಕ ಬಯಸುತ್ತದೆ.



## ಮಾವನಿಂದ ಸೊಸೆ ಮೇಲೆ ಅತ್ಯಾಚಾರ

**ಫರಿದಾಬಾದ್:** ಹರಿಯಾಣದ ಫರಿದಾಬಾದ್‌ನಲ್ಲಿ ಮಹಿಳೆಯನ್ನು ಕೊಲೆ ಮಾಡಿ ಸಮಾಧಿ ಮಾಡಿದ ಪ್ರಕರಣದ ತನಿಖೆಯನ್ನು ಪೊಲೀಸರು ಚುರುಕುಗೊಳಿಸಿದ್ದು, ಕೊಲೆಗೆ ಮುನ್ನ ಆಕೆಯ ಮಾವನೇ ಸೊಸೆ ಮೇಲೆ ಅತ್ಯಾಚಾರ ಎಸಗಿರುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಕೊಲೆಯಲ್ಲಿ ಮೃತ ಮಹಿಳೆಯ ಅತ್ತೆ ಕೂಡ ಭಾಗಿಯಾಗಿದ್ದಾರೆಂದು ಹೇಳಲಾಗಿದ್ದು, ಅವರನ್ನೂ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಮುಖ ಆರೋಪಿ ಮಾವ ಭೂಪ್ ಸಿಂಗ್ ಅವರನ್ನು ಹೆಚ್ಚಿನ ತನಿಖೆಗಾಗಿ ಪೊಲೀಸರು ಮತ್ತೆ ಮೂರು ದಿನ ತಮ್ಮ ಕಸ್ಟಡಿಗೆ ತೆಗೆದುಕೊಂಡಿದ್ದಾರೆ. ವಿಚಾರಣೆಯ ಸಮಯದಲ್ಲಿ, ಕೊಲೆ ಪೂರ್ವ ಯೋಜಿತ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. 24 ವರ್ಷದ ಸೊಸೆಯನ್ನು ಕೊಲೆಗೆ ಏಪ್ರಿಲ್ 15 ರಂದು ಯೋಜಿಸಲಾಗಿತ್ತು ಮತ್ತು ಆಕೆಯ ಪತಿ ಹಾಗೂ ಅತ್ತೆ ಕೂಡ ಈ ಸಂಚಿನಲ್ಲಿ ಭಾಗಿಯಾಗಿದ್ದಾರೆ ಎಂದು ಹಿರಿಯ ತನಿಖಾ ಅಧಿಕಾರಿಯೊಬ್ಬರು ಹೇಳಿದ್ದಾರೆ.

## ಏರ್ ಇಂಡಿಯಾ ವಿಮಾನ ದುರಂತ : ತನಿಖೆಯಲ್ಲಿ ಪಾಲ್ಗೊಳ್ಳಲು ವಿಶ್ವಸಂಸ್ಥೆ ತನಿಖಾಧಿಕಾರಿಗೆ ಅವಕಾಶ ಭಾರತ ನಕಾರ

● ಉದಯವಾಹಿನಿ ನವದೆಹಲಿ

ಗುಜರಾತ್‌ನ ಅಹದಾಬಾದ್‌ನ ಸರ್ದಾರ್ ವಲ್ಲಭಭಾಯಿ ಪಟೇಲ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪ ಸಂಭವಿಸಿದ ಏರ್ ಇಂಡಿಯಾ ವಿಮಾನ ದುರಂತದ ತನಿಖೆಯಲ್ಲಿ ಪಾಲ್ಗೊಳ್ಳಲು ವಿಶ್ವಸಂಸ್ಥೆಯ ತನಿಖಾಧಿಕಾರಿಗೆ ಅವಕಾಶ ನೀಡಲು ಭಾರತ ನಿರಾಕರಿಸಿದೆ. ಭಾರತದಲ್ಲಿದ್ದ ತನಿಖಾಧಿಕಾರಿಗೆ ವೀಕ್ಷಕ ಸ್ಥಾನಮಾನ ನೀಡುವಂತೆ ಅಂತರರಾಷ್ಟ್ರೀಯ ನಾಗರಿಕ ವಿಮಾನಯಾನ ಸಂಸ್ಥೆ ಕೇಳಿದ ನಂತರ ಭಾರತೀಯ ಅಧಿಕಾರಿಗಳು ಈ ಪ್ರಸ್ತಾಪವನ್ನು ನಿರಾಕರಣೆ ಮಾಡಿದ್ದಾರೆ.

ಜೂನ್ 12 ರಂದು ಅಹಮದಾಬಾದ್‌ನಲ್ಲಿ 270 ಜನರ ಸಾವಿಗೆ ಕಾರಣವಾದ ಬೋಯಿಂಗ್ 787-8 ಡ್ರೀಮ್‌ಲೈನರ್ ಅಪಘಾತದ ನಂತರ ಸಹಾಯ ನೀಡಲು ವಿಶ್ವಸಂಸ್ಥೆಯ ವಾಯುಯಾನ ಸಂಸ್ಥೆ ತನ್ನ ತನಿಖಾಧಿಕಾರಿಗಳಲ್ಲಿ ಒಬ್ಬರನ್ನು ಭಾರತಕ್ಕೆ ನೀಡುವ ಅಸಾಮಾನ್ಯ ಕ್ರಮವನ್ನು ತೆಗೆದುಕೊಂಡಿದೆ ಎಂದು ಮೂಲಗಳು ತಿಳಿಸಿವೆ. ಈ ಹಿಂದೆ, 2014 ರಲ್ಲಿ ಮಲೇಷಿಯಾದ ವಿಮಾನ ಪತನ ಮತ್ತು 2020 ರಲ್ಲಿ ಉಕ್ರೇನಿಯನ್ ಜೆಟ್‌ಲೈನರ್ ಪತನದಂತಹ ಕೆಲವು ತನಿಖೆಗಳಿಗೆ ಸಹಾಯ ಮಾಡಲು ಐಸಿಎಒ ತನಿಖಾಧಿಕಾರಿಗಳನ್ನು ನಿಯೋಜಿಸಿತ್ತು. ಗುರುವಾರ, ಸರ್ಕಾರವು ಕಪ್ಪು ಪೆಟ್ಟಿಗೆಗಳಿಂದ



ಡೇಟಾವನ್ನು ಹೊರತೆಗೆಯಲಾಗುತ್ತಿದೆ ಮತ್ತು ಏರ್ ಇಂಡಿಯಾ ವಿಮಾನ ಅಪಘಾತಕ್ಕೆ ಕಾರಣವಾದ ಘಟನೆಗಳ ಅನುಕ್ರಮವನ್ನು ಪುನರ್ನಿರ್ಮಿಸಲು ಕಾಕ್‌ಪಿಟ್ ಧ್ವನಿ ರೆಕಾರ್ಡರ್ ಮತ್ತು ಫ್ಲೈಟ್ ಡೇಟಾ ರೆಕಾರ್ಡರ್‌ಗಳ ವಿಶ್ಲೇಷಣೆ ನಡೆಯುತ್ತಿದೆ ಎಂದು ಹೇಳಿದೆ.

ವಿಮಾನ ಪತನಗೊಂಡ ಹಾಸ್ಟೆಲ್‌ನ ಮೇಲ್ಛಾವಣಿಯಲ್ಲಿ ಒಂದು ಪೆಟ್ಟಿಗೆ ಮತ್ತು ಅವಶೇಷಗಳಿಂದ ಇನ್ನೊಂದು ಪೆಟ್ಟಿಗೆ ಪತ್ತೆಯಾಗಿದ್ದು, ಎರಡೂ ಪೆಟ್ಟಿಗೆಗಳನ್ನು ದೆಹಲಿಯ ಎಎಐಬಿ ಪ್ರಯೋಗಾಲಯಕ್ಕೆ ಸುರಕ್ಷಿತವಾಗಿ ಕಳುಹಿಸಲಾಗಿದೆ ಎಂದು ಸರ್ಕಾರ ತಿಳಿಸಿದೆ. ಮೊದಲ ಕಪ್ಪು ಪೆಟ್ಟಿಗೆ ಮಧ್ಯಾಹ್ನ 2 ಗಂಟೆಗೆ ಪ್ರಯೋಗಾಲಯವನ್ನು ತಲುಪಿತು. ಎರಡನೆಯದು ಸಂಜೆ 5.15 ಕ್ಕೆ ತಲುಪಿತು.

## 2026ರಲ್ಲಿ ತಮಿಳುನಾಡಿನಲ್ಲಿ ಎನ್‌ಡಿಎ ಸರ್ಕಾರ

**ಚನ್ನೈ:** 2026 ರ ವಿಧಾನಸಭಾ ಚುನಾವಣೆಯ ನಂತರ ತಮಿಳುನಾಡಿನಲ್ಲಿ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) ಸರ್ಕಾರ ರಚಿಸಲಿದ್ದು, ಅದರಲ್ಲಿ ಬಿಜೆಪಿ ಕೂಡ ಸೇರಿರುತ್ತದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಗೊಂದಲಗಳಿಗೆ ತೆರೆಎಳೆಯುವ ಪ್ರಯತ್ನ ಮಾಡಿದ್ದಾರೆ.

ಬಿಜೆಪಿ ಮತ್ತು ಎಐಎಡಿಎಂಕೆಯ ಎನ್‌ಡಿಎ ಮೈತ್ರಿಕೂಟ ಮುಂದಿನ ವರ್ಷ ತಮಿಳುನಾಡಿನಲ್ಲಿ ಸರ್ಕಾರ ರಚಿಸಲಿದೆ. ಮುಖ್ಯಮಂತ್ರಿ ಅಭ್ಯರ್ಥಿ ಎಐಎಡಿಎಂಕೆ ಪಕ್ಷದವರಾಗಿರುತ್ತಾರೆ. ಆದಾಗ್ಯೂ, ಪಕ್ಷದ ಪ್ರಸ್ತುತ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಕೆ ಪಳನಿಸ್ವಾಮಿ (ಇಪಿಎಸ್) ಅವರ ಹೆಸರನ್ನು ಅವರಿನ್ನೂ ಪ್ರಸ್ತಾಪ ಮಾಡದಿರುವುದು ಕುತೂಹಲಕ್ಕೆ ಕಾರಣವಾಗಿದೆ.

ತಮಿಳುನಾಡಿನ ಸ್ಥಳೀಯ ಪತ್ರಿಕೆಗೆ ನೀಡಿರುವ ಸಂದರ್ಶನದಲ್ಲಿ 1967 ರಿಂದ ಯಾವುದೇ ದ್ರಾವಿಡ ಪಕ್ಷವು ತಮಿಳುನಾಡಿನಲ್ಲಿ ಮಿತ್ರ ಪಕ್ಷಗಳೊಂದಿಗೆ ಅಧಿಕಾರವನ್ನು ಹಂಚಿಕೊಂಡಿಲ್ಲವಾದ್ದರಿಂದ ಈ ಹೇಳಿಕೆ ಮಹತ್ವದ್ದಾಗಿದೆ. ಮೈತ್ರಿಕೂಟವು ಗೆಲುವು ಸಾಧಿಸಿದರೆ ರಾಷ್ಟ್ರೀಯ ಪಕ್ಷವಾದ ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಆಡಳಿತದಲ್ಲಿ ಪಾಲನ್ನು ಪಡೆಯುವ ಬಗ್ಗೆ ಊಹಾಪೋಹಗಳನ್ನು ಹುಟ್ಟುಹಾಕಿದೆ.

ನಟ ವಿಜಯ್ ಅವರ ಪಕ್ಷವಾದ ತಮಿಳಗ ವೆಟ್ರಿ ಕಳಗಂ (ಟಿವಿಕೆ) ಎನ್ಡಿಎ ಸೇರುತ್ತದೆಯೇ ಎಂದು ಕೇಳಿದಾಗ, ಚುನಾವಣೆಗೆ ಇನ್ನೂ ಸಮಯವಿದೆ ಎಂದು ಶಾ ಹಾರಿಕೆ ಉತ್ತರ ನೀಡುವ ಮೂಲಕ ಸಾಧ್ಯತೆಯನ್ನು ಮುಕ್ತವಾಗಿಟ್ಟಿದ್ದಾರೆ. ಜೂನ್ 8 ರಂದು ಮಧುರೈನಲ್ಲಿ ನಡೆದ ರ್‍ಯಾಲಿಯಲ್ಲಿ ಆಡಳಿತಾರೂಢ ಡಿಎಂಕೆಯನ್ನು

ಗೊಂದಲಗಳಿಗೆ ತೆರೆ ಎಳೆಯುವ ಪ್ರಯತ್ನ



## ಇರಾನ್‌ನ ಖಮೇನಿ ಹತ್ಯೆಗೆ ಪ್ಲ್ಯಾನ್ ಮಾಡಿದ್ದು ನಿಜ : ಇಸ್ರೇಲ್

**ಟೆಲ್ ಅವಿವ್:** ಇತ್ತೀಚಿನ ಇಸ್ರೇಲ್-ಇರಾನ್ ಉದ್ವಿಗ್ನತೆಯ ಸಮಯದಲ್ಲಿ ತಮ್ಮ ದೇಶದ ಸೇನೆಯು ಇರಾನ್‌ನ ಸರ್ವೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಅವರನ್ನು ಹತ್ಯೆ ಮಾಡಲು ಸಕ್ರಿಯವಾಗಿ ಪ್ರಯತ್ನಿಸಿತ್ತು ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಆಯತೊಲ್ಲಾ ಅಲಿ ಖಮೇನಿ ಹತ್ಯೆಗೆ ಪ್ರಯತ್ನ ಮಾಡಲಾಗಿತ್ತು. ಆದರೆ ಒಂದು ಕಾರ್ಯಸಾಧ್ಯವಾದ ಅವಕಾಶವನ್ನು ಗುರುತಿಸುವಲ್ಲಿ ನಾವು ವಿಫಲವಾದೆವು ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಸಂದರ್ಶನವೊಂದರಲ್ಲಿ ಹೇಳಿರುವುದು ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ.

ಪ್ರಮುಖ ಇಸ್ರೇಲಿ ಪ್ರಸಾರಕರಾದ ಚಾನೆಲ್ 12, ಚಾನೆಲ್ 13 ಮತ್ತು ಸರ್ಕಾರಿ ಸ್ವಾಮ್ಯದ ಕಾನ್‌ನಲ್ಲಿ, ಪ್ರೈಮ್‌ಟೈಮ್ ಸಂದರ್ಶನಗಳ ಸರಣಿಯಲ್ಲಿ ಮಾತನಾಡಿದ ಇಸ್ರೇಲ್ ಕಾಟ್ಜ್, ಇಸ್ರೇಲ್‌ನ ಯುದ್ಧತಂತ್ರದ ಬಗ್ಗೆ ಹೊಸ ವಿವರಗಳನ್ನು ಬಹಿರಂಗಪಡಿಸಿದರು. ಈ ವೇಳೆ ಸಂಘರ್ಷ ತೀವ್ರಗೊಂಡ ನಂತರ ಇರಾನ್‌ನ ಆಯತೊಲ್ಲಾ ಖಮೇನಿ ಬಂಕರ್‌ನಲ್ಲಿ ಆಶ್ರಯ ಪಡೆದ ಮೇಲೆ, ಅವರ ಹತ್ಯಾ ಯೋಜನೆಯನ್ನು ರದ್ದುಗೊಳಿಸಲಾಯಿತು ಎಂದು ಇಸ್ರೇಲ್ ರಕ್ಷಣಾ ಸಚಿವರು ಮಾಹಿತಿ ನೀಡಿದರು.



ಸಂಘರ್ಷ ತೀವ್ರಗೊಳ್ಳುತ್ತಿದ್ದಂತೇ ಆಯತೊಲ್ಲಾ ಖಮೇನಿ ಬಂಕರ್‌ಗೆ ಹಿಮ್ಮೆಟ್ಟಿದರು. ಅವರು ತಕ್ಷಣವೇ ಉನ್ನತ ಮಿಲಿಟರಿ ಕಮಾಂಡರ್‌ಗಳೊಂದಿಗಿನ ಸಂವಹನವನ್ನು ಕಡಿತಗೊಳಿಸಿದರು. ಇದರಿಂದ ಅವರನ್ನು ಹುಡುಕುವುದು ನಮಗೆ ಕಷ್ಟವಾಯಿತು ಎಂದು ಇಸ್ರೇಲ್ ಕಾಟ್ಜ್ ಹತ್ಯಾ ಯೋಜನೆಯ ಬಗ್ಗೆ ಬಹಿರಂಗವಾಗಿ ಹೇಳಿಕೆ ನೀಡಿದ್ದಾರೆ.

**ಏನಂದಿದ್ದರು ಟ್ರಂಪ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು, ಆಯತೊಲ್ಲಾ ಅಲಿ ಖಮೇನಿ ಅಡಗಿರುವ ಬಂಕರ್ ಬಗ್ಗೆ ನಮಗೆ ನಿಖರವಾಗಿ ತಿಳಿದಿದೆ. ಅವರು ನಮಗೆ ಸುಲಭವಾದ ಗುರಿ. ಆದರೆ ಖಮೇನಿ ಅವರನ್ನು ಹತ್ಯೆ ಮಾಡುವ ಇಸ್ರೇಲ್ ಯೋಜನೆಗೆ ನಮ್ಮ ಬೆಂಬಲ ಇಲ್ಲ ಎಂದು ಹೇಳಿದ್ದನ್ನು ಇಲ್ಲಿ ಸ್ಮರಿಸಬಹುದು. ಬಳಿಕ ಇರಾನ್‌ನಲ್ಲಿ ಆಡಳಿತ ಬದಲಾವಣೆ ಮಾಡುವುದು ನಮ್ಮ ಉದ್ದೇಶವಲ್ಲ ಎಂದು ಹೇಳಿದ ಡೊನಾಲ್ಡ್ ಟ್ರಂಪ್, ಕದನ ವಿರಾಮ ಒಪ್ಪಂದಕ್ಕೆ ಮುಂದಾಗಬೇಕೆಂದು ಇಸ್ರೇಲ್ ಮತ್ತು ಇರಾನ್ ಮೇಲೆ ಒತ್ತಡ ಹೇರಲಾರಂಭಿಸಿದ್ದರು.

> ಸಂಘರ್ಷದ ಸಮಯದಲ್ಲಿ ಆಯತೊಲ್ಲಾ ಖಮೇನಿ ನಮ್ಮ ಕಣ್ಣಿಗೆ ಬಿದ್ದಿದ್ದರೆ, ಪರಿಣಾಮ ಬೇರೆಯದ್ದೇ ಆಗಿರುತ್ತಿತ್ತು. ನಾವು ಅವರಿಗಾಗಿ ಬಹಳ ಹುಡುಕಾಟ ನಡೆಸಿದೆವು. ಯುದ್ಧದ ಸಮಯದಲ್ಲಿ ತೆಹ್ರಾನ್‌ನಲ್ಲಿನ ನಾಯಕತ್ವವನ್ನು ನೇರವಾಗಿ ಗುರಿಯಾಗಿಸುವುದು ನಮ್ಮ ಉದ್ದೇಶವಾಗಿತ್ತು ಎಂದು ಇಸ್ರೇಲ್‌ನ ರಕ್ಷಣಾ ಸಚಿವರೇ ಸಾರ್ವಜನಿಕವಾಗಿ ದೃಢೀಕರಣ ನೀಡಿರುವುದು ಎಲ್ಲರನ್ನೂ ಅಚ್ಚರಿಗೊಳಿಸಿದೆ. -ಕಾಟ್ಜ್
> ಇಸ್ರೇಲ್ ರಕ್ಷಣಾ ಸಚಿವ

## ಜೈಶ್ ಉಗ್ರರಿಗಾಗಿ ಶೋಧ

**ಜಮ್ಮು:** ಜಮ್ಮು ಮತ್ತು ಕಾಶ್ಮೀರದ ಉಧಂಪುರ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ಪಾಕಿಸ್ತಾನ ಮೂಲದ ಜೈಶ್-ಎ-ಮೊಹಮ್ಮದ್ (ಜೆಇಎಂ) ಸಂಘಟನೆಯ ಮೂವರು ಭಯೋತ್ಪಾದಕರನ್ನು ಪತ್ತೆಹಚ್ಚಲು ಭದ್ರತಾ ಪಡೆಗಳ ಜಂಟಿ ತಂಡವು ವ್ಯಾಪಕ ಶೋಧ ಕಾರ್ಯಾಚರಣೆ ನಡೆಸುತ್ತಿವೆ. ನಿನ್ನೆ ಭದ್ರತಾ ಪಡೆಗಳೊಂದಿಗಿನ ಎನ್‌ಕೌಂಟರ್‌ನಲ್ಲಿ ಪಾಕಿಸ್ತಾನ ಮೂಲದ ಜೆಇಎಂ ಭಯೋತ್ಪಾದಕನೊಬ್ಬ ಸಾವನ್ನಪ್ಪಿದ್ದಾನೆ ಮತ್ತು ಅವನ ಮೂವರು ಸಹಚರರು ಬಸಂತ್‌ಗಢ ಪಟ್ಟಿಯ ಅರಣ್ಯ ಪ್ರದೇಶದಲ್ಲಿ ಸಿಕ್ಕಿಬಿದ್ದಿದ್ದಾರೆ. ಡ್ರೋನ್‌ಗಳು ಮತ್ತು ಸ್ನಿಫರ್ ನಾಯಿಗಳ ಬೆಂಬಲದೊಂದಿಗೆ, ಕಾರ್ಯಾಚರಣೆ ಬೆಳಿಗ್ಗೆ ಮತ್ತೆ ಪುನರಾರಂಭವಾಯಿತು.

ಗುಂಪಿನ ಉಳಿದ ಭಯೋತ್ಪಾದಕರನ್ನು ನಿರ್ಮೂಲನೆ ಮಾಡಲು ಹೆಚ್ಚುವರಿ ಬಲವರ್ಧನೆಗಳೊಂದಿಗೆ ಕಾರ್ಡನ್ ಅನ್ನು ಮತ್ತಷ್ಟು ಬಲಪಡಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ನಾಲ್ವರು ಭಯೋತ್ಪಾದಕರ ಗುಂಪನ್ನು ಒಂದು ವರ್ಷದಿಂದ ಪತ್ತೆಹಚ್ಚಲಾಗಿತ್ತು. ನಿನ್ನೆ ಬೆಳಿಗ್ಗೆ ಬಸಂತ್‌ಗಢದ ದೂರದ ಬಿಹಾಲಿ ಪ್ರದೇಶದಲ್ಲಿ ಸೇನೆ ಮತ್ತು ಪೊಲೀಸರ ಜಂಟಿ ಶೋಧ ತಂಡ ಅವರನ್ನು ಎದುರಿಸಿತು ಎಂದು ಅವರು ಹೇಳಿದರು.

ನಾಲ್ವರು ಭಯೋತ್ಪಾದಕರು ಕರೂರ್ ನಲ್ಲಾ ಬಳಿ ಅಡಗಿಕೊಂಡಿರುವುದು ಕಂಡುಬಂದಿದ್ದು, ಸೇನೆಯ ಪ್ಯಾರಾ ಕಮಾಂಡೋಗಳ ನೇತೃತ್ವದ ಜಂಟಿ ಶೋಧ ತಂಡ ಅವರನ್ನು ಎದುರಿಸಿತು. ಇದರ ಪರಿಣಾಮವಾಗಿ ಎನ್‌ಕೌಂಟರ್ ನಡೆಯಿತು.

● ಆರು ವರ್ಷಗಳ ಅಂತರದ ನಂತರ ಕೈಲಾಸ ಮಾನಸ ಸರೋವರ ಯಾತ್ರೆ ಪುನರಾರಂಭಗೊಂಡಿದ್ದಕ್ಕೆ ಸಂತೋಷ ವ್ಯಕ್ತಪಡಿಸಿದರು

# ಚೀನಾದೊಂದಿಗೆ 'ಸಕರಾತ್ಮಕ' ಮಾತುಕತೆ ನಡೆಸಿದ ರಾಜನಾಥ್ ಸಿಂಗ್

**ಕ್ಲಿಂಗ್ಡಾವೊ:** ಭಾರತ ಮತ್ತು ಚೀನಾ ದ್ವಿಪಕ್ಷೀಯ ಸಂಬಂಧಗಳಲ್ಲಿ ಸಕಾರಾತ್ಮಕ ಆವೇಗವನ್ನು ಕಾಯ್ದುಕೊಳ್ಳಬೇಕು ಮತ್ತು ಹೊಸ ಸಂಕೀರ್ಣತೆಗಳನ್ನು ಸೇರಿಸುವುದನ್ನು ತಪ್ಪಿಸಬೇಕು. ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ತಮ್ಮ ಚೀನಾದ ಪ್ರತಿರೂಪ ಅಡ್ಮಿರಲ್ ಡಾನ್ ಜುನ್ ಅವರಿಗೆ ತಿಳಿಸಿದ್ದಾರೆ.ಚೀನಾದ ಬಂದರು ನಗರದಲ್ಲಿ ನಡೆದ ಶಾಂಘೈ ಸಹಕಾರ ಸಂಸ್ಥೆಯ ಎಸ್‌ಸಿಒ) ರಕ್ಷಣಾ ಸಚಿವರ ಸಮಾವೇಶದ ಸಂದರ್ಭದಲ್ಲಿ ಸಿಂಗ್ ಅವರು ಡಾನ್ ಅವರೊಂದಿಗೆ ರಚನಾತ್ಮಕ ಮಾತುಕತೆ ನಡೆಸಿದರು.

( ಪೂರ್ವ ಲಡಾಖ್‌ನಲ್ಲಿ ವಾಸ್ತವಿಕ ನಿಯಂತ್ರಣ ರೇಖೆ (ಎಲ್‌ಸಿ) ಉದ್ದಕ್ಕೂ ಮಿಲಿಟರಿ ಬಿಕ್ಕಟ್ಟನ್ನು ಕೊನೆಗೊಳಿಸಲು ಕಳೆದ ಅಕ್ಟೋಬರ್‌ನಲ್ಲಿ ಮಾಡಿಕೊಂಡ ತಿಳುವಳಿಕೆಯ ನಂತರ ನವದೆಹಲಿ ಮತ್ತು ಬೀಜಿಂಗ್ ಎರಡೂ ತಮ್ಮ ಸಂಬಂಧಗಳನ್ನು ಪುನಃಸ್ಥಾಪಿಸಲು ಪ್ರಯತ್ನಿಸುತ್ತಿರುವ ಮಧ್ಯೆ ಭಾರತೀಯ ರಕ್ಷಣಾ ಸಚಿವರ ಚೀನಾ ಭೇಟಿ ನಡೆಯಿತು. ಸುಮಾರು ಆರು ವರ್ಷಗಳ ಅಂತರದ ನಂತರ ಕೈಲಾಸ ಮಾನಸ ಸರೋವರ ಯಾತ್ರೆ ಪುನರಾರಂಭಗೊಂಡಿದ್ದಕ್ಕೆ



ನನ್ನ ಸಂತೋಷವನ್ನು ವ್ಯಕ್ತಪಡಿಸಿದೆ ಎಂದು ಅವರು ಹೇಳಿದರು. ಈ ಸಕಾರಾತ್ಮಕ ಆವೇಗವನ್ನು ಕಾಪಾಡಿಕೊಳ್ಳುವುದು ಮತ್ತು ದ್ವಿಪಕ್ಷೀಯ ಸಂಬಂಧದಲ್ಲಿ ಹೊಸ ಸಂಕೀರ್ಣತೆಗಳನ್ನು ಸೇರಿಸುವುದನ್ನು ತಪ್ಪಿಸುವುದು ಎರಡೂ ಕಡೆಯವರ ಕರ್ತವ್ಯವಾಗಿದೆ ಎಂದು ಅವರು ಹೇಳಿದರು.

ಬುದ್ಧಿವಂತಿಕೆ ಮತ್ತು ಚೈತನ್ಯವನ್ನು ಸಂಕೇತಿಸುವ ಜೀವನದ ಮರ ಎಂಬ ಮಧುಬನಿ ವರ್ಣಚಿತ್ರವನ್ನು ಸಿಂಗ್ ಡಾನ್ ಅವರಿಗೆ ಪ್ರಸ್ತುತಪಡಿಸಿದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮಧುಬನಿ ಕಲಾ ಚಿತ್ರಕಲೆ ಬಿಹಾರದ ಮಿಥಿಲಾ ಪ್ರದೇಶದಲ್ಲಿ ಹುಟ್ಟಿಕೊಂಡಿದೆ. ಈ ಚಿತ್ರಕಲೆ ಬುದ್ಧಿವಂತಿಕೆ ಮತ್ತು ಚೈತನ್ಯದ ಸಂಕೇತವಾಗಿದೆ.

### ಅಭಿವೃದ್ಧಿಗಾಗಿ ಪರಸ್ಪರ ನಂಬಿಕೆ

ಚೀನಾದ ಓದುಗ ಹೇಳಿಕೆಯ ಪ್ರಕಾರ, ಭಾರತವು ಚೀನಾದೊಂದಿಗೆ ಸಂಘರ್ಷ ಅಥವಾ ಮುಖಾಮುಖಿಯನ್ನು ಬಯಸುವುದಿಲ್ಲ ಮತ್ತು ಭಿನ್ನಾಭಿಪ್ರಾಯಗಳನ್ನು ಸರಿಯಾಗಿ ನಿಭಾಯಿಸಲು, ಸಂವಹನವನ್ನು ಹೆಚ್ಚಿಸಲು ಮತ್ತು ದ್ವಿಪಕ್ಷೀಯ ಸಂಬಂಧಗಳ ಸ್ಥಿರ ಅಭಿವೃದ್ಧಿಗಾಗಿ ಪರಸ್ಪರ ನಂಬಿಕೆಯನ್ನು ಉತ್ತೇಜಿಸಲು ಸಿದ್ಧವಾಗಿದೆ ಎಂದು ಸಿಂಗ್ ಡಾನ್ ಅವರೊಂದಿಗಿನ ಸಭೆಯಲ್ಲಿ ಹೇಳಿದರು.

ರಾಜನಾಥ್ ಸಿಂಗ್ ಅವರ ಕ್ವಿಂಗ್ಡಾವೊ ಭೇಟಿಯು ಟಿಬೆಟ್‌ನಲ್ಲಿ ಕೈಲಾಸ ಮಾನಸ ಸರೋವರ ಯಾತ್ರೆಯ ಪುನರಾರಂಭದೊಂದಿಗೆ ಹೊಂದಿಕೆಯಾಯಿತು. ಇದು ಸುಮಾರು ಐದು ವರ್ಷಗಳ ಅಂತರದ ನಂತರ ನಡೆಯುತ್ತಿದೆ. 2020 ರಲ್ಲಿ -19 ಸಾಂಕ್ರಾಮಿಕ ರೋಗದಿಂದಾಗಿ ಮತ್ತು ನಂತರ ಪೂರ್ವ ಲಡಾಖ್‌ನಲ್ಲಿ ವಾಸ್ತವಿಕ ನಿಯಂತ್ರಣ ರೇಖೆಯಲ್ಲಿ ಎರಡೂ ಕಡೆಯವರ ನಡುವಿನ ಮಿಲಿಟರಿ ಬಿಕ್ಕಟ್ಟಿನ ಕಾರಣದಿಂದಾಗಿ ಕೈಲಾಸ ಮಾನಸ ಸರೋವರ ಯಾತ್ರೆಯನ್ನು ಸ್ಥಗಿತಗೊಳಿಸಲಾಯಿತು.

> ಕ್ಲಿಂಗ್ಡಾವೋದಲ್ಲಿ ನಡೆದ ಎಸ್‌ಸಿಒ ರಕ್ಷಣಾ ಸಚಿವರ ಸಭೆಯ ಸಂದರ್ಭದಲ್ಲಿ ಚೀನಾದ ರಕ್ಷಣಾ ಸಚಿವ ಅಡ್ಮಿರಲ್ ಡಾನ್ ಜುನ್ ಅವರೊಂದಿಗೆ ಮಾತುಕತೆ ನಡೆಸಲಾಯಿತು. ದ್ವಿಪಕ್ಷೀಯ ಸಂಬಂಧಗಳ ಕುರಿತಾದ ವಿಷಯಗಳ ಕುರಿತು ನಾವು ರಚನಾತ್ಮಕ ಮತ್ತು ಭವಿಷ್ಯದ ದೃಷ್ಟಿಕೋನದ ಅಭಿಪ್ರಾಯಗಳ ವಿನಿಮಯವನ್ನು ಹೊಂದಿದ್ದೇವೆ, ಎಂದು ಸಿಂಗ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

**ಸಕಾರಾತ್ಮಕ ಆವೇಗವನ್ನು ಕಾಯ್ದುಕೊಳ್ಳಬೇಕು**

ಚೀನಾದ ಟಿಬೆಟ್ ಸ್ವಾಯತ್ತ ಪ್ರದೇಶದಲ್ಲಿರುವ ಕೈಲಾಸ ಪರ್ವತ ಮತ್ತು ಮಾನಸ ಸರೋವರದ ತೀರ್ಥಯಾತ್ರೆ ಹಿಂದೂಗಳು ಹಾಗೂ ಜೈನರು ಮತ್ತು ಬೌದ್ಧರಿಗೆ ಧಾರ್ಮಿಕ ಮಹತ್ವದ್ದಾಗಿದೆ. ಪೂರ್ವ ಲಡಾಖ್ ನಲ್ಲಿನ ಮಿಲಿಟರಿ ಬಿಕ್ಕಟ್ಟು ಮೇ 2020 ರಲ್ಲಿ ಪ್ರಾರಂಭವಾಯಿತು ಮತ್ತು ಆ ವರ್ಷದ ಜೂನ್‌ನಲ್ಲಿ ಗಾಲ್ವಾನ್ ಕಣಿವೆಯಲ್ಲಿ ನಡೆದ ಮಾರಕ ಘರ್ಷಣೆಯು ಎರಡು ನೆರೆಹೊರೆಯವರ ನಡುವಿನ ಸಂಬಂಧದಲ್ಲಿ ತೀವ್ರ ಕುಸಿತಕ್ಕೆ ಕಾರಣವಾಯಿತು.

ಕಳೆದ ವರ್ಷ ಅಕ್ಟೋಬರ್ 21 ರಂದು ಅಂತಿಮಗೊಳಿಸಿದ ಒಪ್ಪಂದದ ಪ್ರಕಾರ ಡೆಮ್ ಚೋಕ್ ಮತ್ತು ಡೆಪ್ಸಾಂಗ್‌ನ ಕೊನೆಯ ಎರಡು ಘರ್ಷಣೆ ಬಿಂದುಗಳಿಂದ ಬೇರ್ಪಡುವಿಕೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಮುಖಾಮುಖಿ ಪರಿಣಾಮಕಾರಿಯಾಗಿ ಕೊನೆಗೊಂಡಿತು.ಕಳೆದ ಡಿಸೆಂಬರ್‌ನಲ್ಲಿ, ಎನ್‌ಎಸ್‌ಎ ದೋವಲ್ ಬೀಜಿಂಗ್‌ಗೆ ಭೇಟಿ ನೀಡಿ ವಿಶೇಷ ಪ್ರತಿನಿಧಿಯ ಚೌಕಟಿನಡಿಯಲ್ಲಿ ವಾಂಗ್ ಜೊತೆ ಮಾತುಕತೆ ನಡೆಸಿದರು.

## ಅತ್ಯಾಚಾರ ನಡೆಸಿದ್ದ ತಂದೆ ಬಂಧನ

**ಜೈಪುರ:** ಐದು ವರ್ಷಗಳಿಂದ ತನ್ನ ಇಬ್ಬರು ಅಪ್ರಾಪ್ತ ಹೆಣ್ಣುಮಕ್ಕಳ ಮೇಲೆ ನಿರಂತರ ಅತ್ಯಾಚಾರ ಸೇರಿದಂತೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ರಾಜಸ್ಥಾನದಲ್ಲಿ ವ್ಯಕ್ತಿಯೊಬ್ಬನನ್ನು ಬಂಧಿಸಿ ಜೈಲಿಗೆ ಕಳುಹಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪತಿಯ ವಿರುದ್ಧ ಪ್ರಕರಣ ದಾಖಲಿಸುವ ಬಗ್ಗೆ ಆರಂಭದಲ್ಲಿ ಆತಂಕಗೊಂಡಿದ್ದ ಬಾಲಕಿಯರು ಮತ್ತು ಅವರ ತಾಯಿಯ ಹೇಳಿಕೆಗಳನ್ನು ದಾಖಲಿಸಿದ ನಂತರ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಸದರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆಯನ್ನು ಹಿರಿಯ ಪೊಲೀಸ್ ಅಧಿಕಾರಿಗೆ ಹಸ್ತಾಂತರಿಸಲಾಗಿದೆ. ಐದು ವರ್ಷಗಳಿಗೂ ಹೆಚ್ಚು ಕಾಲ ಲೈಂಗಿಕ ದೌರ್ಜನ್ಯ ನಡೆಯುತ್ತಿದೆ ಎಂದು ಪೊಲೀಸ್ ಉಪ ಆಯುಕ್ತ (ಪಶ್ಚಿಮ) ಅಮಿತ್ ಕುಮಾರ್ ಪಿಟಿಐಗೆ ತಿಳಿಸಿದ್ದಾರೆ.

ಜೂನ್ 20 ರಂದು ಇಬ್ಬರು ಹೆಣ್ಣು ಮಕ್ಕಳು ಹೊಟ್ಟೆನೋವಿನಿಂದ ಬಳಲುತ್ತಿದ್ದರು. ಇಬ್ಬರೂ ಆರೋಗ್ಯವಾಗಿರಲಿಲ್ಲ. ಇಬ್ಬರೂ ಹುಡುಗಿಯರು ಹೊಟ್ಟೆನೋವು ಮತ್ತು ಮಾನಸಿಕ ಒತ್ತಡದಿಂದ ಬಳಲುತ್ತಿದ್ದಾರೆ ಎಂದು ತಾಯಿ ವೈದ್ಯರಿಗೆ ತಿಳಿಸಿದ್ದಾರೆ. ವೈದ್ಯರು ವಿಚಾರಿಸಿದಾಗ ಸತ್ಯ ಬೆಳಕಿಗೆ ಬಂದಿದೆ. ಆರೋಪಿಯನ್ನು ಬಂಧಿಸಿ, ನ್ಯಾಯಾಲಯದ ಮುಂದೆ ಹಾಜರುಪಡಿಸಿ ಜೈಲಿಗೆ ಕಳುಹಿಸಲಾಗಿದೆ ಎಂದು ಡಿಸಿಪಿ ಹೇಳಿದರು.

# ರಕ್ತಸಿಕ್ತ ಅವತಾರದಲ್ಲಿ ರಶ್ಮಿಕಾ ಮಂದಣ್ಣ

ಮೊದಲ ಬಾರಿಗೆ ಮಹಿಳಾ ಪ್ರಧಾನ ಸಿನಿಮಾದಲ್ಲಿ ಮಿಂಚಲು ರಶ್ಮಿಕಾ ಮಂದಣ್ಣ ರೆಡಿಯಾಗಿದ್ದು ಮೈಸಾ ಚಿತ್ರದಲ್ಲಿ ಅಭಿನಯಿಸಲಿದ್ದಾರೆ. ಮೈಸಾ ಪ್ಯಾನ್ ಇಂಡಿಯಾ ಸಿನಿಮಾ ಆಗಿದ್ದು ಐದು ಭಾಷೆಯಲ್ಲಿ ನಿರ್ಮಾಣವಾಗಲಿದೆ . ಸಿನಿಮಾಗೆ ರವೀಂದ್ರ ಪುಲ್ಲೇ ನಿರ್ದೇಶನ ಮಾಡುತ್ತಿದ್ದಾರೆ ಅಜಯ್ ಹಾಗೂ ಅನಿಲ್ ಸಯ್ಯಾಪುರೆಡ್ಡಿ ಚಿತ್ರ ನಿರ್ಮಾಣ ಮಾಡುತ್ತಿದ್ದಾರೆ.



ಕನ್ನಡದ 'ಕಿರಿಕ್ ಪಾರ್ಟಿ ಸಿನಿಮಾದ ಮೂಲಕ ಬಣ್ಣದ ಲೋಕಕ್ಕೆ ಕಾಲಿಟ್ಟವರು ನಟಿ ರಶ್ಮಿಕಾ ಮಂದಣ್ಣ. ಆ ಸಿನಿಮಾದ ಗೆಲುವು ರಶ್ಮಿಕಾರ ವೃತ್ತಿ ಬದುಕಿಗೆ ಭದ್ರಬುನಾದಿಯನ್ನೇ ಹಾಕಿತು. ಎರಡನೇ ಸಿನಿಮಾದಲ್ಲೇ ಪುನೀತ್ ರಾಜ್ ಕುಮಾರ್ ಅವರಿಗೆ ನಾಯಕಿಯಾದರು. ಗೋಲ್ಡನ್ ಸ್ಟಾರ್ ಗಣೇಶ್, ದರ್ಶನ್, ಧ್ರುವ ಸರ್ಜಾ ಹೀಗೆ ಸ್ಟಾರ್ ನಟರ ಚಿತ್ರಗಳೇ ರಶ್ಮಿಕಾರನ್ನು ಹುಡುಕಿಕೊಂಡು ಬಂದವು. ಸಿಕ್ಕ ಅವಕಾಶವನ್ನು ಬಳಸಿಕೊಂಡು ಗೆಲುವಿನ ಏಣಿ ಏರಿಯೇ ಬಿಟ್ಟರು ರಶ್ಮಿಕಾ ಮಂದಣ್ಣ. ಈ ಹುಡುಗಿಯ ಮೇಲೆ ಪರಭಾಷಾ ನಿರ್ದೇಶಕರ ಕಣ್ಣು ಬಿತ್ತು. ನೋಡ ನೋಡುತ್ತಿದ್ದಂತೆಯೇ ತೆಲುಗಿಗೆ ಹೊರಟು ನಿಂತರು ಕೊಡಗಿನ ಬೆಡಗಿ. ರಶ್ಮಿಕಾರ ಅದೃಷ್ಟವೋ, ಸಿನಿಮಾ ತಂಡದ ಶ್ರಮವೋ ತೆಲುಗಿನಲ್ಲೂ ಗೆಲುವಿನ ನಾಗಾಲೋಟ ಮುಂದುವರೆಸಿದರು. 'ಛಲೋ ಸಿನಿಮಾದ ಮೂಲಕ ರಶ್ಮಿಕಾ ತೆಲುಗು ಸಿನಿಮಾ ರಂಗಕ್ಕೆ ಎಂಟ್ರಿ ಕೊಟ್ಟರೂ, ಅವರಿಗೆ ದೊಡ್ಡ ಹಿಟ್ ತಂದುಕೊಟ್ಟಿದ್ದು ವಿಜಯ್ ದೇವರಕೊಂಡ ಜೊತೆಗಿನ 'ಗೀತ ಗೋವಿಂದಂ ಚಿತ್ರ.

ಯಾವಾಗ ತೆಲುಗು ಚಿತ್ರಗಳು ಹಿಟ್ ಆಗ್ತಾ ಹೋದವೋ, ಕನ್ನಡದ ಸಿನಿಮಾಗಳನ್ನೇ ಮರೆತುಬಿಟ್ಟರು ರಶ್ಮಿಕಾ ಮಂದಣ್ಣ. ಕಳೆದ ಐದು ವರ್ಷಗಳಿಂದ ಕನ್ನಡದ ಒಂದೇ ಒಂದು ಚಿತ್ರದಲ್ಲಿ ಅವರು ಕಾಣಿಸಿಕೊಂಡಿಲ್ಲ. ಆ ಮಟ್ಟಿಗೆ ಪರಭಾಷಾ ಚಿತ್ರಗಳಲ್ಲಿ ಬ್ಯುಸಿಯಾಗಿದ್ದಾರೆ. ಕಳೆದ ಎರಡು ವರ್ಷಗಳಿಂದ ರಶ್ಮಿಕಾ ನಟನೆಯ ಬಹುತೇಕ ಚಿತ್ರಗಳು ಗೆದ್ದಿವೆ. ಬಾಕ್ಸ್ ಆಫೀಸಿನಲ್ಲಿ ನೂರಾರು ಕೋಟಿಯನ್ನು ತಂದುಕೊಟ್ಟಿವೆ. ಹಾಗಾಗಿ ರಶ್ಮಿಕಾ ಸಿನಿಮಾದಲ್ಲಿ ಇದ್ದರೆ, ಆ ಸಿನಿಮಾ ಗೆಲುವು ಗ್ಯಾರಂಟಿ ಎಂದೇ ಬಣ್ಣಿಸಲಾಗುತ್ತಿದೆ. ಇದರ ಜೊತೆಗೆ ಮತ್ತೊಂದು ಚರ್ಚೆಯೂ ಶುರುವಾಗಿದೆ. ಸಣ್ಣ ಪುಟ್ಟ ಗೆಲುವನ್ನೇ ಸಂಭ್ರಮಿಸುತ್ತಿದ್ದ ರಶ್ಮಿಕಾಗೆ ದೊಡ್ಡ ಮಟ್ಟದಲ್ಲಿ ಹೆಸರು ತಂದುಕೊಟ್ಟಿದ್ದು ಅಲ್ಲು ಅರ್ಜುನ್ ನಟನೆಯ ಪುಷ್ಪ ಚಿತ್ರ. ಸಾವಿರಾರು ಕೋಟಿ ರೂಪಾಯಿ ಬಿಸ್ನೆಸ್ ಮಾಡಿದ ಚಿತ್ರವದು. ಪುಷ್ಪ ಸಿನಿಮಾ ರಶ್ಮಿಕಾರ ವೃತ್ತಿಯನ್ನು ಮತ್ತಷ್ಟು ವಿಸ್ತರಿಸಿತು.




ಮೈಸಾ ಪ್ಯಾನ್ ಇಂಡಿಯಾ ಸಿನಿಮಾ

# ಮಾದಕ ಲುಕ್‌ನಲ್ಲಿ ಸಪ್ತಮಿ ಶೈನ್

ಒಂದಿಲ್ಲೊಂದು ಸಿನಿಮಾಗಳಲ್ಲಿ ಬ್ಯೂಸಿ ಆಗಿರುವ 'ಕಾಂತಾರ ಚಿತ್ರದ ನಟಿ ಸಪ್ತಮಿ ಗೌಡ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ಸೋಶಿಯಲ್ ಮೀಡಿಯಾದಲ್ಲಿ ಹವಾ ಕ್ರಿಯೆಟ್ ಮಾಡುತ್ತಲೇ ಇದ್ದಾರೆ. ಇದೀಗ ರೆಡ್ ವೈಟ್ ಕಾಂಬಿನೇಷನ್ ಡ್ರೆಸ್‌ನಲ್ಲಿ ಮಾಡಿಸಿರೋ ಫೋಟೋ ಶೂಟ್ ಪಡ್ಡೆ ಹುಡುಗರ ನಿದ್ದೆಗೆಡಿಸಿದೆ.

ಕೆಂಪು ಬಣ್ಣದ ಪ್ಯಾಂಟ್ ಹಾಗೂ ಬಿಳಿ ಬಣ್ಣದ ಸ್ಲೀವ್‌ಲೆಸ್ ಟಾಪ್ ಧರಿಸಿ ವಿವಿಧ ಭಂಗಿಯಲ್ಲಿ ನಟಿ ಹಾಟ್ ಕ್ಯೂಟ್ ಆಗಿ ಪೋಸ್ ಕೊಟ್ಟಿದ್ದಾರೆ. ಸಪ್ತಮಿಯ ಮುದ್ದಾದ ನಗುವಿಗೆ ಪಡ್ಡೆಹುಡುಗರು ಫಿದಾ ಆಗಿದ್ದಾರೆ. ನಟಿಯ ಫೋಟೋಗೆ ಏಂಜಲ್, ಸಿಂಗಾರ ಸಿರಿ ಹೀಗೆ ನಾನಾ ರೀತಿ ಕಾಮೆಂಟ್ ಮಾಡಿದ್ದಾರೆ. ಇನ್ನೂ ಕೆಲವರು ಇನ್ನೆಷ್ಟು ಅಂತ ನಮ್ಮ ಎದೆಗೆ ಬೆಂಕಿ ಹಚ್ಚೀರಿ ಅಂತಲೂ ಕೇಳಿದ್ದಾರೆ. 2020ರಲ್ಲಿ ಡಾಲಿ ಧನಂಜಯ ನಟನೆಯ 'ಪಾಪ್ ಕಾರ್ನ್ ಮಂಕಿ ಟೈಗರ್ ಸಿನಿಮಾದಲ್ಲಿ ಸಪ್ತಮಿ ಹೀರೋಯಿನ್ ಆಗಿ ಸಿನಿಮಾರಂಗಕ್ಕೆ ಪಾದಾರ್ಪಣೆ ಮಾಡಿದರು. ಈ ಚಿತ್ರದ ಕುರಿತು ಅಭಿಮಾನಿಗಳಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ಆ ನಂತರ 2022ರಲ್ಲಿ ರಿಷಬ್ ಶೆಟ್ಟಿ ನಟನೆಯ 'ಕಾಂತಾರ ಸಿನಿಮಾಗೆ ಸಪ್ತಮಿ ಗೌಡ ನಾಯಕಿಯಾಗಿ ಗಮನ ಸೆಳೆದರು. ಈ ಸಿನಿಮಾದ ಭರ್ಜರಿ ಸಕ್ಸಸ್ ನಂತರ ಪ್ಯಾನ್ ಇಂಡಿಯಾ ಹೀರೋಯಿನ್ ಆಗಿ ಸಪ್ತಮಿ ಗುರುತಿಸಿಕೊಂಡರು. ಬಳಿಕ ಬಾಲಿವುಡ್‌ನ 'ದಿ ವ್ಯಾಕ್ಸಿನ್ ವಾರ್ ಚಿತ್ರದಲ್ಲಿ ಸಪ್ತಮಿ ಪ್ರಮುಖ ಪಾತ್ರದಲ್ಲಿ ನಟಿಸಿದರು. ಸದ್ಯ ಬಾಲಿವುಡ್ ಬಳಿಕ ಟಾಲಿವುಡ್‌ನತ್ತ ಮುಖ ಮಾಡಿರುವ ಸಪ್ತಮಿ ತೆಲುಗು ನಟ ನಿತಿನ್‌ಗೆ ನಾಯಕಿಯಾಗಿ ನಟಿಸಿದ್ದಾರೆ. ಮೂಡ್ ಆಫ್ ತಮ್ಮುಡು ಚಿತ್ರದ ಮೂಲಕ ತೆಲುಗಿನಲ್ಲಿ ನಟಿ ಅದೃಷ್ಟ ಪರೀಕ್ಷೆಗಿಳಿದಿದ್ದಾರೆ.



# ನಟ ನಾಗಾರ್ಜುನ್ ರೀತಿಯಲ್ಲೇ ಸುದೀಪ್ ವಾಪಸ್ಸು

ಬಿಗ್ ಬಾಸ್ ನಿರೂಪಕರ ಬಗ್ಗೆ ಕನ್ನಡ ಮತ್ತು ತೆಲುಗಿನಲ್ಲಿ ಹೆಚ್ಚು ಚರ್ಚೆ ಮಾಡಲಾಗುತ್ತಿತ್ತು. ತೆಲುಗು ಮತ್ತು ಕನ್ನಡ ಬಿಗ್ ಬಾಸ್ ಶೋಗೆ ಈ ಬಾರಿ ಹೋಸ್ಟ್ ಯಾರು ಮಾಡ್ತಾರೆ ಅನ್ನೋ ಪ್ರಶ್ನೆ ಮೂಡಿತ್ತು. ಈ ಗೊಂದಲಕ್ಕೆ ತೆಲುಗಿನಲ್ಲಿ ತೆರೆ ಬಿದ್ದಿದೆ. ಕನ್ನಡದಲ್ಲಿ ಇನ್ನೂ ಬಾಕಿ ಇದೆ. ಈ ವರ್ಷದಿಂದ ಬಿಗ್ ಬಾಸ್ ನಿರೂಪಿಸಲ್ಲ ಅಂತ ಸುದೀಪ್ ಹೇಳಿದ್ದಾರೆ. ಹಾಗಾಗಿ ಗೊಂದಲ ಹಾಗೆಯೇ ಮುಂದುವರೆದಿದೆ. ಕೆಲ ವರ್ಷಗಳಿಂದ ತೆಲುಗು ಬಿಗ್ ಬಾಸ್ ಅನ್ನು ನಾಗಾರ್ಜುನ್ ನಡೆಸಿಕೊಡುತ್ತಿದ್ದರು. ಈ ಸೀಸನ್ ನಲ್ಲಿ ನಾಗಾರ್ಜುನ್ ಇರುವುದಿಲ್ಲ ಎಂದು ಹೇಳಲಾಗಿತ್ತು. ವಿಜಯ್ ದೇವರಕೊಂಡ ಅಥವಾ ಬಾಲಯ್ಯ ಶೋ ನಡೆಸಿಕೊಡಲಿದ್ದಾರೆ ಅಂತಾನೂ ಸುದ್ದಿ ಆಗಿತ್ತು. ಇದೀಗ ಬಿಗ್ ಬಾಸ್ ಪ್ರೋಮೋ ರಿಲೀಸ್ ಆಗಿದ್ದು, ನಾಗಾರ್ಜುನ್ ಅವರೇ ಪ್ರೋಮೋದಲ್ಲಿದ್ದಾರೆ. ಅಲ್ಲಿಗೆ ತೆಲುಗು ಶೋ ನಿರೂಪಣೆಯನ್ನು ನಾಗಾರ್ಜುನ್ ಮಾಡೋದು ಪಕ್ಕಾ ಆಗಿದೆ. ಕನ್ನಡದಲ್ಲೂ ಸುದೀಪ್ ಜಾಗಕ್ಕೆ ಯಾರನ್ನು ತರಬೇಕು ಅಂತ ತಲೆಕೆಡಿಸಿಕೊಂಡು ಕೂತಿದೆ ಕಲರ್ಸ್ ವಾಹಿನಿ. ಈ ನಡುವೆ ವಾಹಿನಿಯ ಮುಖ್ಯಸ್ಥರು ಸುದೀಪ್ ಅವರನ್ನು ಭೇಟಿ ಮಾಡಿದ ವಿಚಾರವೂ ಹರಿದಾಡುತ್ತಿದೆ. ವಾಹಿನಿಗೆ ಕೆಲವು ಕಂಡಿಷನ್ ಅನ್ನು ಸುದೀಪ್ ಹಾಕಿದ್ದಾರೆ ಅನ್ನೋ ಮಾತು ಕೇಳಿ ಬಂದಿದೆ. ಸುದೀಪ್ ಕಂಡಿಷನ್‌ಗೆ ಚಾನೆಲ್ ಕೂಡ ಒಪ್ಪುವ ಸಾಧ್ಯತೆ ಇದೆಯಂತೆ. ಹಾಗಾಗಿ ಕನ್ನಡದಲ್ಲಿ ಸುದೀಪ್ ಅವರೇ ಮುಂದುವರೆಯಲಿದ್ದಾರೆ ಅನ್ನೋದು ಆಪ್ತರ ಅನಿಸಿಕೆ.



ತಮಿಳಿನ ಡೈರೆಕ್ಟರ್ ಕಂ ಆಕ್ಟರ್

# ಕಿಲ್ಲರ್ ಸಿನಿಮಾ ಘೋಷಿಸಿದ ಸೂರ್ಯ

ಹತ್ತು ವರ್ಷಗಳ ನಂತರ, ತಮಿಳಿನ ಹೆಸರಾಂತ ನಿರ್ದೇಶಕ ಹಾಗೂ ನಟ ಎಸ್. ಜೆ. ಸೂರ್ಯ ಮತ್ತೆ ಡೈರೆಕ್ಟರ್ ಟೋಪಿ ತೊಟ್ಟು ಬಹುಮುಖ್ಯವಾದ ಹೊಸ ಸಿನಿಮಾದ ಮೂಲಕ ವಾಪಸ್ಸಾಗುತ್ತಿದ್ದಾರೆ. ಶ್ರೀ ಗೋಕುಲಂ ಮೂವೀಸ್ ಬ್ಯಾನರ್ ಅಡಿಯಲ್ಲಿ, ಗೋಕುಲಂ ಗೋಪಾಲನ್ ಮತ್ತು ಅಂಜೆಲ್ ಸ್ಟುಡಿಯೋಸ್ (ಎಸ್. ಜೆ. ಸೂರ್ಯ ಒಡೆತನದ) ಸಹಯೋಗದಲ್ಲಿ ಚಿತ್ರ ನಿರ್ಮಾಣವಾಗುತ್ತಿದೆ.

ಚಿತ್ರಕ್ಕೆ 'ಕಿಲ್ಲರ್ ಎಂದು ಶೀರ್ಷಿಕೆ ಇಡಲಾಗಿದೆ. ವಾಲಿ, ಖುಷಿ ಮತ್ತು ನ್ಯೂ ಎಂಬ ಯಶಸ್ವಿ ಚಿತ್ರಗಳನ್ನು ನಿರ್ದೇಶಿಸಿದ ಎಸ್. ಜೆ. ಸೂರ್ಯ ಈ ಚಿತ್ರದಲ್ಲಿ ನಾಯಕನಾಗಿ ಕಾಣಿಸಿಕೊಳ್ಳುವ ಜೊತೆಗೆ ಕಥೆ, ಚಿತ್ರಕಥೆ ಮತ್ತು ಸಂಭಾಷಣೆಯ ಜವಾಬ್ದಾರಿ ಹೊತ್ತಿದ್ದಾರೆ. ವಿ. ಸಿ. ಪ್ರವೀಣ್ ಮತ್ತು ಬೈಜು ಗೋಪಾಲನ್ ಈ ಚಿತ್ರದ ಸಹ-ನಿರ್ಮಾಪಕರಾಗಿದ್ದಾರೆ.

ಕೃಷ್ಣಮೂರ್ತಿ ಕಾರ್ಯನಿರ್ವಾಹಕ ನಿರ್ಮಾಪಕರಾಗಿದ್ದಾರೆ. 'ಕಿಲ್ಲರ್ ಸಿನಿಮಾ ದೊಡ್ಡ ಬಜೆಟ್‌ನಲ್ಲಿ ನಿರ್ಮಾಣವಾಗುತ್ತಿದ್ದು, ತಮಿಳು, ತೆಲುಗು, ಕನ್ನಡ, ಮಲಯಾಳಂ ಮತ್ತು ಹಿಂದಿ ಭಾಷೆಗಳಲ್ಲಿ ಬಿಡುಗಡೆಗೊಳ್ಳಲಿದೆ. ದೇಶದಾದ್ಯಂತ ಪ್ರೇಕ್ಷಕರನ್ನು ಆಕರ್ಷಿಸಲು ಸಿದ್ಧವಾಗಲಿರುವ ಈ ಚಿತ್ರದಲ್ಲಿ, ಭಾರತೀಯ ಚಿತ್ರರಂಗದ ಪ್ರತಿಭಾನ್ವಿತ ಕಲಾವಿದರು ಹಾಗೂ ತಾಂತ್ರಿಕ ತಂಡ ಇರಲಿದೆ. ಚಿತ್ರದ ಕುರಿತಾಗಿ ಹೆಚ್ಚಿನ ಮಾಹಿತಿ ಮುಂದಿನ ದಿನಗಳಲ್ಲಿ ಚಿತ್ರತಂಡ ನೀಡಲಿದೆ. ಇನ್ನು ಶ್ರೀ ಗೋಕುಲಂ ಮೂವೀಸ್ ಸಂಸ್ಥೆಯು ಮಲಯಾಳಂ ಚಿತ್ರರಂಗದಲ್ಲಿ ಹಲವು ಸಿನಿಮಾ ನಿರ್ಮಾಣ ಮಾಡುತ್ತಿದೆ. ಸುರೇಶ್ ಗೋಪಿ ಅಭಿನಯದ ಒಟ್ಟಕೊಂಬನ್, ಜಯಸೂರ್ಯ ಅಭಿನಯದ ಕಥನಾರ್, ದಿಲೀಪ್ ಅಭಿನಯದ ಭಾ ಭಾ ಬಾ ಸಿನಿಮಾ ಕೆಲಸಗಳಲ್ಲಿ ಬ್ಯುಸಿಯಾಗಿದೆ. ಇದೀಗ ಕಿಲ್ಲರ್ ಸಿನಿಮಾವನ್ನೂ ನಿರ್ಮಾಣ ಮಾಡುತ್ತಿದೆ.

# ಸ್ಕಿನ್ ಕಲರ್ ಬಟ್ಟೆಯಲ್ಲಿ ಪಡ್ಡೆಗಳ ನಿದ್ದೆ ಕೆಡಿಸಿದ ಸಮಂತಾ



ನಟನೆ ಜೊತೆ ಫ್ಯಾಶನ್ ಲೋಕದಲ್ಲಿ ಟಾಲಿವುಡ್ ನಟಿ ಸಮಂತಾ ಟ್ರೆಂಡ್ ಸೆಟರ್. ಇದೀಗ ಫ್ಯಾಶನ್ ಪ್ರಿಯರು ಬೆರಗಾಗುವಂತೆ ಉಡುಗೆ ಧರಿಸಿ ಪೋಸ್ ಕೊಟ್ಟಿದ್ದಾರೆ ಸಮಂತಾ. 38ನೇ ವಯಸ್ಸಿನಲ್ಲೂ ಭಾರೀ ಫಿಟ್ ಆಗಿರುವ ಸಮಂತಾ ಇದೀಗ ಸ್ಕಿನ್ ಬಣ್ಣದ ಧಿರಿಸಿನಲ್ಲಿ ಮಿಂಚಿದ್ದಾರೆ. ಮ್ಯಾಗ್‌ಜಿನ್‌ವೊಂದರ ಫೋಟೋಶೂಟ್‌ಗಾಗಿ ಸಮಂತಾ ಈ ರೀತಿ ಕಾಣಿಸಿಕೊಂಡಿದ್ದಾರೆ. ಭಾರೀ ಬೋಲ್ಡ್ ಲುಕ್ ಒಳಗೊಂಡ ಫೋಟೋಶೂಟ್‌ನಲ್ಲಿ ಸಮಂತಾ ಸ್ಕಿನ್ ಕಲರ್ ನೆಟೆಡ್ ಗೌನ್ ಧರಿಸಿದ್ದಾರೆ. ಯಾವುದೇ ಬಟ್ಟೆ ಧರಿಸಿದರೂ ಅದನ್ನ ಆತ್ಮವಿಶ್ವಾಸದಿಂದ ಕ್ಯಾರಿ ಮಾಡಿದರೆ ಮುಜುಗರ ಅನ್ನಿಸುವುದಿಲ್ಲ. ಇದೀಗ ಸಮಂತಾ ಧರಿಸಿದಿರುವ ಉಡುಗೆಯಂತೂ ಥಟ್ ಅಂತ ನೋಡಿದ್ರೆ ಬೆರಗಾಗೋದು ಗ್ಯಾರಂಟಿ. ಅಂಥಹ ಬೋಲ್ಡ್ ಲುಕ್‌ನಲ್ಲೂ ಸ್ಯಾಮ್ ಆತ್ಮವಿಶ್ವಾಸದಿಂದ ಪೋಸ್ ಕೊಟ್ಟಿದ್ದಾರೆ. ಕಡಿಮೆ ಸಿನಿಮಾಗಳು, ಆಗಾಗ ವೆಬ್ ಸಿರೀಸ್‌ಗಳು, ಕಂಪನಿ ಪ್ರಚಾರ ಸಮಂತಾ ಆಯ್ಕೆಯ ಲಿಸ್ಟ್‌ಗಳು. ಮಾಡೆಲಿಂಗ್ ಕ್ಷೇತ್ರದಲ್ಲಿ ಸೂಪರ್ ಮಾಡೆಲ್ ಆಗಿ ಮಿಂಚುವ ಸಮಂತಾ ಬೋಲ್ಡ್ ಉಡುಗೆಗಳಿಗೆ ಹೇಳಿ ಮಾಡಿಸಿದ ದೇಹಸಿರಿ ಕಾಪಾಡಿಕೊಂಡಿದ್ದಾರೆ. ಆದರೆ ಇಷ್ಟೊಂದು ಬೋಲ್ಡ್ ಅವತಾರದಲ್ಲಿ ಕಾಣಿಸ್ಕೊಂಡಿರೋದು ಇದೇ ಮೊದಲಲ್ಲ. ಆದರೀಗ ಸ್ಯಾಮ್ ಬೆಂಕಿ ಲುಕ್‌ಗೆ ಹೊಗಳಿಕೆಯ ಜೊತೆ ತೆಗಳಿಕೆಯೂ ಬರ್ತಿದೆ. ಅದ್ಯಾವುದಕ್ಕೂ ಸಮಂತಾ ತಲೆಕೆಡಿಸಿಕೊಳ್ಳೋದಿಲ್ಲ ಅನ್ನೋದು ಅಷ್ಟೇ ಸತ್ಯ.


ಸ್ಯಾಮ್ ಆತ್ಮವಿಶ್ವಾಸದಿಂದ ಪೋಸ್

# ಟೀಮ್ ಇಂಡಿಯಾ ಅಷ್ಟೊಂದು ಕ್ಯಾಚ್ ಬಿಡಲು ಕಾರಣ ಬಹಿರಂಗ

ಇಂಗ್ಲೆಂಡ್ ವಿರುದ್ಧದ ಮೊದಲ ಟೆಸ್ಟ್ನ ಮೊದಲ ಇನ್ನಿಂಗ್ಸ್‌ನಲ್ಲಿಯೇ ಯಶಸ್ವಿ ಜೈಸ್ವಾಲ್ 3 ಕ್ಯಾಚ್‌ಗಳನ್ನು ಕೈಬಿಟ್ಟರು, ಎರಡನೇ ಇನ್ನಿಂಗ್ಸ್‌ನಲ್ಲಿಯೂ ಅವರು ಒಂದು ಕ್ಯಾಚ್ ಅನ್ನು ಕೈಬಿಟ್ಟರು. ಅವರಷ್ಟೇ ಅಲ್ಲದೆ, ರವೀಂದ್ರ ಜಡೇಜಾ ಅವರಂತಹ ಅತ್ಯುತ್ತಮ ಫೀಲ್ಡರ್ ಕೂಡ ಈ ತಪ್ಪನ್ನು ಮಾಡಿದರು.

ಇಂಗ್ಲೆಂಡ್ ಪ್ರವಾಸವು ಭಾರತ ತಂಡಕ್ಕೆ ಉತ್ತಮವಾಗಿ ಆರಂಭವಾಗಿಲ್ಲ. ಹೊಸ ನಾಯಕನೊಂದಿಗೆ ಮತ್ತು ಸಾಕಷ್ಟು ಯುವ ಆಟಗಾರರೊಂದಿಗೆ ಕಣಕ್ಕಿಳಿದ ಟೀಮ್ ಇಂಡಿಯಾ, ಲೀಡ್ಸ್‌ನಲ್ಲಿ ನಡೆದ ಟೆಸ್ಟ್ ಸರಣಿಯ ಮೊದಲ ಪಂದ್ಯದಲ್ಲಿ 5 ವಿಕೆಟ್‌ಗಳ ಸೋಲನ್ನು ಎದುರಿಸಬೇಕಾಯಿತು.

ಈ ಸೋಲಿಗೆ ಹಲವು ಕಾರಣಗಳಲ್ಲಿ ತಂಡದ ಕಳಪೆ ಕ್ಯಾಚಿಂಗ್ ಕೂಡ ಒಂದು. ಭಾರತೀಯ ತಂಡ, ವಿಶೇಷವಾಗಿ ಯಶಸ್ವಿ ಜೈಸ್ವಾಲ್, ಎರಡೂ ಇನ್ನಿಂಗ್ಸ್‌ಗಳಲ್ಲಿ ಅನೇಕ ಕ್ಯಾಚ್‌ಗಳನ್ನು ಕೈಬಿಟ್ಟರು. ಆದರೆ ಕ್ಯಾಚಿಂಗ್ ತಂತ್ರವನ್ನು ಹೊರತುಪಡಿಸಿ, ಇದರ ಹಿಂದೆ ಒಂದು ವಿಷಯವಿದೆ, ಇದರ ಬೆಲೆ ಕೇವಲ 200-300 ರೂ. ಲೀಡ್ಸ್ ಟೆಸ್ಟ್‌ಗೆ ಭಾರತ ಪ್ರವೇಶಿಸಿದಾಗ, ಶುಭ್‌ಮನ್ ಗಿಲ್ ನೇತೃತ್ವದಲ್ಲಿ ಆರಂಭದಲ್ಲಿ ಇಷ್ಟೊಳ್ಳೆಯ ಪ್ರದರ್ಶನ ನೀಡುತ್ತಾರೆಂದು ಯಾರೂ ನಿರೀಕ್ಷಿಸಿರಲಿಲ್ಲ.



ಆದರೆ ಗೆಲುವು ದಾಖಲಿಸಲು ಸಾಧ್ಯವಾಗಲಿಲ್ಲ. ಈ ಸೋಲು ಟೀಮ್ ಇಂಡಿಯಾಕ್ಕೆ ನಿರಾಶಾದಾಯಕವಾಗಿತ್ತು. ಏಕೆಂದರೆ ಭಾರತ ಈ ಪಂದ್ಯದಲ್ಲಿ ಹಲವು ಬಾರಿ ಮುಂದಿತ್ತು ಮತ್ತು ಇಂಗ್ಲೆಂಡ್ ಅನ್ನು ಪಂದ್ಯದಿಂದ ಹೊರಗಿಡಬಹುದಿತ್ತು.

ಆದರೆ ಮೊದಲ ಇನ್ನಿಂಗ್ಸ್‌ನಲ್ಲಿಯೇ ಯಶಸ್ವಿ3 ಕ್ಯಾಚ್‌ಗಳನ್ನು ಕೈಬಿಟ್ಟರು, 2ನೇ ಇನ್ನಿಂಗ್ಸ್‌ನಲ್ಲಿಯೂ ಅವರು ಒಂದು ಕ್ಯಾಚ್ ಅನ್ನು ಕೈಬಿಟ್ಟರು. ಅವರಲ್ಲದೆ, ರವೀಂದ್ರ ಜಡೇಜಾ ಅವರಂತಹ ಅತ್ಯುತ್ತಮ ಫೀಲ್ಡರ್ ಕೂಡ ಈ ತಪ್ಪನ್ನು ಮಾಡಿದರು.

ಅಂದಿನಿಂದ, ಜೈಸ್ವಾಲ್ ಸೇರಿದಂತೆ ಭಾರತೀಯ ಫೀಲ್ಡರ್‌ಗಳ ತಂತ್ರ ಕಳಪೆಯಾಗಿದೆಯೇ ಎಂಬ ಪ್ರಶ್ನೆಗಳು ಏಳುತ್ತಿವೆ. ಫೀಲ್ಡಿಂಗ್ ತರಬೇತಿಯ ಕೊರತೆಯಿದೆಯೇ ಎಂಬ ಅನುಮಾನ ಎದ್ದಿದೆ. ಆದರೆ ಭಾರತದ ಮಾಜಿ ಕ್ರಿಕೆಟಿಗ ಮತ್ತು ಅತ್ಯುತ್ತಮ ಫೀಲ್ಡರ್‌ಗಳಲ್ಲಿ ಒಬ್ಬರಾದ ಮೊಹಮ್ಮದ್ ಕೈಫ್ ಗಮನಸೆಳೆದಿರುವ ಒಂದು ಕಾರಣವೆಂದರೆ ಕೈಯಲ್ಲಿರುವ ಬ್ಯಾಂಡೇಜ್ ಅಥವಾ ಟೇಪ್. ಕೈಗೆ ಕಟ್ಟಿರುವ ಬ್ಯಾಂಡೇಜ್ (ಟೇಪ್) ನಿಂದಾಗಿ ಕ್ಯಾಚ್‌ಗಳನ್ನು ತೆಗೆದುಕೊಳ್ಳಲು ತೊಂದರೆಯಾಗುತ್ತಿದೆ ಎಂದು ಕೈಫ್ ವಿಡಿಯೋದಲ್ಲಿ ಹೇಳಿದ್ದಾರೆ. ಕೈಫ್ ಪ್ರಕಾರ, ಕೈಯಲ್ಲಿ ಕಟ್ಟಿರುವ ಟೇಪ್ ಅಥವಾ ಬ್ಯಾಂಡೇಜ್ ಸ್ಪಂಜಿನಂತೆ ಕಾರ್ಯನಿರ್ವಹಿಸುತ್ತದೆ, ಇದರಿಂದಾಗಿ ಚೆಂಡು ಹೊರಗೆ ಪುಟಿಯುತ್ತದೆ. ಕೈಗಳ ಮೇಲಿನ ಬ್ಯಾಂಡೇಜ್‌ನಿಂದಾಗಿ ಬೆರಳುಗಳು ಗಟ್ಟಿಯಾಗುತ್ತವೆ ಮತ್ತು ಅವುಗಳ ಚಲನೆಯು ನಿರ್ಬಂಧಿಸಲ್ಪಡುತ್ತದೆ, ಇದರಿಂದಾಗಿ ಚೆಂಡನ್ನು ಹಿಡಿಯುವುದು ಸುಲಭವಲ್ಲ ಎಂದು ಅವರು ಹೇಳಿದರು. ಚೆಂಡಿನೊಂದಿಗೆ ಕೈಗಳ ನೈಸರ್ಗಿಕ ಸಂಪರ್ಕವನ್ನು ಕಾಪಾಡಿಕೊಳ್ಳಬೇಕು ಎಂದು ಕೈಫ್ ಒತ್ತಿ ಹೇಳಿದರು. ಸಾಮಾನ್ಯವಾಗಿ ಆಟಗಾರರು ಯಾವುದೇ ಗಾಯ ಅಥವಾ ನೋವು ಉಂಟಾದಾಗ ಈ ಟೇಪ್ ಅನ್ನು ತಮ್ಮ ಕೈ ಅಥವಾ ಬೆರಳುಗಳ ಸುತ್ತಲೂ ಸುತ್ತಿಕೊಳ್ಳುತ್ತಾರೆ. ಇದನ್ನು ಕಿನೆಸಿಯೊ ಟೇಪ್ ಎಂದು ಕರೆಯಲಾಗುತ್ತದೆ. ಇದು ನೋವನ್ನು ನಿಯಂತ್ರಿಸುವುದರ ಜೊತೆಗೆ ಅದರಿಂದ ಪರಿಹಾರವನ್ನು ನೀಡುತ್ತದೆ. ಈ ಟೇಪ್‌ಗಳು ಮೂಳೆಗಳು ಮತ್ತು ಸ್ನಾಯುಗಳನ್ನು ಸ್ಥಿರವಾಗಿಡಲು ಸಹ ಸಹಾಯ ಮಾಡುತ್ತದೆ. ಅದಕ್ಕಾಗಿಯೇ ಆಟಗಾರರು ಪಂದ್ಯ ಅಥವಾ ಅಭ್ಯಾಸದ ಸಮಯದಲ್ಲಿ ಗಾಯದ ನಂತರ ತಮ್ಮ ಕೈ ಅಥವಾ ಪಾದಗಳ ಮೇಲೆ ಈ ತಿಳಿ ಹಳದಿ ಅಥವಾ ನೀಲಿ ಬಣ್ಣದ ಟೇಪ್‌ಗಳನ್ನು ಹಚ್ಚಿಕೊಳ್ಳುವುದನ್ನು ಹೆಚ್ಚಾಗಿ ಕಾಣಬಹುದು.

ಕೇವಲ 200 ರೂ. ವಸ್ತು

# ಟಿ20 ಪವರ್‌ಪ್ಲೇ ನಿಯಮದಲ್ಲಿ ಬದಲಾವಣೆ ತಂದ ಐಸಿಸಿ

ಐಸಿಸಿ ಪುರುಷರ ಅಂತರರಾಷ್ಟ್ರೀಯ ಟಿ20 ಕ್ರಿಕೆಟ್‌ನಲ್ಲಿ ಪವರ್‌ಪ್ಲೇ ನಿಯಮದಲ್ಲಿ ಮಹತ್ವದ ಬದಲಾವಣೆ ಮಾಡಿದೆ. ಮಳೆ ಅಥವಾ ಇತರ ಕಾರಣಗಳಿಂದ ಓವರ್‌ಗಳು ಕಡಿಮೆಯಾದರೆ ಪವರ್‌ಪ್ಲೇ, ಓವರ್‌ಗಳ ಬದಲಿಗೆ ಚೆಂಡುಗಳ ಆಧಾರದ ಮೇಲೆ ನಿರ್ಧರಿಸಲಾಗುತ್ತದೆ. ಉದಾಹರಣೆಗೆ, 5 ಓವರ್‌ಗಳ ಪಂದ್ಯದಲ್ಲಿ 1.3 ಓವರ್‌ಗಳು ಪವರ್‌ಪ್ಲೇ ಆಗಿರುತ್ತದೆ. ಈ ನಿಯಮ ಜುಲೈ 2 ರಿಂದ ಜಾರಿಗೆ ಬರುತ್ತದೆ.



ಅಂತರರಾಷ್ಟ್ರೀಯ ಕ್ರಿಕೆಟ್ ಅನ್ನು ಮತ್ತಷ್ಟು ರೋಚಕಗೊಳಿಸುವ ಸಲುವಾಗಿ ಐಸಿಸಿ ತನ್ನ ಹಳೆಯ ನಿಯಮಗಳಲ್ಲಿ ಬದಲಾವಣೆಗಳನ್ನು ತರುವುದರೊಂದಿಗೆ ಹೊಸ ನಿಯಮಗಳನ್ನು ಜಾರಿಗೊಳಿಸುತ್ತಿದೆ. ಆ ಪ್ರಕಾರ, ಟೆಸ್ಟ್ ಕ್ರಿಕೆಟ್‌ನಲ್ಲಿ ಸಾಕಷ್ಟು ಬದಲಾವಣೆಗಳನ್ನು ಮಾಡಿ ಜಾರಿಗೆ ತಂದಿದ್ದ ಐಸಿಸಿ, ಇದೀಗ ಟಿ20 ಕ್ರಿಕೆಟ್‌ನ ನಿಯಮದಲ್ಲೂ ಒಂದು ಬದಲಾವಣೆ ಮಾಡಿದೆ. ಇತ್ತೀಚಿನ ದಿನಗಳಲ್ಲಿ ಟಿ20 ಕ್ರಿಕೆಟ್ ಸಾಕಷ್ಟು ಮನ್ನಣೆಗಳಿಸುತ್ತಿದೆ. ಪ್ರತಿ ದೇಶಗಳು ಸಹ ಟಿ20 ಲೀಗ್‌ಗಳನ್ನು ಆಯೋಜಿಸುವ ಮೂಲಕ ಜನರನ್ನು ಕ್ರಿಕೆಟ್‌ನತ್ತ ಸೆಳೆಯುತ್ತಿವೆ. ಇದನ್ನು ಅರಿತುಕೊಂಡಿರುವ ಐಸಿಸಿ ಇದೀಗ ಪುರುಷರ ಅಂತರರಾಷ್ಟ್ರೀಯ ಟಿ20 ಕ್ರಿಕೆಟ್ ಪಂದ್ಯಗಳ ಪವರ್‌ಪ್ಲೇ ನಿಯಮದಲ್ಲಿ ಪ್ರಮುಖ ಬದಲಾವಣೆ ಮಾಡಿದೆ.


ಟಿ20 ಕ್ರಿಕೆಟ್ ಸಾಕಷ್ಟು ಮನ್ನಣೆ

ಐಸಿಸಿ ತಂದಿರುವ ಹೊಸ ಬದಲಾವಣೆಯ ಪ್ರಕಾರ, ಟಿ20 ಅಂತರರಾಷ್ಟ್ರೀಯ ಪಂದ್ಯದಲ್ಲಿ ಮಳೆ ಅಥವಾ ಇನ್ನಾವುದೇ ಕಾರಣದಿಂದಾಗಿ ಇನ್ನಿಂಗ್ಸ್‌ನ ಓವರ್‌ಗಳನ್ನು ಕಡಿಮೆ ಮಾಡಿದರೆ, ಪವರ್‌ಪ್ಲೇ ಓವರ್‌ಗಳನ್ನು ಓವರ್‌ಗಳ ಬದಲಿಗೆ ಚೆಂಡುಗಳ ಆಧಾರದ ಮೇಲೆ ನಿರ್ಧರಿಸಲಾಗುತ್ತದೆ. ಪ್ರಸ್ತುತ ಜಾರಿಯಲ್ಲಿರುವ ನಿಯಮಗಳ ಪ್ರಕಾರ, 20 ಓವರ್‌ಗಳ ಇನ್ನಿಂಗ್ಸ್‌ನಲ್ಲಿ ಮೊದಲ 6 ಓವರ್‌ಗಳು ಪವರ್‌ಪ್ಲೇ ಆಗಿದ್ದವು. ಈ 6 ಓವರ್‌ಗಳಲ್ಲಿ ಫೀಲ್ಡಿಂಗ್ ಮಾಡುತ್ತಿರುವ ತಂಡವು 30 ಯಾರ್ಡ್ ವೃತ್ತದ ಹೊರಗೆ ಇಬ್ಬರಿಗಿಂತ ಹೆಚ್ಚು ಫೀಲ್ಡರ್‌ಗಳನ್ನು ಇರಿಸುವಂತಿಲ್ಲ. ಆ ಬಳಿಕ ಅಂದರೆ 6 ಓವರ್ ಮುಗಿದ ನಂತರ ಉಳಿದ ಓವರ್‌ಗಳಲ್ಲಿ, 30 ಯಾರ್ಡ್ ವೃತ್ತದ ಹೊರಗೆ ಐದು ಫೀಲ್ಡರ್‌ಗಳನ್ನು ನಿಲ್ಲಿಸಬಹುದು.

# ಎರಡು ಸಿಕ್ಸ್ ಹೊಡೆದು ಪಂದ್ಯ ಗೆಲ್ಲಿಸಿದ ಫಿಲಿಪ್ಸ್

ಅಮೆರಿಕದ ಮೇಜರ್ ಲೀಗ್ ಕ್ರಿಕೆಟ್ 2025 ರಲ್ಲಿ ವಾಷಿಂಗ್ಟನ್ ಫ್ರೀಡಂ ತಂಡವು ಲಾಸ್ ಏಂಜಲೀಸ್ ನೈಟ್ ರೈಡರ್ಸ್ ವಿರುದ್ಧ ರೋಚಕ ಜಯ ಸಾಧಿಸಿದೆ. ಗ್ಲೆನ್ ಫಿಲಿಪ್ಸ್ ಅವರ ಅದ್ಭುತ ಆಟ ಮತ್ತು ಕೊನೆಯ ಓವರ್‌ನಲ್ಲಿನ ಜಾಗರೂಕ ಆಟದಿಂದ ಗೆಲುವು ಸಾಧ್ಯವಾಯಿತು. ಅಮೆರಿಕದಲ್ಲಿ ನಡೆಯುತ್ತಿರುವ ಮೇಜರ್ ಲೀಗ್ ಕ್ರಿಕೆಟ್ 2025ರ 17ನೇ ಪಂದ್ಯ ರೋಚಕತೆಯ ಹಂತ ತಲುಪಿತ್ತು. ಲಾಸ್ ಏಂಜಲೀಸ್ ನೈಟ್ ರೈಡರ್ಸ್ ಹಾಗೂ ವಾಷಿಂಗ್ಟನ್ ಫ್ರೀಡಂ ಮಧ್ಯೆ ನಡೆದ ಪಂದ್ಯದಲ್ಲಿ ವಾಷಿಂಗ್ಟನ್ ಫ್ರೀಡಂ ಗೆದ್ದು ಬೀಗಿತು. ಈ ಪಂದ್ಯವನ್ನು ಬದಲಿಸಿದ ಖ್ಯಾತಿ ಗ್ಲೆನ್ ಫಿಲಿಪ್ಸ್‌ಗೆ ಸಲ್ಲುತ್ತದೆ. ಎರಡು ಸಿಕ್ಸ್ ಹೊಡೆದು ಅವರು ಪಂದ್ಯದ ಗತಿ ಬದಲಿಸಿದರು. ಗ್ಲೆನ್ ಮ್ಯಾಕ್ಸ್‌ವೆಲ್ ನಾಯಕತ್ವದ್ವ ವಾಷಿಂಗ್ಟನ್ ತಂಡ ಟಾಸ್ ಗೆದ್ದು ಫಿಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಆಯಂಡ್ರೆ ಫ್ಲೆಚರ್ ಅವರು 60 ಬಾಲ್‌ಗೆ 7 ಫೋರ್ ಹಾಗೂ 6 ಸಿಕ್ಸರ್‌ಗಳೊಂದಿಗೆ 104 ರನ್ ಕಲೆ ಹಾಕಿ ತಂಡಕ್ಕೆ ಆಸರೆ ಆದರು. ರಸೆಲ್ 13 ಬಾಲ್‌ಗೆ 30 ರನ್ ಕಲೆ ಹಾಕಿದರು. ಅಂತಿಮವಾಗಿ 20 ಓವರ್‌ನಲ್ಲಿ ತಂಡ 213 ರನ್ ಕಲೆ ಹಾಕಿತು. ಈ ಬೃಹತ್ ಮೊತ್ತ ಬೆನ್ನು ಹತ್ತಿದ ವಾಷಿಂಗ್ಟನ್ ಟೀಂ ಉತ್ತಮ ಆರಂಭವನ್ನೇ ಪಡೆಯಿತು.





# ಪಾಕ್ ವಿರುದ್ಧದ ಪಂದ್ಯಕ್ಕೂ ಮುನ್ನ ಟೀಂ ಇಂಡಿಯಾಗೆ ಬೆದರಿಕೆ

ಭಾರತ-ಪಾಕಿಸ್ತಾನ ನಡುವಿನ 2024 ರ ಟಿ20 ವಿಶ್ವಕಪ್ ಪಂದ್ಯಕ್ಕೂ ಮುನ್ನ, ಭಾರತ ತಂಡಕ್ಕೆ ಬೆದರಿಕೆಗಳು ಎದುರಾಗಿದ್ದವು. ಇದರಿಂದಾಗಿ ತಂಡದ ಆಟಗಾರರನ್ನು ಎರಡು ದಿನಗಳ ಕಾಲ ಹೋಟೆಲ್‌ನಲ್ಲಿಯೇ ಲಾಕ್ ಮಾಡಲಾಗಿತ್ತು. ನಾವೆಲ್ಲೂ ಹೊರಗೆ ಹೋಗುವಂತಿರಲಿಲ್ಲ. ಊಟವನ್ನು ಸಹ ರೂಮ್‌ನಿಂದಲೇ ಬುಕ್ ಮಾಡಬೇಕಾಗಿತ್ತು ಎಂದು ರೋಹಿತ್ ಶರ್ಮಾ ಹೇಳಿಕೊಂಡಿದ್ದಾರೆ.

2024 ರ ಜೂನ್ 29 ರಂದು ನಡೆದ ಐಸಿಸಿ ಟಿ20 ವಿಶ್ವಕಪ್ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು ಮಣಿಸಿದ್ದ ಟೀಂ ಇಂಡಿಯಾ 2ನೇ ಬಾರಿಗೆ ಟಿ20 ಚಾಂಪಿಯನ್ ಆಗಿ ಹೊರಹೊಮ್ಮಿತ್ತು. ಇನ್ನು ಇದೇ ಟೂರ್ನಿಯಲ್ಲಿ ಭಾರತ ಹಾಗೂ ಪಾಕಿಸ್ತಾನದ ನಡುವೆ ಹೈವೋಲ್ಟೇಜ್ ಕದನ ಕೂಡ ನಡೆದಿತ್ತು. ಆ ಕದನವನ್ನು ರೋಚಕ ರೀತಿಯಲ್ಲಿ ಗೆದ್ದುಕೊಳ್ಳುವಲ್ಲಿ ಟೀಂ ಇಂಡಿಯಾ ಯಶಸ್ವಿಯಾಗಿತ್ತು. ಆದರೆ ಈ ಪಂದ್ಯಕ್ಕೂ ಮುನ್ನ ಭಾರತ ತಂಡಕ್ಕೆ ಬೆದರಿಕೆ ಹಾಕಲಾಗಿತ್ತು. ಇದರಿಂದಾಗಿ ಇಡೀ ತಂಡವನ್ನು 2 ದಿನ ಹೋಟೆಲ್ ರೂಮ್‌ನಿಂದ ಹೊರಗೆ ಹೋಗಲು ಅವಕಾಶ ನೀಡಿರಲಿಲ್ಲ ಎಂಬ ಸ್ಫೋಟಕ ಮಾಹಿತಿ ಹೊರಬಿದ್ದಿದೆ. ಈ ಆಘಾತಕ್ಕಾರಿ ಮಾಹಿತಿಯನ್ನು ಸ್ವತಃ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ಅವರೇ ಬಹಿರಂಗಪಡಿಸಿದ್ದಾರೆ.

2 ದಿನ ಹೋಟೆಲ್‌ನಲ್ಲೇ ಲಾಕ್..!

**ಹೋಟೆಲ್‌ನಲ್ಲೇ ನಾವು ಲಾಕ್- ರೋಹಿತ್ ಶರ್ಮಾ**

ಜಿಯೋ ಹಾಟ್‌ಸ್ಟಾರ್‌ನಲ್ಲಿ ಮಾತನಾಡಿದ ರೋಹಿತ್ ಶರ್ಮಾ, ಾರತ ಮತ್ತು ಪಾಕಿಸ್ತಾನ ನಡುವಿನ ಟಿ20 ವಿಶ್ವಕಪ್ ಪಂದ್ಯಕ್ಕೂ ಮೊದಲು, ನಮಗೆ ಬೆದರಿಕೆಗಳು ಬಂದಿವೆ ಎಂದು ನಮಗೆ ತಿಳಿಸಲಾಯಿತು. ಆದ್ದರಿಂದ ಪಂದ್ಯಕ್ಕೆ ಎರಡು ದಿನಗಳ ಮೊದಲು, ನಾವು ಹೋಟೆಲ್‌ನಿಂದ ಹೊರಗೆ ಹೋಗುವುದನ್ನು ನಿಷೇಧಿಸಲಾಯಿತು. ಇದರಿಂದ ತಂಡದ ಯಾವುದೇ ಆಟಗಾರ ಹೋಟೆಲ್‌ನಿಂದ ಹೊರಗೆ ಹೋಗಲು ಸಾಧ್ಯವಾಗಲಿಲ್ಲ. ಹೀಗಾಗಿ ನಾವು ರೂಮ್‌ನಲ್ಲೇ ಕುಳಿತು ಆಹಾರವನ್ನು ಆರ್ಡರ್ ಮಾಡುತ್ತಿದ್ದೆವು ಮತ್ತು ಇಡೀ ಹೋಟೆಲ್ ತುಂಬಿ ಹೋಗಿತ್ತು. ನಡೆಯಲು ಸಹ ಸ್ಥಳವಿರಲಿಲ್ಲ. ಅಭಿಮಾನಿಗಳು, ಮಾಧ್ಯಮ, ಎಲ್ಲರೂ ಅಲ್ಲಿದ್ದರು. ಆದರೆ ನಾವು ಕ್ರೀಡಾಂಗಣದ ಬಳಿ ತಲುಪಿದ ತಕ್ಷಣ, ಭಾರತೀಯ ಅಭಿಮಾನಿಗಳು ಮತ್ತು ಪಾಕಿಸ್ತಾನಿ ಅಭಿಮಾನಿಗಳು ನಮ್ಮನ್ನು ನೋಡಿ ಕುಣಿಯಲಾರಂಭಿಸಿದರು ಮತ್ತು ಎಲ್ಲರೂ ತುಂಬಾ ಸಂತೋಷಪಟ್ಟರು ಎಂದು ಹೇಳಿಕೊಂಡಿದ್ದಾರೆ. ಇನ್ನು ಪಾಕಿಸ್ತಾನ ವಿರುದ್ಧದ ಪಂದ್ಯದ ಬಗ್ಗೆ ಮಾತನಾಡಿರುವ ರೋಹಿತ್, ನಾನು ಭಾರತ ಮತ್ತು ಪಾಕಿಸ್ತಾನ ನಡುವಿನ ಹಲವು ಪಂದ್ಯಗಳಲ್ಲಿ ಭಾಗವಹಿಸಿದ್ದೇನೆ. ಎಷ್ಟು ಪಂದ್ಯಗಳನ್ನು ಆಡಿದ್ದೇನೆ ಎಂಬುದು ನೆನಪಿಲ್ಲ, ಆದರೆ ಪಂದ್ಯದ ಮೊದಲು ಇದ್ದ ಶಕ್ತಿ ಮತ್ತು ಭಾವನೆ ನಿಜವಾಗಿಯೂ ವಿಭಿನ್ನವಾಗಿದೆ. ಅದನ್ನು ಹೋಲಿಸಲಾಗುವುದಿಲ್ಲ ಎಂದಿದ್ದಾರೆ. ಇದೇ ವೇಳೆ ಈ ಪಂದ್ಯದಲ್ಲಿ ಪಾಕಿಸ್ತಾನ ವಿರುದ್ಧದ ಪಂದ್ಯದಲ್ಲಿ ಮೂರನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಬಂದು 42 ರನ್‌ಗಳ ಗೆಲುವಿನ ಇನ್ನಿಂಗ್ಸ್ ಆಡಿದ್ದ ರಿಷಭ್ ಪಂತ್ ಅವರ ಬ್ಯಾಟಿಂಗ್ ಅನ್ನು ಸಹ ರೋಹಿತ್ ಶ್ಲಾಘಿಸಿದ್ದಾರೆ.

**ಭಾರತ- ಪಾಕ್ ಪಂದ್ಯ ಹೀಗಿತ್ತು**

ಪಾಕಿಸ್ತಾನ ವಿರುದ್ಧದ ಈ ಪಂದ್ಯದಲ್ಲಿ ಟೀಂ ಇಂಡಿಯಾ ಪರ ರಿಷಭ್ ಪಂತ್ ಹೊರತುಪಡಿಸಿ, ಅಕ್ಷರ್ ಪಟೇಲ್ 20 ರನ್ ಗಳಿಸಿದರೆ, ನಾಯಕ ರೋಹಿತ್ ಶರ್ಮಾ 13 ರನ್ ಗಳಿಸಿದರು. ಈ ಮೂವರು ಆಟಗಾರರನ್ನು ಹೊರತುಪಡಿಸಿ, ಬೇರೆ ಯಾವ ಬ್ಯಾಟ್ಸ್‌ಮನ್ ಕೂಡ 10 ರನ್‌ಗಳ ಗಡಿ ದಾಟಲು ಸಾಧ್ಯವಾಗಲಿಲ್ಲ. ಇದರ ಪರಿಣಾಮವಾಗಿ ಟೀಂ ಇಂಡಿಯಾ ಕೇವಲ 119 ರನ್ ಗಳಿಸಲಷ್ಟೇ ಶಕ್ತವಾಯಿತು. ಇದಕ್ಕೆ ಉತ್ತರವಾಗಿ, ಪಾಕಿಸ್ತಾನ ತಂಡವು 20 ಓವರ್‌ಗಳಲ್ಲಿ ಏಳು ವಿಕೆಟ್‌ಗಳಿಗೆ 113 ರನ್‌ಗಳನ್ನು ಮಾತ್ರ ಗಳಿಸಲು ಸಾಧ್ಯವಾಯಿತು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966